24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 46 | ನವದೆಹಲಿ | ಬೆಲೆ ₹10 | ಆಗಸ್ಟ್ 11 2026 ಮಂಗಳವಾರ

## ಒಳಪುಟಗಳಲ್ಲಿ

ಮಹಿಳಾ ಮೀಸಲಾತಿ ಕಾಯ್ದೆ: ರಾಹುಲ್-ರಿಜಿಜು ವಾಕ್ಸಮರ - ಪು.4

ಕಾವಡ್ ಯಾತ್ರೆ ಪೂರೈಸಿದ ಸಂಸದ ತೇಜಸ್ವಿ ಸೂರ್ಯ: ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ಗಂಗಾಜಲ ಅಭಿಷೇಕ - ಪು.5



ಗ್ರಾಹಕ ಚಿನ್ನಾಭರಣ ವಂಚನೆ ಆರೋಪ: ಚಿನ್ನತಂಬಿ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳುವಂತೆ ಶಾಸಕ ಶ್ರೀವತ್ಸ ಒತ್ತಾಯ - ಪು.6

# 2027ರ ಅಂತ್ಯಕ್ಕೆ ಕೋಲಾರ, ಚಿಕ್ಕಬಳ್ಳಾಪುರಕ್ಕೆ ಎತ್ತಿನಹೊಳೆ ನೀರು

- 7ನೇ ಗ್ಯಾರಂಟಿ ಎಂದ ಸಿಎಂ ಡಿ.ಕೆ. ಶಿವಕುಮಾರ್
- ಮಾಲೂಕಿನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ




**ಮಾಲೂರು (ಕೋಲಾರ), ಆ.10: ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಗಳ ಜತೆಗೆ ಆರನೇ ಗ್ಯಾರಂಟಿಯಾಗಿ ಭೂಗ್ಯಾರಂಟಿ ಹಾಗೂ ಏಳನೇ ಗ್ಯಾರಂಟಿಯಾಗಿ ನೀರಿನ ಗ್ಯಾರಂಟಿ ನೀಡುತ್ತಿದೆ. ಇದರ ಮೂಲಕ 2027ರ ಅಂತ್ಯದ ವೇಳೆಗೆ ಕೋಲಾರ ಹಾಗೂ ಚಿಕ್ಕಬಳ್ಳಾಪುರಕ್ಕೆ ಎತ್ತಿನಹೊಳೆ ನೀರು ಹರಿಸಲು ಸರ್ಕಾರ ಸಂಕಲ್ಪ ಮಾಡಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.**

ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನಲ್ಲಿ ಸೋಮವಾರ ನಡೆದ ವಿವಿಧ ಇಲಾಖೆಗಳ ಅಭಿವೃದ್ಧಿಯ ಯೋಜನೆಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಚಾಲನೆ ನೀಡಿ ಮಾತನಾಡಿದರು.

ಎತ್ತಿನಹೊಳೆ ಯೋಜನೆ ಸಾಧ್ಯವಿಲ್ಲ ಎಂದು ಜೆಡಿಎಸ್ ರಾಜ್ಯಾಧ್ಯಕ್ಷರು ಲೇವಡಿ ಮಾಡುತ್ತಿದ್ದಾರೆ. ಯಾವುದು ಸುಲಭವಾಗಿ ಸಿಗುವುದಿಲ್ಲ. ಈ ಯೋಜನೆ ಕಷ್ಟವಾಗಿದೆ. ಆದರೆ ಪ್ರಯತ್ನ ಮಾಡಬೇಕಲ್ಲವೇ ಪಶ್ಚಿಮ ಘಟ್ಟದಿಂದ ಹಾಸನದ ಮೂಲಕ ಕೋಲಾರ, ಚಿಕ್ಕಬಳ್ಳಾಪುರ ಕೆರೆಗಳನ್ನು ತುಂಬಿಸಲಾಗುವುದು. ತುಮಕೂರುವರೆಗೂ ನೀರು ತರುವ ಪ್ರಯತ್ನ ಮಾಡಲಾಗಿದೆ. ಈಗಾಗಲೇ ನಾವು ಕೆ.ಸಿ ವ್ಯಾಲಿ ಯೋಜನೆ ಮೂಲಕ 104 ಕೆರೆಗಳಿಗೆ ನೀರು ತುಂಬಿಸಲಾಗಿದೆ. ಎಚ್.ಎನ್. ವ್ಯಾಲಿ 65 ಕೆರೆ ತುಂಬಿಸುವ ಕೆಲಸ ನಡೆಯುತ್ತಿದೆ. 700ಕ್ಕೂ ಹೆಚ್ಚು ಕೆರೆಗಳಲ್ಲಿ ಸಂಸ್ಕರಿಸಿದ ನೀರನ್ನು ತುಂಬಿಸಲು ಮುಂದಾಗಿದ್ದೇವೆ. ಅಂತರ್ಜಲ ಹೆಚ್ಚಿಸಬೇಕು, ಕೆರೆಗಳಿಗೆ ಹಾಗೂ ರೈತರಿಗೆ ನೀರು ತಲುಪಬೇಕು. ಹೀಗಾಗಿ ಆಗಸ್ಟ್ 15ರಂದು ನಮ್ಮ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳನ್ನು ಪ್ರಕಟಿಸಲಿದ್ದೇವೆ. ಜಲ ಜೀವಕ್ಕೆ ನೆಮ್ಮದಿ, ನೀರಿಲ್ಲದೆ ಬದುಕಿಲ್ಲ. ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜನರ ನೀರಿನ ಸಮಸ್ಯೆಗೆ ವಿವಿಧ ರೀತಿಯ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.

**ಆದರ್ಶ ಶಾಸಕ ನಂಜೇಗೌಡರು:** ನಂಜೇಗೌಡರು ರಾಜ್ಯಕ್ಕೆ ಆದರ್ಶ ಶಾಸಕರು. ಕೋವಿಡ್ ಸಮಯದಲ್ಲಿ ರೈತರ ಬೆಳೆಗೆ ಮಾರುಕಟ್ಟೆ ಇಲ್ಲದೇ ಇರುವಾಗ ತರಕಾರಿ ಖರೀದಿ ಮಾಡಿ ಬೆಂಗಳೂರಿನಲ್ಲಿ ಜನರಿಗೆ ಉಚಿತವಾಗಿ ಹಂಚಿದ್ದಾರೆ. ನಿಮಗೆ ಮಾತು ಕೊಟ್ಟಿದ್ದಂತೆ ನಂಜೇಗೌಡರು ನಡೆದುಕೊಂಡಿದ್ದಾರೆ. ಅದಕ್ಕೆ ಈ ಕಾರ್ಯಕ್ರಮ ಉದಾಹರಣೆ. ಸಿಕ್ಕ ಅವಕಾಶದಲ್ಲಿ ಇಂತಹ ಯೋಜನೆಗಳ ಮೂಲಕ ದಾಖಲೆ ಬಿಟ್ಟಿದ್ದಾರೆ. ವಿರೋಧ ಪಕ್ಷದವರು ಟೀಕೆ ಮಾಡಲಿ, ನಮ್ಮ ತಪ್ಪು ಕಂಡು ಹಿಡಿದರೆ ತಿದ್ದುಕೊಳ್ಳೋಣ. ಆದರೆ ಕಳೆದ ಮೂರು ವರ್ಷಗಳಲ್ಲಿ ವಿರೋಧ ಪಕ್ಷಗಳ ಟೀಕೆಗಳು ಸತ್ತಿವೆ, ನಮ್ಮ ಸಾಧನೆಗಳು ಶಾಶ್ವತವಾಗಿ ಉಳಿದಿವೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

**ಕೋಲಾರದ ರೈತರು ರಾಜ್ಯಕ್ಕೆ ಮಾದರಿ:** ಕೋಲಾರ ಜಿಲ್ಲೆಯ ರೈತರನ್ನು ರಾಜ್ಯದ ಜನತೆ ಸ್ಮರಿಸಬೇಕು. ಇಲ್ಲಿ ಅಂತರ್ಜಲಮಟ್ಟ 2 ಸಾವಿರ ಅಡಿಗೆ ಕುಸಿದಾಗ ರೈತರು ಆತ್ಮಹತ್ಯೆ ಮಾಡಿಕೊಳ್ಳದೇ ಬೆಂಗಳೂರಿಗೆ ಹಾಲು, ತರಕಾರಿ, ರೇಷ್ಮೆ, ಹೂ ಬೆಳೆದು ಸ್ವಾಭಿಮಾನ ಮೆರೆದಿದ್ದಾರೆ. ಹೋರಾಟವಿಲ್ಲದೆ ಪ್ರಗತಿ ಸಾಧ್ಯವಿಲ್ಲ. ಬದಲಾವಣೆಗಳು ಅವಕಾಶ ಸೃಷ್ಟಿಸುತ್ತವೆ. ಒಳ್ಳೆಯದನ್ನು ಉಳಿಸಿಕೊಳ್ಳಲು ಕೆಟ್ಟವರ ಜೊತೆ ಹೋರಾಟ ಮಾಡಬೇಕು. ರೈತರ ಕಣ್ಣೀರು ಒರೆಸುವ ಸರ್ಕಾರ ನಿಮ್ಮ ಮುಂದೆ ನಿಂತಿದೆ. ಕೃಷಿ ನಿಮ್ಮೆಲ್ಲರ ಸಂಸ್ಕೃತಿ, ರೈತರು ನಮ್ಮೆಲ್ಲರ ಆಸ್ತಿ ಎಂದು ಮುಖ್ಯಮಂತ್ರಿಗಳು ಬಣ್ಣಿಸಿದರು.

ಜಿಲ್ಲೆಯ ಪ್ರತಿ ಶಾಸಕರೂ ಮುಖ್ಯಮಂತ್ರಿಗಳು ಹಾಗೂ ಸಚಿವರು. ಅವರಿಗೆ ಶಕ್ತಿ ತುಂಬುವ ಕೆಲಸ ನಾನು ಮಾಡುವೆ. ಸರ್ಕಾರ ನಿಮ್ಮ ಮನೆ ಬಾಗಿಲಿಗೆ ಬರಲಿದೆ. ಜಿಲ್ಲಾ ಮಂತ್ರಿಗಳು ಪ್ರತಿ ತಾಲ್ಲೂಕಿನಲ್ಲಿ 15 ದಿನಕ್ಕೊಮ್ಮೆ ಜನರ ಅಹವಾಲು ಸ್ವೀಕರಿಸಲಿದ್ದಾರೆ. ಅದಕ್ಕಾಗಿ ಪ್ರಜಾಸೇವೆ ಇಲಾಖೆ ಪ್ರಾರಂಭಿಸುತ್ತಿದ್ದೇವೆ ಎಂದರು. ಬಜೆಟ್‌ನಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಘೋಷಣೆಯಾಗಿದೆ. ಕೋಲಾರ ಎಪಿಎಂಸಿಗೆ 60 ಎಕರೆ ಮಂಜೂರಿಗೆ ಸಿದ್ಧತೆಯಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### ಹುಂಡಿ ಕಳ್ಳರಿಗೆ ತಕ್ಕ ಶಿಕ್ಷೆ ನೀಡಿ

ಈ ದೇಶದಲ್ಲಿ ಮತ ಕಳ್ಳತನ ನಡೆಯಿತು, ಹುಂಡಿ ಕಳ್ಳತನವೂ ಆಗಿದೆ. ನಮ್ಮ ಜನ ರಾಮ, ರಾಮ ಎಂದು ದೇಣಿಗೆ ಕೊಟ್ಟರು. ಅದನ್ನು ಕಳ್ಳತನ ಮಾಡಿದ್ದಾರೆ. ಹೀಗಾಗಿ ನಮ್ಮ ಸರ್ಕಾರ ಹುಂಡಿ ಹಾಗೂ ನಿಮ್ಮ ಕಾಣಿಕೆ ಕಾಪಾಡಲು ದೊಡ್ಡ ದೇವಾಲಯಗಳಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಿ ಅದನ್ನು ಪೊಲೀಸ್ ಠಾಣೆಗೆ ಸಂಪರ್ಕ ಕಲ್ಪಿಸಲಾಗಿದೆ. ಈ ವಿಚಾರದಲ್ಲಿ ನೀವು ಹೋರಾಟ ಮಾಡಿ ತೀರ್ಪು ನೀಡಬೇಕು. ದೇವರ ಹುಂಡಿಗೆ ಕೈಹಾಕಿದವರಿಗೆ ತಕ್ಕ ಶಿಕ್ಷೆ ನೀಡಬೇಕು ಎಂದು ಡಿ.ಕೆ. ಶಿವಕುಮಾರ್ ಕರೆಕೊಟ್ಟರು.

### ಖಾಸಗಿ ನೌಕರಿಗೆ ಉದ್ಯೋಗ ವಿನಿಮಯ ಕೇಂದ್ರ

ಖಾಸಗಿ ಕಂಪನಿಗಳಲ್ಲಿ ಯುವಕರಿಗೆ ಉದ್ಯೋಗ ನೀಡಲು ಸರ್ಕಾರ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸಲು ಮುಂದಾಗಿದೆ. ಖಾಸಗಿ ಕಂಪನಿಗಳಲ್ಲಿ ಉದ್ಯೋಗ ಪಡೆಯಲು ಯುವಕರಿಗೆ ಅಗತ್ಯ ತರಬೇತಿ ನೀಡಲಾಗುವುದು. 72 ಸಾವಿರ ಸರ್ಕಾರಿ ಹುದ್ದೆಗಳ ಭರ್ತಿಗೆ ಸರ್ಕಾರ ಮುಂದಾಗಿದೆ. ನಮ್ಮ ಸರ್ಕಾರದಲ್ಲಿ ಕೇವಲ ನಾನು ಹಾಗೂ ಸಿದ್ದರಾಮಯ್ಯ ಅವರು ಮಾತ್ರ ಸಾಧನೆ ಮಾಡಿಲ್ಲ. ನಮ್ಮ ಸರ್ಕಾರದಲ್ಲಿ ನಮ್ಮ ಸಚಿವರು ತಮ್ಮ ಇಲಾಖೆಗಳಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿದ್ದಾರೆ ಎಂದು ಡಿ.ಕೆ. ಶಿವಕುಮಾರ್ ಮೆಚ್ಚುಗೆ ವ್ಯಕ್ತಪಡಿಸಿದರು.

### ಯೋಜನೆಗಳ ಸೌಲಭ್ಯ ಪಡೆಯಲು ಮತದಾನದ ಹಕ್ಕು ಉಳಿಸಿಕೊಳ್ಳಿ

ನನ್ನದು ಹೊಸ ಸರ್ಕಾರ ಅಲ್ಲ. ಸಿದ್ದರಾಮಯ್ಯ ನೇತೃತ್ವದಲ್ಲಿ 3 ವರ್ಷ ನಡೆದ ಸರ್ಕಾರದ ಮುಂದುವರಿದ ಭಾಗ. ರಾಜ್ಯದಲ್ಲಿ ಎಸ್ಐಆರ್ ನಡೆಯುತ್ತಿದೆ. ನೀವು ನಿಮ್ಮ ಮತ ಉಳಿಸಿಕೊಳ್ಳದಿದ್ದರೆ, ನೀವು ಅನೇಕ ಯೋಜನೆಗಳಿಂದ ವಂಚಿತರಾಗುತ್ತೀರಿ. ನಿಮ್ಮ ಮತ ನಿಮ್ಮ ಹಕ್ಕು. ನಿಮ್ಮ ಹಕ್ಕನ್ನು ಉಳಿಸಿಕೊಳ್ಳಿ. ಕರಡುಪಟ್ಟಿಯಲ್ಲಿ 1 ಕೋಟಿಗೂ ಹೆಚ್ಚು ಹೆಸರು ತೆಗೆಯಲಾಗುತ್ತಿದೆ. ನಿಮ್ಮ ಜಾತಿ ಪ್ರಮಾಣಪತ್ರ, ವಾಸ ದೃಢೀಕರಣ ಪತ್ರ ನೀಡಲು ಸರ್ಕಾರ ಮುಂದಾಗಿದೆ. ಸರ್ಕಾರ ಚುನಾವಣಾ ಆಯೋಗದ ಜತೆ ಕೈಜೋಡಿಸಲಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

# ಮೇಲ್ಮನೆ ಹಂಗಾಮಿ ಸಭಾಪತಿಯಾಗಿ ಪುಟ್ಟಣ್ಣ ರಾಜ್ಯಪಾಲರ ಆದೇಶ



ಬೆಂಗಳೂರು, ಆ.10: ವಿಧಾನ ಪರಿಷತ್ತಿನಲ್ಲಿ ಕಾಂಗ್ರೆಸ್ ಪಕ್ಷವು ಸ್ಪಷ್ಟ ಬಹುಮತ ಪಡೆದುಕೊಂಡ ಬೆನ್ನಲ್ಲೇ, ಕಾಂಗ್ರೆಸ್ ಹೈಕಮಾಂಡ್ ಸಭಾಪತಿ ಸ್ಥಾನಕ್ಕೆ ಹಿರಿಯ ನಾಯಕ ಸಲೀಂ ಅಹ್ಮದ್ ಅವರ ಹೆಸರನ್ನು ಪ್ರಕಟಿಸಿದ್ದು, ಈ ಬೆಳವಣಿಗೆ ನಡುವೆ ರಾಜ್ಯಪಾಲರು ಮೇಲ್ಮನೆಯ ಹಂಗಾಮಿ ಸಭಾಪತಿಯಾಗಿ ಪುಟ್ಟಣ್ಣ ಅವರನ್ನು ನೇಮಕ ಮಾಡಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ನಾಯಕರ ಒತ್ತಡಕ್ಕೆ ಮಣಿದ ಬಸವರಾಜ ಹೊರಟ್ಟಿ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಪುಟ್ಟಣ್ಣ ಅವರು ಹಂಗಾಮಿ ಸಭಾಪತಿಯಾಗಿ ತನ್ನ ಚಟುವಟಿಕೆಗಳನ್ನು ಆರಂಭಿಸಿದ್ದಾರೆ.

ಆಗಸ್ಟ್ 14ರ ರಂದು ವಿಧಾನ ಪರಿಷತ್ತಿನ ನೂತನ ಸಭಾಪತಿ ಮತ್ತು ಉಪಸಭಾಪತಿಗಳ ಆಯ್ಕೆಗೆ ಅಧಿಕೃತವಾಗಿ ಚುನಾವಣೆ ನಡೆಯಲಿದೆ. ಜೊತೆಗೆ ಉಪಸಭಾಪತಿ ಹುದ್ದೆಯೂ ಖಾಲಿ ಇರುವುದರಿಂದ, ಹೊಸದಾಗಿ ಕಾಯಂ ಸಭಾಪತಿ ಮತ್ತು ಉಪಸಭಾಪತಿಗಳ ಚುನಾವಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಹಿರಿಯ ಸದಸ್ಯರಾದ ಪುಟ್ಟಣ್ಣ ಅವರನ್ನು ನೇಮಕ ಮಾಡಿ ರಾಜ್ಯಪಾಲ ಥಾವರ್ ಚೆಂದ್ ಗೆಹ್ಲೋಟ್ ಆದೇಶ ಹೊರಡಿಸಿದ್ದಾರೆ. ಈ ಮೂಲಕ ಹೊಸ ಸಭಾಪತಿ ಆಯ್ಕೆ ಆಗುವವರೆಗೂ ಸದನದ ಪ್ರಕ್ರಿಯೆಗಳು ಸಲೀಸಾಗಿ ಮುಂದುವರಿಯಲಿವೆ.

ಕಾಂಗ್ರೆಸ್ ಹೈಕಮಾಂಡ್ ಈಗಾಗಲೇ ವಿಧಾನ ಪರಿಷತ್ ಸಭಾಪತಿ ಸ್ಥಾನದ ಅಧಿಕೃತ ಅಭ್ಯರ್ಥಿಯಾಗಿ ತನ್ನ ಹಿರಿಯ ನಾಯಕ ಸಲೀಂ ಅಹ್ಮದ್ ಹೆಸರನ್ನು ಪ್ರಕಟಿಸಿದೆ. ಇಂದು ಸಲೀಂ ಅಹಮದ್ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಮುಖಂಡರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು.

ಉಪಸಭಾಪತಿ ಸ್ಥಾನಕ್ಕೆ ಮಾಜಿ ಸಚಿವೆ ಉಮಾಶ್ರೀ ಅವರನ್ನು ಕಾಂಗ್ರೆಸ್ ಅಭ್ಯರ್ಥಿಯನ್ನಾಗಿ ಕಣಕ್ಕಿಳಿಸಿದೆ. ಇದರ ನಡುವೆಯೇ, ಉಮಾಶ್ರೀ ಅವರು ಡಿ.ಕೆ. ಶಿವಕುಮಾರ್ ಸರ್ಕಾರದಲ್ಲಿ ಮಹಿಳಾ ಕೋಟಾದಲ್ಲಿ ಸಚಿವ ಸ್ಥಾನದ ಆಕಾಂಕ್ಷಿಯೂ ಆಗಿದ್ದಾರೆ.

ಕರ್ನಾಟಕ ವಿಧಾನ ಪರಿಷತ್ತಿನಲ್ಲಿ (ಮೇಲ್ಮನೆ) ಆಡಳಿತಾರೂಢ ಕಾಂಗ್ರೆಸ್ ಪಕ್ಷವು ಒಟ್ಟು 75 ಸ್ಥಾನಗಳ ಪೈಕಿ 38 ಸ್ಥಾನಗಳನ್ನು ಹೊಂದುವ ಮೂಲಕ ಸ್ಪಷ್ಟ ಬಹುಮತವನ್ನು ಪಡೆದಿದೆ. ಇದರೊಂದಿಗೆ ಮೇಲ್ಮನೆಯಲ್ಲಿ ಕಾಂಗ್ರೆಸ್ 38, ಬಿಜೆಪಿ 24, ಜೆಡಿಎಸ್ 6, ಪಕ್ಷೇತರ 1 ಹಾಗೂ 5 ಸ್ಥಾನಗಳು ಖಾಲಿ ಇವೆ.

### ಕರ್ನಾಟಕದಿಂದ 4.5 ಟಿಎಂಸಿ ಕಾವೇರಿ ನೀರು ಬಿಡುಗಡೆಗೆ ಆಗ್ರಹ

# ಆ.13ರಂದು ಸುಪ್ರೀಂನಲ್ಲಿ ತಮಿಳುನಾಡು ಅರ್ಜಿ ವಿಚಾರಣೆ



**ನವದೆಹಲಿ, ಆ.10:** ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶದಂತೆ ತಕ್ಷಣವೇ ನೀರು ಹರಿಸಲು ಕರ್ನಾಟಕಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ತಮಿಳುನಾಡು ಸರ್ಕಾರ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಗುರುವಾರ (ಆ.13)ನಡೆಸಲು ಸುಪ್ರೀಂ ಕೋರ್ಟ್ ಸಮ್ಮತಿಸಿದೆ.

ತಮಿಳುನಾಡು ಸರ್ಕಾರದ ಪರವಾಗಿ ಹಾಜರಿದ್ದ ಹಿರಿಯ ವಕೀಲ ಸಿ.ಎಸ್. ವೈದ್ಯನಾಥನ್ ಅವರು ವಿಷಯವನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರ ನೇತೃತ್ವದ ಪೀಠದ ಮುನ್ನೆಲೆಗೆ ತಂದು ತುರ್ತು ವಿಚಾರಣೆಗೆ ಮನವಿ ಮಾಡಿದರು. ಈ ಮನವಿಯನ್ನು ಆಲಿಸಿದ ನ್ಯಾಯಪೀಠವು ಗುರುವಾರ ವಿಚಾರಣೆ ಕೈಗೆತ್ತಿಕೊಳ್ಳುವುದಾಗಿ ತಿಳಿಸಿತು.

ಜುಲೈ 30 ರಂದು ನಡೆದ ಸಭೆಯಲ್ಲಿ, ಕರ್ನಾಟಕದ ಕಬಿನಿ ಹಾಗೂ ಕೃಷ್ಣರಾಜ ಸಾಗರ ಜಲಾಶಯಗಳಿಂದ ದಿನಕ್ಕೆ 3,500 ಕ್ಯೂಸೆಕ್‌ನಂತೆ 15 ದಿನ ನೀರು ಬಿಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಆದೇಶಿಸಿತ್ತು. ಈ ನಿರ್ಧಾರವನ್ನು ಜಾರಿ ಮಾಡುವಂತೆ ತಮಿಳುನಾಡು ಸರ್ಕಾರವು ಆಗಸ್ಟ್ 3ರಂದು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ದಿನಕ್ಕೆ 3,500 ಕ್ಯೂಸೆಕ್‌ನಂತೆ 15 ದಿನಗಳಿಗೆ ಒಟ್ಟು 4.536 ಟಿಎಂಸಿ ನೀರನ್ನು ಆಗಸ್ಟ್ 12 ರೊಳಗೆ ಬಿಡುಗಡೆ ಮಾಡಲು ಕರ್ನಾಟಕಕ್ಕೆ ನಿರ್ದೇಶನ ನೀಡಬೇಕೆಂದು ತಮಿಳುನಾಡು ಕೋರಿದೆ. ರಾಜ್ಯದ ವಿರೋಧ ಪಕ್ಷವಾದ ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಕೂಡ ಇದೇ ರೀತಿ ಪ್ರತ್ಯೇಕ ಅರ್ಜಿಯೊಂದನ್ನು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದೆ.

# ಡಿಜಿಟಲ್ ಬ್ಯಾಂಕ್ ದಾಖಲೆಗೆ ಬೆಂಬಲ ನೀಡುವ ಮಸೂದೆಗೆ ಅಂಗೀಕಾರ

**ನವದೆಹಲಿ, ಆ.10:** ಬ್ಯಾಂಕರ್ಸ್ ಬುಕ್ಸ್ ಎವಿಡೆನ್ಸ್ ಬಿಲ್–2026ಕ್ಕೆ ಸಂಸತ್ತು ಸೋಮವಾರ ಅಂಗೀಕಾರ ನೀಡಿದೆ. ರಾಜ್ಯಸಭೆಯು ಧ್ವನಿ ಮತದ ಮೂಲಕ ಈ ಮಸೂದೆಯನ್ನು ಅಂಗೀಕರಿಸಿತು. ಭಾರತದ ಹೆಚ್ಚುತ್ತಿರುವ ಡಿಜಿಟಲ್ ಬ್ಯಾಂಕಿಂಗ್ ವ್ಯವಸ್ಥೆಗಾಗಿ ವಿನ್ಯಾಸಗೊಳಿಸಲಾದ 135 ವರ್ಷಗಳಷ್ಟು ಹಳೆಯದಾದ ಬ್ಯಾಂಕರ್ಸ್ ಬುಕ್ಸ್ ಎವಿಡೆನ್ಸ್ ಆಕ್ಟ್ 1891ನ್ನು ಕಾನೂನು ಚೌಕಟ್ಟಿನೊಂದಿಗೆ ಬದಲಾಯಿಸಲು ಈ ಹಾದಿ ಸುಗಮವಾದಂತಾಗಿದೆ.



ಆ.5ರಂದು ಲೋಕಸಭೆಯಲ್ಲಿ ಈ ಮಸೂದೆ ಅಂಗೀಕಾರವಾಗಿತ್ತು. ಈಗ ಎರಡೂ ಸದನಗಳು ಮಸೂದೆಯನ್ನು ಅಂಗೀಕರಿಸುವುದರೊಂದಿಗೆ, ನ್ಯಾಯಾಲಯಗಳು ಮತ್ತು ಇತರ ಕಾನೂನು ಪ್ರಕ್ರಿಯೆಗಳಲ್ಲಿ ಬ್ಯಾಂಕಿಂಗ್ ದಾಖಲೆಗಳನ್ನು ಪುರಾವೆಯಾಗಿ ಬಳಸುವುದನ್ನು ನಿಯಂತ್ರಿಸುವ ನಿಯಮಗಳನ್ನು ಆಧುನೀಕರಿಸಲು ಸರ್ಕಾರ ಮುಂದಾಗಿದೆ.

ಮಸೂದೆಯು ಬ್ಯಾಂಕರ್ಸ್ ಪುಸ್ತಕಗಳಿಗೆ ತಂತ್ರಜ್ಞಾನ–ತಟಸ್ಥ ಚೌಕಟ್ಟನ್ನು ಸೃಷ್ಟಿಸುತ್ತದೆ ಮತ್ತು ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ದಾಖಲೆಗಳನ್ನು ಔಪಚಾರಿಕವಾಗಿ ಗುರುತಿಸುತ್ತದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು. ಪ್ರಸ್ತಾವಿತ ಕಾನೂನಿನಡಿ, ಸಂಬಂಧಿತ ನಮೂದು ಅಥವಾ ಮಾಹಿತಿಯನ್ನು ನಿಖರವಾಗಿ ಪುನರುತ್ಪಾದಿಸಿದರೆ ಅಥವಾ ಮೂಲ ದಾಖಲೆಯಿಂದ ಸರಿಯಾಗಿ ರಚಿಸಿದ್ದರೆ ಡಿಜಿಟಲ್ ಪ್ರತಿಯನ್ನು ಪುರಾವೆಯಾಗಿ ಸ್ವೀಕರಿಸಬಹುದು. ವಿರೋಧ ಪಕ್ಷದ ಗದ್ದಲದ ನಡುವೆ ಲೋಕಸಭೆಯಲ್ಲಿ ನಾಲ್ಕು ಮಸೂದೆಗಳನ್ನು ಮಂಡಿಸಲಾಯಿತು, ಇದರಲ್ಲಿ ನ್ಯಾಯಮಂಡಳಿ ಸುಧಾರಣೆ ಮತ್ತು ಕೇರಳ ಹೆಸರು ಬದಲಾವಣೆ ಪ್ರಸ್ತಾವನೆ ಸೇರಿದೆ.

### ನಾಲ್ಕು ಮಸೂದೆಗಳು

**ನ್ಯಾಯಮಂಡಳಿ ಸುಧಾರಣೆ ಮಸೂದೆ, 2026, ಗಣಿ ಮತ್ತು ಖನಿಜಗಳು (ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಮಸೂದೆ, 2026, ಕೇರಳ (ಹೆಸರು ಬದಲಾವಣೆ) ಮಸೂದೆ, 2026, ಮತ್ತು ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ (ತಿದ್ದುಪಡಿ) ಮಸೂದೆ, 2026 ಮತ್ತು ವಿರೋಧ ಪಕ್ಷದ ಸಂಸದರು ಸದನದಲ್ಲಿ ತಮ್ಮ ಪ್ರತಿಭಟನೆಗಳನ್ನು ಮುಂದುವರಿಸಲು ಧ್ವನಿಮತದ ಮೂಲಕ ಮಂಡಿಸಲಾಯಿತು. ಲೋಕಸಭೆಯಲ್ಲಿ ನಿರಂತರ ಪ್ರದರ್ಶನಗಳ ನಡುವೆ ನಾಲ್ಕು ಮಸೂದೆಗಳ ಪರಿಚಯ, ಅಲ್ಲಿ ಮಳೆಗಾಲದ ಅಧಿವೇಶನದಲ್ಲಿ ಹಲವಾರು ವಿರೋಧ ಪಕ್ಷಗಳು ಬೇಡಿಕೆಗಳನ್ನು ಒದಗಿಸುತ್ತಿವೆ.**

# ಭಾರಿ ಮಳೆ ಸಾಧ್ಯತೆ: ದೆಹಲಿಯಲ್ಲಿ ರೆಡ್ ಅಲರ್ಟ್ ಘೋಷಣೆ

**ನವದೆಹಲಿ, ಆ.10:** ದೆಹಲಿಯಲ್ಲಿ ಸೋಮವಾರ ಮಳೆ ಸುರಿಯುತ್ತಿದ್ದು, ಗುಡುಗು, ಮಿಂಚು ಮತ್ತು ವೇಗವಾದ ಗಾಳಿಯೊಂದಿಗೆ ತೀವ್ರವಾದ ಹವಾಮಾನ ಚಟುವಟಿಕೆಯ ಬಗ್ಗೆ ಭಾರತ ಹವಾಮಾನ ಇಲಾಖೆ (ಐಎಂಡಿ) ರಾಷ್ಟ್ರೀಯ ರಾಜಧಾನಿಗೆ ರೆಡ್ ಅಲರ್ಟ್ ನೀಡಿದೆ.

ಹವಾಮಾನ ವೈಪರೀತ್ಯದ ಸಮಯದಲ್ಲಿ ಗಂಟೆಗೆ 60–80 ಕಿ.ಮೀ ವೇಗದಲ್ಲಿ ಗಾಳಿ ಬೀಸಬಹುದು ಎಂದು ಹವಾಮಾನ ಕಚೇರಿ ಎಚ್ಚರಿಸಿದೆ. ಇದು ನೀರಿನ ಅಡಚಣೆ, ಸಂಚಾರ ಅಡಚಣೆ ಮತ್ತು ಪ್ರಯಾಣಿಕರಿಗೆ ಅಪಾಯಕಾರಿ ಪರಿಸ್ಥಿತಿಗಳನ್ನು ತಂದೊಡ್ಡಬಹುದು ಎಂದು ಐಎಂಡಿ ಮುನ್ಸೂಚನೆ ನೀಡಿದೆ. ದೆಹಲಿಯ ಹೆಚ್ಚಿನ ಭಾಗಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ ಮತ್ತು ಬೆಳಿಗ್ಗೆಯಿಂದ ಮಧ್ಯಾಹ್ನದವರೆಗೆ ಕೆಲವು ಸ್ಥಳಗಳಲ್ಲಿ ಮಧ್ಯಮ ಮಳೆಯಾಗುವ ಸಾಧ್ಯತೆಯಿದೆ ಎಂದು ಹೇಳಿದೆ.



ಸೋಮವಾರದಂದು ದೆಹಲಿ–ಎನ್‌ಸಿಆರ್‌ನಾದ್ಯಂತ ಚದುರಿದಂತೆ ಅಲ್ಲಲ್ಲಿ ಮಳೆಯಾಗಿದೆ. ಮಯೂರ್ ವಿಹಾರ್‌ನಲ್ಲಿ ಬೆಳಿಗ್ಗೆ 8.30ರಿಂದ ಸಂಜೆ 5.30ರವರೆಗೆ 38 ಮಿ.ಮೀ ಮಳೆಯಾಗಿದ್ದರೆ, ನೋಯ್ಡಾದಲ್ಲಿ 26 ಮಿ.ಮೀ ಮಳೆಯಾಗಿದೆ. ರಿಡ್ಜ್‌ನಲ್ಲಿ 6.8 ಮಿ.ಮೀ, ಲೋಧಿ ರಸ್ತೆಯಲ್ಲಿ 4.8 ಮಿ.ಮೀ, ಸಫ್ದರ್‌ಜಂಗ್ ಮತ್ತು ಪುಸಾದಲ್ಲಿ ತಲಾ 4 ಮಿ.ಮೀ ಮಳೆಯಾಗಿದೆ. ಸಫ್ದರ್‌ಜಂಗ್‌ನಲ್ಲಿ ಗರಿಷ್ಠ ತಾಪಮಾನವು 35.4 ಡಿಗ್ರಿ ಸೆಲ್ಸಿಯಸ್ ತಲುಪಿದ್ದು, ಸಾಮಾನ್ಯಕ್ಕಿಂತ 1.2 ಡಿಗ್ರಿ ಹೆಚ್ಚಿದ್ದರೆ, ಕನಿಷ್ಠ ತಾಪಮಾನವು 27.6 ಡಿಗ್ರಿ ಸೆಲ್ಸಿಯಸ್ ಮತ್ತು ಸಾಮಾನ್ಯಕ್ಕಿಂತ 0.6 ಡಿಗ್ರಿ ಸೆಲ್ಸಿಯಸ್ ಹೆಚ್ಚಿದೆ. ಕನಿಷ್ಠ ತಾಪಮಾನವು ಕಳೆದ 24 ಗಂಟೆಗಳಲ್ಲಿ 1.1 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿದೆ.

ದೆಹಲಿಯಲ್ಲಿ ಹಗಲು ವೇಳೆ 15–20 ಕಿ.ಮೀ ವೇಗದಲ್ಲಿ ಗಾಳಿ ಬೀಸಿದರೆ, ಮಧ್ಯಾಹ್ನ 3.30ಕ್ಕೆ ಪಾಲಂನಲ್ಲಿ 33 ಕಿ.ಮೀ ವೇಗದಲ್ಲಿ ಬೀಸಿದೆ. ಆ.11ರಂದು ಗರಿಷ್ಠ ತಾಪಮಾನ 33ರಿಂದ 35 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವು ಸಾಧ್ಯತೆಯಿದೆ. ಆದರೆ ಕನಿಷ್ಠ ತಾಪಮಾನವು 23ರಿಂದ 25 ಡಿಗ್ರಿ ಸೆಲ್ಸಿಯಸ್ ದಾಖಲಾಗಬಹುದು. ಆಗಸ್ಟ್ 12 ರಂದು, ಮಧ್ಯಾಹ್ನದಿಂದ ಸಂಜೆಯವರೆಗೆ ಒಂದೆರಡು ಬಾರಿ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಐಎಂಡಿ ಮುನ್ಸೂಚನೆ ನೀಡಿದೆ.

# ಯಾವುದೇ ಕ್ಷಣದಲ್ಲಿ ಖಾತೆ ಹಂಚಿಕೆ: ಕೆಲ ಸಚಿವರ ಖಾತೆಗಳಲ್ಲೂ ಬದಲಾವಣೆ ಸಾಧ್ಯತೆ

**ಬೆಂಗಳೂರು, ಆ.10:** ಸಂಪುಟದ ನೂತನ ಸಚಿವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಯಾವುದೇ ಕ್ಷಣದಲ್ಲಿ ಖಾತೆ ಹಂಚಿಕೆ ಮಾಡಲಿದ್ದು, ಹಾಲಿ ಸಚಿವರ ಪೈಕಿ ಕೆಲವರ ಖಾತೆಗಳು ಅದಲು–ಬದಲಾಗಲಿವೆ.



ಆಗಸ್ಟ್ 3ರಂದು ಸಂಪುಟ ವಿಸ್ತರಣೆಯಾಗಿದ್ದು, 8 ದಿನ ಕಳೆದರೂ, ಖಾತೆ ಇಲ್ಲದೆ ಸಚಿವರು ಜಿಲ್ಲೆಗಳಲ್ಲಿ ಬರ ಅಧ್ಯಯನದ ಪ್ರವಾಸ ಮಾಡುತ್ತಿದ್ದಾರೆ. ವಿಧಾನಮಂಡಲ ಅಧಿವೇಶನಕ್ಕೆ ಮೂರು ದಿನ ಮಾತ್ರ ಬಾಕಿಯಿದ್ದು, ಖಾತೆಗಳ ಮಾಹಿತಿ ತಿಳಿಯದೆ ನೂತನ ಸಚಿವರು ಗೊಂದಲದಲ್ಲಿದ್ದಾರೆ.

ಭಾನುವಾರ ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಡರಾತ್ರಿ ಒಂದು ಗಂಟೆಯವರೆಗೂ ಪಕ್ಷದ ವರಿಷ್ಠರನ್ನೂ ಭೇಟಿ ಮಾಡಿ, ಖಾತೆ ಹಂಚಿಕೆ ಕುರಿತು ಚರ್ಚೆ ನಡೆಸಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕರ್ನಾಟಕ ಕಾಂಗ್ರೆಸ್‌ನ ಉಸ್ತುವಾರಿ ನಾಯಕ ರಣದೀಪ್ ಸಿಂಗ್ ಸುರ್ಜೇವಾಲಾ ಅವರನ್ನು ತಡರಾತ್ರಿಯೇ ಭೇಟಿ ಮಾಡಿ ಚರ್ಚೆ ನಡೆಸಿರುವ ಡಿ.ಕೆ.ಶಿವಕುಮಾರ್ ಅವರು, ಸೋಮವಾರ ಬೆಳಗ್ಗೆ ಕೆ.ಸಿ ವೇಣುಗೋಪಾಲ್ ಅವರ ಮನೆಗೆ ಭೇಟಿ ನೀಡಿ ಸಮಾಲೋಚನೆ ನಡೆಸಿದರು.

### ಟಿ.ಬಿ. ಜಯಚಂದ್ರಗೆ ವಿಧಾನಸಭಾಧ್ಯಕ್ಷ ಸ್ಥಾನ?



ಖಾತೆ ಹಂಚಿಕೆ, ವಿಧಾನಸಭೆ, ವಿಧಾನ ಪರಿಷತ್ತಿನ ಅಧ್ಯಕ್ಷರ ಆಯ್ಕೆ ಸಂಪುಟದಲ್ಲಿ ಖಾಲಿಯಿರುವ ಒಂದು ಸ್ಥಾನಕ್ಕೆ ನೇಮಕಾತಿ ಮತ್ತು ನಿಗಮ–ಮಂಡಳಿಗಳ ಅಧ್ಯಕ್ಷರ ಆಯ್ಕೆಯ ಬಗ್ಗೆ ಚರ್ಚಿಸಿದ್ದಾರೆ. ವಿಧಾನಸಭಾ ಅಧ್ಯಕ್ಷ ಸ್ಥಾನಕ್ಕೆ ಈ ಮೊದಲು ಜಿ.ಎಸ್.ಪಾಟೀಲ್ ಅವರನ್ನು ಅಧ್ಯಕ್ಷರೆಂದು ಘೋಷಿಸಲಾಗಿತ್ತು. ಆದರೆ ಟಿ.ಬಿ.ಜಯಚಂದ್ರ ಅವರನ್ನು ಸಮಾಧಾನ ಪಡಿಸಲು ವಿಧಾನಸಭೆ ಅಧ್ಯಕ್ಷ ಸ್ಥಾನ ನೀಡುವ ಚರ್ಚೆಗಳಾಗಿವೆ. ಜಿ.ಎಸ್.ಪಾಟೀಲ್ ಅವರನ್ನು ಸಮಾಧಾನ ಪಡಿಸುವ ಹೊಣೆಗಾರಿಕೆಯನ್ನು ಎಚ್.ಕೆ.ಪಾಟೀಲ್‌ಗೆ ವಹಿಸಲಾಗುತ್ತಿದೆ. ಸಚಿವ ಸಂಪುಟದ ಖಾತೆ ಹಂಚಿಕೆ ಬಗ್ಗೆ ಹೈಕಮಾಂಡ್ ನಾಯಕರು ಡಿ.ಕೆ.ಶಿವಕುಮಾರ್ ಅವರಿಗೆ ಕೆಲ ನಿರ್ದೇಶನಗಳನ್ನು ನೀಡಿದ್ದು, ಪ್ರಸ್ತಾವಿತ ಪಟ್ಟಿಗೆ ಅನುಮೋದನೆ ನೀಡಿದ್ದಾರೆ ಎಂದು ತಿಳಿದು ಬಂದಿದೆ.

### ಸಚಿವ ಸ್ಥಾನ ಬಿಡಲ್ಲ, ಮುಂದುವರಿಯುವೆ: ಕೆ.ಎಚ್. ಮುನಿಯಪ್ಪ



ಮೂಲಗಳ ಪ್ರಕಾರ ರಾಮಲಿಂಗಾರೆಡ್ಡಿ ಯವರಿಗೆ ಜಲ ಸಂಪನ್ಮೂಲ ಬದಲಾಗಿ ವಸತಿ ಖಾತೆ ನೀಡುವ ಸಾಧ್ಯತೆ ಇದೆ. ಸಚಿವ ಕೆ.ಎಚ್. ಮುನಿಯಪ್ಪ ಆಹಾರ ಮತ್ತು ನಾಗರಿಕ ಪೂರೈಕೆ ಬೇಡ, ಸಮಾಜ ಕಲ್ಯಾಣ ಇಲಾಖೆ ಬೇಕು ಎಂದು ಪಟ್ಟು ಹಿಡಿದಿದ್ದರು. ಡಿ.ಕೆ.ಶಿವಕುಮಾರ್ ಅವರ ಜೊತೆ ಮುನಿಯಪ್ಪ ದೆಹಲಿಗೂ ತೆರಳಿದ್ದರು. ಸಮಾಜ ಕಲ್ಯಾಣ ಇಲಾಖೆಯ ಮೇಲೆ ಕಣ್ಣಿಟ್ಟಿರುವ ಪಿ.ಎಂ.ನರೇಂದ್ರ ಸ್ವಾಮಿ, ಶಿವರಾಜ್ ತಂಗಡಗಿ ಅವರು ಕೂಡ ದೆಹಲಿ ಪ್ರವಾಸದಲ್ಲಿ ಮುಖ್ಯಮಂತ್ರಿಯವರ ಜೊತೆಗಿದ್ದರು. ಮಹಿಳಾ ಕೋಟಾದಡಿ ಸಚಿವ ಸ್ಥಾನ ನೀಡಲು ಮುನಿಯಪ್ಪ ಅವರ ಪುತ್ರಿ ರೂಪಕಲಾ ಅವರನ್ನು ಹೈಕಮಾಂಡ್ ಗುರುತಿಸಿದೆ. ಮುನಿಯಪ್ಪ ಅವರಿಗೆ ಸಚಿವ ಸ್ಥಾನ ತೊರೆದು ಮುಂದಿನ ಲೋಕಸಭಾ ಚುನಾವಣೆಗೆ ತಯಾರಿ ನಡೆಸುವಂತೆ ಸಲಹೆ ನೀಡಲಾಗಿತ್ತು. ಮುನಿಯಪ್ಪ ಅವರಿಂದ ತೆರವಾದ ಸಚಿವ ಸ್ಥಾನಕ್ಕೆ ಪುತ್ರಿ ರೂಪಕಲಾ ಅವರನ್ನು ನಿಯೋಜಿಸುವುದಾಗಿ ಹೈಕಮಾಂಡ್ ಭರವಸೆ ನೀಡಿತ್ತು. ಆದರೆ ಮುನಿಯಪ್ಪ ಇದನ್ನು ತಳ್ಳಿ ಹಾಕಿದ್ದು, ಸಚಿವ ಸ್ಥಾನ ನಾನು ಬಿಡುವುದಿಲ್ಲ. ತಾವೇ ಮುಂದುವರೆಯುವುದಾಗಿ ಸ್ಪಷ್ಟಪಡಿಸಿದ್ದಾರೆ. ಸಚಿವ ಸ್ಥಾನದಲ್ಲಿ ಮುಂದುವರೆಯುವುದಾದರೆ, ಸಮಾಜ ಕಲ್ಯಾಣ ಇಲಾಖೆ ಕೇಳಬಾರದು ಎಂದು ಷರತ್ತು ವಿಧಿಸಲಾಗಿದ್ದು, ಅದಕ್ಕೆ ಮುನಿಯಪ್ಪ ಒಪ್ಪಿದ್ದಾರೆ ಎಂದು ತಿಳಿದು ಬಂದಿದೆ. ರಾಮಲಿಂಗಾರೆಡ್ಡಿಯವರ ಬಳಿ ಇರುವ ಜಲ ಸಂಪನೂಲ ಖಾತೆಯನ್ನು ಮುನಿಯಪ್ಪ ಅಥವಾ ಶಿವರಾಜ್ ತಂಗಡಗಿ ಅವರಿಗೆ ನೀಡುವ ಸಾಧ್ಯತೆ ಇದೆ.


### ಸಂಭಾವ್ಯ ಖಾತೆಗಳು

- ಎಚ್.ಸಿ.ಬಾಲಕೃಷ್ಣ ಅವರಿಗೆ ಅರಣ್ಯ, ಪರಿಸರ ಜೀವಶಾಸ್ತ್ರ ಖಾತೆ ನೀಡುವುದಾಗಿ ಹೇಳಲಾಗಿತ್ತು, ಆದರೆ ಕೊನೆ ಕ್ಷಣದಲ್ಲಿ ಉನ್ನತ ಶಿಕ್ಷಣ ಖಾತೆಗೆ ಅವರ ಹೆಸರು ಕೇಳಿ ಬರುತ್ತಿದೆ.
- ಲಕ್ಷ್ಮಣ ಸವದಿ –ಸಹಕಾರ,
- ವಿಜಯಾನಂದ ಕಾಶಪ್ಪನವರ್–ಕೃಷಿ ಮಾರುಕಟ್ಟೆ,
- ಬಸವರಾಜ ರಾಯರೆಡ್ಡಿ –ಕನ್ನಡ–ಸಂಸ್ಕೃತಿ ಇಲಾಖೆ,
- ಕೆ.ಎಸ್.ಬಸಂತಪ್ಪ – ಪೌರಾಡಳಿತ,
- ರುದ್ರಪ್ಪ ಲಮಾಣಿಗೆ–ಅಬಕಾರಿ,
- ಟಿ.ರಘುಮೂರ್ತಿ–ಪರಿಶಿಷ್ಟ ಪಂಗಡಗಳ ಅಭಿವೃದ್ಧಿ,
- ರಿಜ್ವಾನ್ ಅರ್ಷದ್– ಹಜ್ ಮತ್ತು ವಕ್ಫ್,
- ಪುಟ್ಟರಂಗಶೆಟ್ಟಿ –ಹಿಂದುಳಿದ ವರ್ಗಗಳ ಕಲ್ಯಾಣ,
- ಅಜಯ್‌ಸಿಂಗ್– ಆಹಾರ ಮತ್ತು ನಾಗರಿಕ ಪೂರೈಕೆ,
- ಸಂತೋಷ್‌ಲಾಡ್–ಕಾರ್ಮಿಕ ಸೇರಿದಂತೆ ಕೆಲ ಖಾತೆಗಳ ಹಂಚಿಕೆ ಕುರಿತು ಚರ್ಚೆಗಳಾಗಿವೆ.

ಉಳಿದಂತೆ

- ಚಲುವರಾಯಸ್ವಾಮಿ– ಕೃಷಿ,
- ಮಧುಬಂಗಾರಪ್ಪ– ಶಾಲಾ ಶಿಕ್ಷಣ, ಸಾಕ್ಷರತೆ,
- ಜಮೀರ್ ಅಹಮದ್ ಖಾನ್–ಅಲ್ಪಸಂಖ್ಯಾತರ ಅಭಿವೃದ್ಧಿ ಖಾತೆ ಹಂಚಿಕೆಯಾಗುವ ಸಾಧ್ಯತೆ ಇದೆ.
- ಬಿ.ನಾಗೇಂದ್ರ ಪರಿಸ್ಥಿತಿ ಡೋಲಾಯಮಾನವಾಗಿದೆ.

## ನಿತ್ಯ ಪಂಚಾಂಗ 11.08.2026 ಮಂಗಳವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ**

**ಆಷಾಢ ಬಹುಳ, ಚತುರ್ದಶಿ, ಪುನರ್ವಸು ನಕ್ಷತ್ರ, ಮಾಸ ಶಿವರಾತ್ರಿ, ರಾಜಮಹೇಂದ್ರ ಸತ್ಯತೀರ್ಥ ಪುಣ್ಯದಿನ, ಪದಿನೆಟ್ಟಾಂ ಪೆರಕ್, ಚಡಚಣ ಸಂಗಮೇಶ್ವರ ಉತ್ಸವ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ರಾಜ್ಯದ ಗಡಿಭಾಗದಲ್ಲಿ 2ನೇ ವಿಮಾನ ನಿಲ್ದಾಣ ನಿರ್ಮಾಣದಿಂದ ಪ್ರಯೋಜನವೇನು?

### ತುಮಕೂರಿನಲ್ಲೇ ನಿರ್ಮಾಣ ಮಾಡುವಂತೆ ಡಿಸಿಎಂ ಡಾ. ಜಿ.ಪರಮೇಶ್ವರ್ ಪತ್ರ



**ಬೆಂಗಳೂರು, ಆ.10:** ಎರಡನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ರಾಜ್ಯದ ಗಡಿಭಾಗದಲ್ಲಿ ಮಾಡುವುದರಿಂದ ಏನು ಉಪಯೋಗವಾಗುತ್ತದೆ ಎಂದು ಪ್ರಶ್ನಿಸುವ ಮೂಲಕ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರಿಗೆ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಸೋಮಣ್ಣ ಅವರು 2ನೇ ಏರ್‌ಪೋರ್ಟ್ ತುಮಕೂರಿನಲ್ಲೇ ಮಾಡಬೇಕು ಎಂದು ಪತ್ರ ಬರೆದಿದ್ದಾರೆ. ನಾನು ಈ ಬಗ್ಗೆ ಮೊದಲಿನಿಂದಲೂ ಹೇಳುತ್ತಾ ಬಂದಿದ್ದೇನೆ. ತಾಂತ್ರಿಕವಾಗಿ ಮತ್ತು ಅದರ ಉಪಯೋಗ ಎಷ್ಟರ ಮಟ್ಟಿಗೆ ಆಗಲಿದೆ ಎನ್ನುವುದನ್ನು ನೋಡಬೇಕಾಗುತ್ತದೆ.

ತುಮಕೂರಿನಲ್ಲೇ ಆದರೆ 20 ಜಿಲ್ಲೆಗಳಿಗೆ ಅನುಕೂಲವಾಗುತ್ತದೆ. ಈಗಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೂ ಸಂಪರ್ಕ ಕಲ್ಪಿಸಲು ಸುಲಭವಾಗುತ್ತದೆ. ಆದರೆ ಡಿಜಿಸಿಎ ನವರು ತಾಂತ್ರಿಕವಾಗಿ ಇದು ಸಾಧ್ಯನಾ ಇಲ್ಲವಾ ಎಂಬುದರ ಬಗ್ಗೆ ಪರಿಶೀಲಿಸುತ್ತಾರೆ ಎಂದು ತಿಳಿಸಿದರು.

ಬಿಡದಿಯ ಬಳಿ ವಿಮಾನ ನಿಲ್ದಾಣ ನಿರ್ಮಾಣ ಸಾಧ್ಯವಿಲ್ಲ ಎಂದು ಈ ಮೊದಲು ತಾಂತ್ರಿಕ ಸಮಿತಿ ನಿರಾಕರಣೆ ಮಾಡಿತ್ತು. ಈಗ ಮತ್ತೆ ಅಲ್ಲಿಯೇ ವಿಮಾನ ನಿಲ್ದಾಣ ಮಾಡಿ ಎಂದರೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು. ತುಮಕೂರಿನ ಶಿರಾ ಬಳಿ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಪಕ್ಷಾತೀತವಾಗಿ ಮೊದಲಿನಿಂದಲೂ ಒತ್ತಡ ಹೇರಲಾಗುತ್ತಿದೆ ಎಂದರು.

**ನೈಸ್‌ಗೆ ಮೊದಲಿಂದಲೂ ವಿರೋಧ, ಹೊಸತಲ್ಲ**

ನೈಸ್ ರಸ್ತೆ ವಿಚಾರವಾಗಿ ಕುಮಾರಸ್ವಾಮಿ ಅವರು ಟೋಲ್ ಕಟ್ಟಬೇಡಿ ಎಂದು ಜನರಿಗೆ ಕರೆ ಕೊಡುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅದೇನೂ ಹೊಸತಲ್ಲ, ಹಿಂದಿನಿಂದಲೂ ವಿರೋಧಿಸುತ್ತಾ ಬಂದಿದ್ದಾರೆ. ಆದಷ್ಟು ಬೇಗ ಯೋಜನೆಯನ್ನು ಪರಿಹರಿಸಲು ಪ್ರಯತ್ನಿಸುತ್ತಿದ್ದೇವೆ. ನನ್ನನ್ನೇ ಉಪಸಮಿತಿಯ ಅಧ್ಯಕ್ಷನಾಗಿ ಮುಂದುವರಿಸಿದ್ದಾರೆ. ಈಗಾಗಲೇ 7–8 ಸಭೆಗಳನ್ನು ಮಾಡಿದ್ದೇನೆ. ಅಲ್ಲಿ ಎ, ಬಿ, ಸಿ ಎಂದು ಮೂರು ವಿಭಾಗಗಳನ್ನು ಮಾಡಿದ್ದೇವೆ. ಬಿಡದಿವರೆಗೂ ಎ ಭಾಗ, ಮುಂದಕ್ಕೆ ಬಿ, ಮೈಸೂರು ಹತ್ತಿರಕ್ಕೆ ಸಿ ವಿಭಾಗವನ್ನಾಗಿ ವಿಂಗಡಿಸಲಾಗಿದೆ. ಅಲ್ಲಿ ಯಾವ ರೀತಿಯ ಸಮಸ್ಯೆಗಳು ಆಗಿವೆ ಎಂಬ ಬಗ್ಗೆ ಚರ್ಚೆ ಮಾಡುತ್ತೇವೆ. ರೈತರಿಗೆ ನಿವೇಶನ ನೀಡುವುದು, ಭೂಮಿ ಸಮರ್ಪಕ ಬಳಕೆ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ. ಎಷ್ಟನ್ನು ಹಿಂಪಡೆಯಬೇಕು ಎಂಬೆಲ್ಲಾ ವಿಚಾರಗಳನ್ನು ಅಧ್ಯಯನ ನಡೆಸಲಾಗುತ್ತಿದೆ ಎಂದರು. ಸರ್ಕಾರದ ಮುಂದೆ ಎರಡು ಆಯ್ಕೆಗಳಿವೆ. ಯೋಜನೆಯನ್ನು ರದ್ದು ಪಡಿಸುವುದು ಅದರಲ್ಲಿ ಒಂದು, ಇಷ್ಟು ವರ್ಷಗಳ ನಂತರ ಯೋಜನೆಯನ್ನು ನಿಲ್ಲಿಸಲು ಆಗುವುದಿಲ್ಲ. ಈಗ ಯೋಜನೆ ರದ್ದುಗೊಳಿಸಿದರೆ, ಇಷ್ಟು ವರ್ಷ ಯಾವ ಪುರುಷಾರ್ಥಕ್ಕೆ ಯೋಜನೆ ನಡೆಯಿತು ಎಂಬ ಪ್ರಶ್ನೆ ಉದ್ಭವಿಸುತ್ತದೆ.

ರದ್ದುಗೊಳಿಸುವ ಬದಲು, ಕಾನೂನು ಚೌಕಟ್ಟಿನಲ್ಲಿ ಇದೆಲ್ಲದರ ಬಗ್ಗೆ ಪರಿಶೀಲಿಸಿ, ಸಮಸ್ಯೆಯನ್ನು ಬಗೆಹರಿಸಲು ಪ್ರಯತ್ನಿಸುತ್ತೇವೆ ಎಂದರು. ಯೋಜನೆ ಪೂರ್ಣಗೊಳಿಸಲು 23 ಸಾವಿರ ಎಕರೆ ಭೂಮಿ ನೀಡಬೇಕು ಎಂಬ ಷರತ್ತು ಇದೆ.

ಈಗ ನೀಡಿರುವ ಭೂಮಿಯಲ್ಲಾಗಿರುವ ಉಪಯೋಗ, ದುರುಪಯೋಗದ ಬಗ್ಗೆ ಮುಂದೆ ಪರಿಶೀಲನೆ ಮಾಡಲಾಗುತ್ತದೆ. ಈಗ ಯೋಜನೆಯನ್ನು ಪೂರ್ಣಗೊಳಿಸಬೇಕು ಎಂಬುದು ನಮ ಮುಂದಿರುವ ಆಯ್ಕೆ ಎಂದು ಹೇಳಿದರು.



ನವದೆಹಲಿಯ ಸಂಸತ್ ಭವನದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಯ ಕುರಿತು ಚರ್ಚೆ ನಡೆಸಿದರು.

## ಮಧ್ಯಪ್ರದೇಶದಲ್ಲಿ ಘೋರ ದುರಂತ ನೀರಿನಲ್ಲಿ ಕೊಚ್ಚಿಹೋದ ಒಂದೇ ಕುಟುಂಬದ 11 ಸದಸ್ಯರು

**ಭೋಪಾಲ್, ಆ.10:** ಪ್ರವಾಹದಿಂದ ತುಂಬಿ ಹರಿಯುತ್ತಿದ್ದ ಚರಂಡಿಯನ್ನು ದಾಟಲು ಪ್ರಯತ್ನಿಸುತ್ತಿದ್ದ ವೇಳೆ ವ್ಯಾನ್ ಕೊಚ್ಚಿಹೋಗಿದ್ದು, ಒಂದೇ ಕುಟುಂಬದ ಎಂಟು ಸದಸ್ಯರು ಮೃತಪಟ್ಟ ದುರ್ಘಟನೆ ಮಧ್ಯಪ್ರದೇಶದ ಪದಾನಾ ಪಟ್ಟಣದಲ್ಲಿ ಸಂಭವಿಸಿದೆ . ಘಟನೆಯಲ್ಲಿ ಇಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ದೇವಸ್ಥಾನಕ್ಕೆ ಭೇಟಿ ನೀಡಲು ಕುಟುಂಬವು ದೇವಾಸ್‌ನಿಂದ ಸಾರಂಗಪುರದ ಕಡ್ನವಾಡ ಗ್ರಾಮಕ್ಕೆ ಪ್ರಯಾಣಿಸುತ್ತಿತ್ತು. ವ್ಯಾನ್ ಪದಾನ ಬೈಪಾಸ್ ತಲುಪುತ್ತಿದ್ದಂತೆ, ಚರಂಡಿ ನೀರು ರಸ್ತೆ ಮೇಲೆಯೇ ಹರಿದಿತ್ತು. ಸ್ಥಳೀಯರು ಪದೇ ಪದೇ ಎಚ್ಚರಿಕೆ ನೀಡಿದ್ದರೂ, ಚಾಲಕ ದಾಟಲು ಮುಂದಾಗಿದ್ದಾನೆ. ಈ ವೇಳೆ ಪ್ರವಾಹದ ರಭಸಕ್ಕೆ ವ್ಯಾನ್ ಕೊಚ್ಚಿಕೊಂಡು ಹೋಗಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ರಕ್ಷಣಾ ಕಾರ್ಯಕರ್ತರು ಮತ್ತು ನಿವಾಸಿಗಳು ಹಗ್ಗ ಮತ್ತು ಕ್ರೇನ್ ಬಳಸಿ ವ್ಯಾನ್ ಹೊರತೆಗೆಯಲು ಪ್ರಯತ್ನಿಸಿದರು. ಆದರೆ ಒಳಗೆ ಯಾರೂ ಪ್ರಯಾಣಿಕರು ಕಂಡುಬಂದಿಲ್ಲ ಎಂದು ಮೂಲಗಳು ತಿಳಿಸಿವೆ. ನೀರಿನ ಮಟ್ಟ ತುಂಬಾ ಹೆಚ್ಚಾಗಿದ್ದರಿಂದ ಚಾಲಕನಿಗೆ ರಸ್ತೆ ಮತ್ತು ಚರಂಡಿಯ ನಡುವೆ ವ್ಯತ್ಯಾಸವನ್ನು ಗುರುತಿಸಲು ಸಾಧ್ಯವಾಗಲಿಲ್ಲ ಎಂದು ಪ್ರತ್ಯಕ್ಷದರ್ಶಿ ಮಹೇಂದ್ರ ಪರ್ಮಾರ್ ಹೇಳಿದ್ದಾರೆ.

## ಜಾತಿ, ಧರ್ಮದ ವಿಷಯದಲ್ಲಿ ಹೆತ್ತ ತಾಯಿಯನ್ನು ಪ್ರಸ್ತಾಪಿಸುವುದು ಸರಿಯೇ?

### ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಮಾಜಿ ಸಚಿವೆ ಡಾ.ಉಮಾಶ್ರೀ ಕಿಡಿ



**ಬೆಂಗಳೂರು, ಆ.10:** ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರನ್ನು ಯಾವ ಧರ್ಮಿಯರೆಂದು ತಾಯಿಯನ್ನು ಕೇಳಲಿಯೆಂದು ಪ್ರಶ್ನಿಸಿರುವ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಮಾಜಿ ಸಚಿವೆ, ವಿಧಾನಪರಿಷತ್ ಸದಸ್ಯೆ ಡಾ. ಉಮಾಶ್ರೀ ಕಿಡಿಕಾರಿದ್ದಾರೆ. ಡಾ. ಯತೀಂದ್ರ ಸಿದ್ದರಾಮಯ್ಯ ಬಗ್ಗೆ ಉದ್ದಟತನದ ಮಾತುಗಳನ್ನಾಡಿದ್ದಾರೆ. ಇದು ಸರಿಯಲ್ಲ. ಒಬ್ಬ ಮಹಿಳೆಯಾಗಿ, ಕೇಂದ್ರ ಸಚಿವೆಯಾಗಿ, ಧರ್ಮ, ಜಾತಿ ವಿಷಯದ ನಡುವೆ ಸಚಿವರ ಹೆತ್ತತಾಯಿಯನ್ನು ಪ್ರಸ್ತಾಪಿಸುವುದು ಸರಿಯೇ ಎಂದು ಪ್ರಶ್ನಿಸಿದ್ದಾರೆ. ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯನವರಿಗೆ ತಾವು ಯಾವ ಜಾತಿ, ಯಾವ ಧರ್ಮ ಎನ್ನುವುದು ಚೆನ್ನಾಗಿಯೇ ಗೊತ್ತಿದೆ. ಸಂಸ್ಕಾರ, ಸಂಸ್ಕೃತಿಯೂ ಇದೆ. ಅದನ್ನು ಮತ್ತೆ ಅವರ ತಾಯಿಯನ್ನು ಕೇಳುವ ಅಗತ್ಯವಿಲ್ಲ. ಆದರೆ, ಮೊದಲು ತಾವು ಏನು ಮಾತನಾಡುತ್ತಿದ್ದೇನೆ ಎನ್ನುವುದನ್ನು ಶೋಭಾ ಕರಂದ್ಲಾಜೆ ಅವರು ಅರಿಯಲಿ ಎಂದು ಸಲಹೆ ನೀಡಿದ್ದಾರೆ.

14 ವರ್ಷವಾದರೂ ಹಿಂದೂ ರಾಷ್ಟ್ರ ನಿರ್ಮಾಣ ಸಾಧ್ಯವಾಗಿಲ್ಲ ಏಕೆ? ಸಂವಿಧಾನಾತ್ಮಕ ಹುದ್ದೆಯಲ್ಲಿ ಇರುವ ಇವರು ಮತ್ತು ಇವರ ಸರಕಾರ 14 ವರ್ಷಗಳ ಆಡಳಿತ ನಡೆಸಿದರು ಹಿಂದೂ ರಾಷ್ಟ್ರ ನಿರ್ಮಾಣ ಮಾಡಲು ಏಕೆ ಸಾಧ್ಯವಾಗಿಲ್ಲ. ಹಿಂದೂಗಳಿಗೆ ಹಿಂದೂ ರಾಷ್ಟ್ರ ನಿರ್ಮಾಣ ಮಾಡುವುದಾಗಿ ಮತ ಪಡೆದು ಅಧಿಕಾರಕ್ಕೆ ಬಂದವರು ಏಕೆ ಹಿಂದೂ ರಾಷ್ಟ್ರವೆಂದು ಅಧಿಕೃತವಾಗಿ ಘೋಷಿಸಿಲ್ಲ. ಹಿಂದೂಗಳನ್ನು ಇನ್ನೂ ಮೂರ್ಖರನ್ನಾಗಿಸುವ ಪ್ರಯತ್ನ ನಿಲ್ಲಿಸಲಿ. ಸರ್ವಧರ್ಮ ಸಮನ್ವತೆಯ, ಸಹೋದರತ್ವದ ಹೊಂದಿದ ದೇಶದಲ್ಲಿ ಜನಪ್ರತಿನಿಧಿಯಾಗಿ, ಒಬ್ಬ ಮಹಿಳೆಯಾಗಿ ಸಚಿವರ ಬಗ್ಗೆ ಮಾತನಾಡಿರುವುದು ನೀಚ ಮನಸ್ಥಿತಿಯ ದ್ಯೋತಕವೇ ಹೊರತು ಮತ್ತೇನು ಅಲ್ಲ. ಇಂದು ವಿಷಾದದ ಸಂಗತಿ. ಈ ರೀತಿ ಮಾತನಾಡುವುದು ಇವರಿಗೆ ಶೋಭೆ ತರುವುದಿಲ್ಲ ಕೂಡಲೇ ಕ್ಷಮೆ ಕೇಳಬೇಕೆಂದು ಡಾ.ಉಮಾಶ್ರೀ ಒತ್ತಾಯಿಸಿದ್ದಾರೆ.

## ಆರ್‌ಎಸ್‌ಎಸ್–ಪಾಕ್ ನಂಟಿನ ಬಗ್ಗೆ ತನಿಖೆಗೆ ಬಿ.ಕೆ.ಹರಿಪ್ರಸಾದ್ ಆಗ್ರಹ

### ಪಾಕಿಸ್ತಾನಿಯರೆಲ್ಲರೂ ಶತ್ರುಗಳಲ್ಲ ಎಂಬ ಮೋಹನ್ ಭಾಗವತ್ ಹೇಳಿಕೆಗೆ ಕೆಪಿಸಿಸಿ ಅಧ್ಯಕ್ಷರ ಪ್ರತಿಕ್ರಿಯೆ




**ಬೆಂಗಳೂರು, ಆ.10:** ಪುಲ್ವಾಮ ದಾಳಿ ತನಿಖೆಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರಕಾರವು ಇನ್ನೂ ತುಟಿ ಬಿಚ್ಚದಿರಲು ಕಾರಣ ಆರ್‌ಎಸ್‌ಎಸ್ ಎಂಬುದು ಬಟಾಬಯಲಾಗಿದೆ. ಮೋಹನ್ ಭಾಗವತ್ ಎರಡನೇ ಬಾರಿ ಪಾಕಿಸ್ತಾನದ ಪರ ಮಾತನಾಡಿದ್ದಾರೆ. ಪಾಕಿಸ್ತಾನಿಯರೆಲ್ಲರೂ ಶತ್ರುಗಳಲ್ಲ ಎಂದು ಅವರು ಹೇಳಿದ್ದು, ಆರ್‌ಎಸ್‌ಎಸ್‌ಗೂ ಪಾಕಿಸ್ತಾನಕ್ಕೂ ಇರುವ ಲಿಂಕ್ ಬಗ್ಗೆ ತನಿಖೆಯಾಗಬೇಕಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಹೇಳಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಈ ಹಿಂದೆ ಪಾಕಿಸ್ತಾನದ ಐಎಸ್‌ಐ ಉಗ್ರಗಾಮಿ ಸಂಘಟನೆಗಳೊಂದಿಗೆ ಆರ್‌ಎಸ್‌ಎಸ್ ಪ್ರಮುಖರು ರಹಸ್ಯ ಸಭೆಗಳನ್ನು ನಡೆಸಿದ್ದರು. ಈಗ ಮೋಹನ್ ಭಾಗವತ್ ಪಾಕಿಸ್ತಾನಿಯರೆಲ್ಲರೂ ನಮ್ಮ ಶತ್ರುಗಳಲ್ಲ ಎಂದು ಹೇಳುವ ಮೂಲಕ ಎಲ್ಲವೂ ಪೂರ್ವನಿಯೋಜಿತ ಎಂಬುದನ್ನು ಬಯಲು ಮಾಡಿದೆ ಎಂದು ತಿಳಿಸಿದ್ದಾರೆ. 2026ರ ಫೆಬ್ರವರಿ 6ರಂದು ಮೋದಿ ಸರಕಾರದ ವಿದೇಶಾಂಗ ಸಚಿವಾಲಯವೇ ಸಂಸತ್ತಿಗೆ ನೀಡಿದ ಅಧಿಕೃತ ಉತ್ತರದಲ್ಲಿ ಪಾಕಿಸ್ತಾನವನ್ನು ಭಾರತದ ನೆರೆ ರಾಷ್ಟ್ರ ಪಟ್ಟಿಯಲ್ಲಿ ಸೇರಿಸಿದೆ. ಹಾಗಿದ್ದರೆ, ವಿಧಾನ ಪರಿಷತ್ತಿನಲ್ಲಿ ನಾನು ಹೇಳಿದ ಪಾಕಿಸ್ತಾನ ನಮ್ಮ ನೆರೆಯ ರಾಷ್ಟ್ರ" ಎಂಬ ಮಾತಿಗೆ ವಿರೋಧಿಸಿದ್ದ ನಕಲಿ ದೇಶಪ್ರೇಮಿಗಳು ಈಗ ಎಲ್ಲಿದ್ದಾರೆ. ಆಗ ನನ್ನ ವಿರುದ್ಧ ಹರಿಹಾಯ್ದಿದ್ದ ಬಾಡಿಗೆ ದೇಶಭಕ್ತರ ನಾಲಿಗೆಗೆ ಈಗ ನಾಗಪುರದಿಂದ ಬೀಗ ಬಿದ್ದಿದೆಯೇ ಎಂದು ಪ್ರಶ್ನಿಸಿದ್ದಾರೆ.

ಭಾರತವನ್ನು ವಿಭಜಿಸಿದ ಮಹಮ್ಮದ್ ಅಲಿ ಜಿನ್ನಾ ಅವರೊಂದಿಗೆ ಸೇರಿ ಬಂಗಾಳದಲ್ಲಿ ಮುಸ್ಲಿಂ ಲೀಗ್‌ನೊಂದಿಗೆ ಸರಕಾರ ನಡೆಸಿದ ಜನಸಂಘದ ಶ್ಯಾಮಪ್ರಸಾದ್ ಮುಖರ್ಜಿಯಿಂದ ಹಿಡಿದು, ಜಿನ್ನಾ ಅವರ ಸಮಾಧಿಗೆ ಭೇಟಿ ನೀಡಿ ಅವರನ್ನು "ಜಾತ್ಯತೀತ ನಾಯಕ" ಎಂದು ಹೊಗಳಿದ ಅಡ್ವಾಣಿಯವರೆಗೆ, ಪಾಕಿಸ್ತಾನದ ಪ್ರಧಾನಿಯ ಮನೆಗೆ ಆಹ್ವಾನ ವಿಲ್ಲದಿದ್ದರೂ ಅಚ್ಚರಿಯ ರೀತಿಯಲ್ಲಿ ಬಿರಿಯಾನಿ ಸವಿದ ನರೇಂದ್ರ ಮೋದಿಯವರೆಗೆ ಬಿಜೆಪಿ ಹಾಗೂ ಅದರ ಪೂರ್ವಜರ 'ಪಾಕ್' ಪ್ರೇಮದ ಪರಂಪರೆ ಮುಂದುವರಿಯುತ್ತಲೇ ಇದೆ ಎಂಬ ಆರೋಪಗಳಿಗೆ ಈ ಬೆಳವಣಿಗೆಗಳು ಪ್ರಶ್ನೆಗಳನ್ನು ಹುಟ್ಟುಹಾಕುತ್ತಿವೆ ಎಂದು ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ. ಒಂದು ಕಡೆ ಚುನಾವಣಾ ರಾಜಕಾರಣಕ್ಕಾಗಿ ಪಾಕಿಸ್ತಾನವನ್ನು ಶತ್ರು ರಾಷ್ಟ್ರವೆಂದು ಬಿಂಬಿಸುವುದು. ಮತ್ತೊಂದು ಕಡೆ ಅಧಿಕಾರದಲ್ಲಿರುವಾಗ ಪಾಕಿಸ್ತಾನದೊಂದಿಗೆ ರಾಜತಾಂತ್ರಿಕ ಸಂಬಂಧಗಳನ್ನು ಮುಂದುವರಿಸುವುದು ಇದು ಬಿಜೆಪಿ/ಆರ್‌ಎಸ್‌ಎಸ್‌ನ ದ್ವಂದ್ವ ನೀತಿಯಲ್ಲವೇ? ಗಡಿಯಲ್ಲಿ ನಮ್ಮ ವೀರ ಯೋಧರು ಪ್ರಾಣ ಕಳೆದುಕೊಳ್ಳುತ್ತಿರುವಾಗ, ಪುಲ್ವಾಮಾ ಮತ್ತು ಪಹಲ್ಗಾಮ್‌ನಂತಹ ಭೀಕರ ದಾಳಿಗಳಲ್ಲಿ ಅಮಾಯಕ ನಾಗರಿಕರು ಹಾಗೂ ಭದ್ರತಾ ಸಿಬ್ಬಂದಿ ಬಲಿಯಾಗುತ್ತಿರುವಾಗ, "ಪಾಕಿಸ್ತಾನಿಯರೆಲ್ಲರೂ ನಮ್ಮ ಶತ್ರುಗಳಲ್ಲ" ಎನ್ನುವ ಮೋಹನ್ ಭಾಗವತ್ ಅವರ ಮಾತಿನ ಅರ್ಥವೇನು. ಪಾಕಿಸ್ತಾನದ ಭಯವನ್ನು ಚುನಾವಣಾ ಭಾಷಣಗಳಲ್ಲಿ ರಾಜಕೀಯ ಅಸ್ತ್ರವನ್ನಾಗಿ ಬಳಸುವ ಬಿಜೆಪಿ ನಾಯಕರು, ಈಗ ತಮ್ಮದೇ ಸರಸಂಘಚಾಲಕರ ಹೇಳಿಕೆಯ ಬಗ್ಗೆ ಮೌನವಾಗಿರುವುದೇಕೆ, ದೇಶಭಕ್ತಿಯ ಗುತ್ತಿಗೆ ಪಡೆದವರೇ, ನಿಮ್ಮ ವರಸೆ ಬದಲಾಗಿದೆಯೇ ಅಥವಾ ನಾಗಪುರದಿಂದ ಬಂದ ಹೊಸ ನಿರ್ದೇಶನದ ನಿರೀಕ್ಷೆಯಲ್ಲಿದ್ದೀರಾ ಎಂದು ಪ್ರಶ್ನಿಸಿದ್ದಾರೆ.

## ಪ್ರವಾಸಿತಾಣ ಗುರುತಿಸುವಿಕೆ-ಅಭಿವೃದ್ಧಿ ರಾಜ್ಯ ಸರ್ಕಾರದ ಹೊಣೆ

### ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಪ್ರಶ್ನೆಗೆ ಕೇಂದ್ರದ ಉತ್ತರ



**ನವದೆಹಲಿ, ಆ.10:** ಕರ್ನಾಟಕದಲ್ಲಿ ಪ್ರವಾಸೋದ್ಯಮ ಸರ್ಕ್ಯೂಟ್‌ಗಳು ಹಾಗೂ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಒದಗಿಸಲಾಗು ತ್ತಿರುವ ನೆರವು, ಮಂಜೂರಾದ ಯೋಜನೆಗಳು ಮತ್ತು ಪ್ರವಾಸೋದ್ಯಮ ಮೂಲಸೌಕರ್ಯ ಕುರಿತು ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಕೇಂದ್ರ ಪ್ರವಾಸೋದ್ಯಮ ಸಚಿವಾಲಯದ ಗಮನ ಸೆಳೆದಿದ್ದಾರೆ.

ಇದಕ್ಕೆ ಉತ್ತರಿಸಿರುವ ಕೇಂದ್ರ ಪ್ರವಾಸೋದ್ಯಮ ಸಚಿವಾಲಯ, ಪ್ರವಾಸಿ ತಾಣಗಳ ಗುರುತಿಸುವಿಕೆ, ಅಭಿವೃದ್ಧಿ ಮತ್ತು ಪ್ರಚಾರದ ಪ್ರಮುಖ ಜವಾಬ್ದಾರಿ ರಾಜ್ಯ ಸರ್ಕಾರದ್ದಾಗಿದೆ ಎಂದು ತಿಳಿಸಿದೆ. ಕೇಂದ್ರ ಸರ್ಕಾರವು ಸ್ವದೇಶ್ ದರ್ಶನ್, ಸ್ವದೇಶ್ ದರ್ಶನ್ 2.0, CBDD ಮತ್ತು PRASHAD ಯೋಜನೆಗಳ ಮೂಲಕ ರಾಜ್ಯಗಳಿಗೆ ಹಣಕಾಸಿನ ನೆರವು ಒದಗಿಸುತ್ತಿದೆ. ಪ್ರವಾಸಿ ತಾಣಗಳ ಗುರುತಿಸುವಿಕೆ, ಅಭಿವೃದ್ಧಿ ಮತ್ತು ಪ್ರಚಾರದ ಪ್ರಮುಖ ಜವಾಬ್ದಾರಿ ರಾಜ್ಯ ಸರ್ಕಾರದ್ದಾಗಿದೆ. ಕೇಂದ್ರ ಸರ್ಕಾರವು ಸ್ವದೇಶ್ ದರ್ಶನ್, ಸ್ವದೇಶ್ ದರ್ಶನ್ 2.0, CBDD ಮತ್ತು PRASHAD ಯೋಜನೆಗಳ ಮೂಲಕ ರಾಜ್ಯಗಳಿಗೆ ಹಣಕಾಸಿನ ನೆರವು ಒದಗಿಸುತ್ತಿದೆ. ಇದಲ್ಲದೆ, SASCI ಯೋಜನೆಯಡಿಯೂ ಪ್ರಮುಖ ಪ್ರವಾಸಿ ಕೇಂದ್ರಗಳ ಅಭಿವೃದ್ಧಿಗೆ ರಾಜ್ಯಗಳಿಗೆ ಕೇಂದ್ರದಿಂದ ಅನುದಾನ ನೀಡಲಾಗುತ್ತಿದೆ ಎಂದು ಸಚಿವಾಲಯ ತಿಳಿಸಿದೆ.

ಪ್ರವಾಸಿ ತಾಣಗಳ ಆಯ್ಕೆಯಲ್ಲಿ ಅವುಗಳ ಪ್ರವಾಸೋದ್ಯಮ ಸಾಮರ್ಥ್ಯ, ಸಾಂಸ್ಕೃತಿಕ, ಐತಿಹಾಸಿಕ ಮತ್ತು ಪಾರಂಪರಿಕ ಮಹತ್ವವನ್ನು ಪರಿಗಣಿಸ ದಲಾಗುತ್ತದೆ. ಯೋಜನೆಗಳ ಅನುಷ್ಠಾನದಲ್ಲಿ ಸಂಪರ್ಕ ವ್ಯವಸ್ಥೆ ಸುಧಾರಣೆ, ಪ್ರವಾಸಿ ತಾಣಗಳಿಗೆ ಸುಲಭ ಪ್ರವೇಶ, ಅಗತ್ಯ ಮೂಲಸೌಕರ್ಯ ಹಾಗೂ ಆಧುನಿಕ ಪ್ರವಾಸಿಗರ ಸೌಲಭ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ಉತ್ತರಿಸಿದೆ.ಕರ್ನಾಟಕದ ಪ್ರಮುಖ ತಾಣಗಳ ಜೊತೆಗೆ ಪ್ರವಾಸೋದ್ಯಮ ಸಾಮರ್ಥ್ಯ ಹೊಂದಿರುವ ಸಣ್ಣ ಜಿಲ್ಲೆಗಳಲ್ಲಿಯೂ ಅಗತ್ಯ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕೆಂಬ ವಿಷಯವನ್ನು ಪ್ರಭಾ ಮಲ್ಲಿಕಾರ್ಜುನ್ ಅವರ ಪ್ರಶ್ನೆಗಳು ಮುನ್ನೆಲೆಗೆ ತಂದಿವೆ.

## ಹೊರರಾಜ್ಯಗಳ ಗಡಿ ಕನ್ನಡಿಗರ ಸಮಸ್ಯೆಗಳ ಪರಿಹಾರಕ್ಕೆ ಮೂರು ತಿಂಗಳ ಗಡುವು: ಅಪರ ಮುಖ್ಯಕಾರ್ಯದರ್ಶಿ ಉಮಾ ಮಹದೇವನ್



**ಬೆಂಗಳೂರು. ಆ,10:** ಹೊರರಾಜ್ಯಗಳ ಗಡಿ ಕನ್ನಡಿಗರ ಸಮಸ್ಯೆಗಳ ಕುರಿತಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತೆ ಉಮಾ ಮಹಾದೇವನ್ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ವಿಧಾನಸೌಧದಲ್ಲಿ ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳು ಹಾಗೂ ಹೊರನಾಡಿನ ಪ್ರಮುಖರೊಂದಿಗೆ ಸಭೆ ನಡೆಯಿತು.

ಯೋಜನಾ ಇಲಾಖೆಯ ಕಾರ್ಯದರ್ಶಿ ಡಾ. ತ್ರಿಲೋಕಚಂದ್ರ ಮಾತನಾಡಿ ಹೊರನಾಡ ಕನ್ನಡಿಗರು ದಿನ ನಿತ್ಯ ಅನುಭವಿಸುವ ಶೈಕ್ಷಣಿಕ, ಸಾಂಸ್ಕೃತಿಕ, ಔದ್ಯೋಗಿಕ ಹಾಗೂ ಮೂಲಭೂತ ಸೌಕರ್ಯಗಳ ಸಮಸ್ಯೆಗಳನ್ನು ಅಪರ ಮುಖ್ಯ ಕಾರ್ಯದರ್ಶಿಗಳ ಮೂಲಕ ಮುಖ್ಯಮಂತ್ರಿಗಳ ಅವಗಾಹನೆಗೆ ತರುವುದಾಗಿ ತಿಳಿಸಿದರು. ಇವುಗಳ ಪರಿಹಾರದ ಬಗ್ಗೆ ಇಲಾಖಾವಾರು ಸಮಸ್ಯೆಗಳ ಬಗ್ಗೆ ಚರ್ಚಿಸಿ, ಕ್ರಮಕೈಗೊಳ್ಳುವಂತೆ ಗಡಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಪ್ರಕಾಶ್ ಮತ್ತಿಹಳ್ಳಿ ಸಮಸ್ಯೆಗಳ ವಿವರಗಳನ್ನು ಇಲಾಖಾವಾರು ಸಮಸ್ಯೆ ಮತ್ತು ಆಗಬೇಕಾಗಿರುವ ಪರಿಹಾರದ ಬಗ್ಗೆ ವಿಷಯವಾರು ಸಭೆಗೆ ಮಂಡಿಸಿದರು.

ಈಗಾಗಲೇ ಹೊರರಾಜ್ಯದ ಕನ್ನಡ ಶಾಲೆಗಳಿಗೆ ಗಡಿ ಅಭಿವೃದ್ಧಿ ಪ್ರಾಧಿಕಾರ ಶಾಲಾ ಕೊಠಡಿ ನಿರ್ಮಾಣ/ ಸಾಂಸ್ಕೃತಿಕ ಭವನ/ಸ್ಮಾರ್ಟ್ ಬೋರ್ಡ್/ಕನ್ನಡ ಮಾಧ್ಯಮದ ಪುಸ್ತಕ/ಶಾಲಾ ಕೊಠಡಿಗಳು/ ಗ್ರಂಥಾಲಯ/ನಲಿ–ಕಲಿ ಸಾಮಗ್ರಿಗಳನ್ನು ವಿತರಿಸುತ್ತಿರುವ ಬಗ್ಗೆ ಸಭೆಗೆ ತಿಳಿಸಿದರು.

ಹೊರರಾಜ್ಯಗಳ ಕನ್ನಡ ಮಾಧ್ಯಮ ಶಾಲೆಗಳಿಗೆ ಅತಿಥಿ ಶಿಕ್ಷಕರ ನೇಮಕಾತಿ, ಹೊರರಾಜ್ಯದ ಕನ್ನಡದ ವಿದ್ಯಾರ್ಥಿಗಳಿಗೆ ಕರ್ನಾಟಕದ ಮುರಾರ್ಜಿ, ರಾಣಿಚನ್ನಮ್ಮ ಮುಂತಾದ ಇತರೆ ವಸತಿನಿಲಯಗಳಿಗೆ ಪ್ರವೇಶಾತಿ, ಶಾಲಾ ಕೊಠಡಿಗಳ/ಗ್ರಂಥಾಲಯ/ ಕನ್ನಡ ಭವನ ನಿರ್ಮಾಣ, ಉನ್ನತ ಶಿಕ್ಷಣಗಳಿಗೆ ರಾಜ್ಯದ ವಿದ್ಯಾರ್ಥಿಗಳಂತೆ ಹೊರರಾಜ್ಯದವರಿಗೆ ಸಮಾನ ಅವಕಾಶ, ಹೊರನಾಡ ಕನ್ನಡಿಗರಿಗೆ ಶೇ.5%ರ ಪ್ರತ್ಯೇಕ ಮೀಸಲಾತಿ ನೀಡಲು ನಿಯಮಗಳ ಪರಿಷ್ಕರಣೆ, ನಮ್ಮ ರಾಜ್ಯದ ಶಾಲಾಕಾಲೇಜುಗಳಿಗೆ ಹೊರನಾಡ ಕನ್ನಡಿಗರ ವಿದ್ಯಾರ್ಥಿಗಳು ತೆರಳಲು ಮತ್ತು ಹೊರನಾಡ ಪತ್ರಕರ್ತರಿಗೆ ನಮ್ಮ ರಾಜ್ಯದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸಲು ರಿಯಾಯಿತಿ ಪಾಸ್ ವ್ಯವಸ್ಥೆ ಮಾಡುವಂತೆ ಸಂಬಂಧಪಟ್ಟ ಇಲಾಖೆಗಳ ಕಾರ್ಯದರ್ಶಿಗಳು ಪ್ರಸ್ತಾವನೆಯನ್ನು ಆಯಾ ಇಲಾಖೆಗಳ ಮೂಲಕ ಮುಖ್ಯ ಕಾರ್ಯದರ್ಶಿಗಳ ಮತ್ತು ಮುಖ್ಯ ಮಂತ್ರಿಗಳ ಅವಗಾಹನೆಗೆ ತರಲು ಅಪರ ಮುಖ್ಯ ಕಾರ್ಯದರ್ಶಿಯವರು ಸೂಚಿಸಿದರು.

6 ಹೊರರಾಜ್ಯಗಳಲ್ಲಿರುವ 671 ಕನ್ನಡ ಮಾಧ್ಯಮ ಶಾಲೆಗಳಲ್ಲಿ ಒಂದು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಇರುವ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಯಿತು.

ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಾದ ಸೋಮಣ್ಣ ಬೇವಿನಮರದ, ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಮಾಜಿ ಶಾಸಕರು, ಮಹಾರಾಷ್ಟ್ರದ ಜತ್ ತಾಲ್ಲೂಕಿನ ಮಾಜಿ ಶಾಸಕ ವಿಕ್ರಮ ಸಿಂಹ ಸಾವಂತ್, ಆರ್ಥಿಕ ಇಲಾಖೆಯ ಕಾರ್ಯದರ್ಶಿ ಎಂ.ಟಿ. ರೇಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ. ಮಂಜುಶ್ರೀ, ಡಿ. ಚಂದ್ರಶೇಖರಯ್ಯ, ನಿರ್ದೇಶಕರು, ಯೋಜನಾ ಇಲಾಖೆ, ಉನ್ನತ ಶಿಕ್ಷಣ/ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ/ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ/ ಗೋವಾದಿಂದ ಸಿದ್ದಣ್ಣ ಮೇಟಿ, ಕೇರಳದಿಂದ ಜಯಪ್ರಕಾಶ್ ತೊಟ್ಟೆತೋಡಿ ಮತ್ತು ಪ್ರದೀಪ್, ಮಹಾರಾಷ್ಟ್ರದಿಂದ ಮಲ್ಲಿಕ್ ಜಾನ್ ಶೇಖ್, ಸೋಮಶೇಖರ್ ಜಮಶೆಟ್ಟಿ, ತಮಿಳುನಾಡಿನಿಂದ ಡಾ. ಶಂಕರ್ ಮತ್ತು ದೊಡ್ಡ ಬಸಪ್ಪ, ಆಂಧ್ರದಿಂದ ಗುರುಬಸವರಾಜು ಮತ್ತು ಗಿರಿಜಾಪತಿ, ತೆಲಂಗಾಣದಿಂದ ನಿಜಾಮುದ್ದಿನ್ ಮತ್ತು ರಾಮಲಿಂಗಪ್ಪರವರು ಭಾಗವಹಿಸಿ ಅಲ್ಲಿನ ಕನ್ನಡಿಗರ ಜ್ವಲಂತ ಸಮಸ್ಯೆಗಳನ್ನು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳ ಗಮನಕ್ಕೆ ತಂದರು ಹಾಗೂ ಈ ಸಮಸ್ಯೆಗಳು ಸುಮಾರು 50 ವರ್ಷಗಳಿಂದ ಹಾಗೆ ಉಳಿದಿದ್ದು, ಡಾ. ಬರಗೂರು ರಾಮಚಂದ್ರಪ್ಪ ವರದಿ ಹಾಗೂ ವಾಟಾಳ್ ನಾಗರಾಜುರವರ ವರದಿಗಳನ್ನು ಶೀಘ್ರ ಅನುಷ್ಠಾನ ಮಾಡಿ, ಅಲ್ಲಿ ಪಟ್ಟಿ ಮಾಡಿರುವ ಸಮಸ್ಯೆಗಳಿಗೆ ಶೀಘ್ರವಾಗಿ ಪರಿಹರಿಸಿ ಹೊರನಾಡು ಕನ್ನಡಿಗರಿಗೆ ಹಾಸ್ಟೆಲ್ ಪ್ರವೇಶ ಮತ್ತು ಪ್ರತ್ಯೇಕ ಶೇ.5ರ ಮೀಸಲಾತಿ ನೀಡುವಂತೆ ಮನವಿ ಸಲ್ಲಿಸಿದರು.

ಒಟ್ಟಾರೆ ಕರ್ನಾಟಕದಲ್ಲಿ ಪ್ರಥಮ ಬಾರಿಗೆ ಸರ್ಕಾರದ ಹಂತದಲ್ಲಿ ಉನ್ನತ ಮಟ್ಟದ ಅಧಿಕಾರಿಗಳೊಡನೆ ಹೊರರಾಜ್ಯಗಳ ಗಡಿ ಕನ್ನಡಿಗರ ಸಮಸ್ಯೆಗಳನ್ನು ಆಲಿಸಿ, ಸೂಕ್ತ ಪರಿಹಾರ ಕಂಡುಕೊಳ್ಳಲು ಉನ್ನತ ಮಟ್ಟದ ಸಭೆ ನಡೆಸಿ 3 ತಿಂಗಳಲ್ಲಿ ಈ ಬಗ್ಗೆ ಆಯಾ ಇಲಾಖೆಗಳು ಪ್ರಸ್ತಾವನೆಗಳನ್ನು ಯೋಜನಾ ಇಲಾಖೆಯ ಮತ್ತು ಮುಖ್ಯ ಕಾರ್ಯದರ್ಶಿಗಳ ಮೂಲಕ ಮಾನ್ಯ ಮುಖ್ಯಮಂತ್ರಿಗಳ ಅವಗಾಹನೆಗೆ ಮತ್ತು ಸೂಕ್ತ ಆದೇಶಕ್ಕಾಗಿ ಸಲ್ಲಿಸಲು ಸೂಚಿಸಿ, 3 ತಿಂಗಳೊಳಗಾಗಿ ಸೂಕ್ತ ತೀರ್ಮಾನ ತೆಗೆದುಕೊಂಡು ಸಲ್ಲಿಸಲು ಸೂಚಿಸಿದರು. 3 ತಿಂಗಳ ನಂತರ ಮತ್ತೊಮ್ಮೆ ಪುನರಾವಲೋಕನ ಸಭೆ ಮಾಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳನ್ನು 6 ಹೊರರಾಜ್ಯಗಳ ಗಡಿ ಕನ್ನಡಿಗರ ಪರವಾಗಿ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಕೋರಿದರು ಮತ್ತು ಈ ಸಭೆಗೆ ವೈಯಕ್ತಿಕವಾಗಿ ಅಭಿನಂದನೆ ತಿಳಿಸಿದರು.

## ಶೇ.20 ರಷ್ಟು ಎಥನಾಲ್ ಮಿಶ್ರಣ ಅತಿ ದೊಡ್ಡ ತೈಲ ಹಗರಣ: ಜನಸಾಮಾನ್ಯರ ಸಹಸ್ರಾರು ಕೋಟಿ ರೂ ತೈಲ ಕಂಪನಿಗಳ ಜೇಬಿಗೆ ವಾಹನ ಮಾಲೀಕರಿಗೆ ಕನಿಷ್ಠ ಒಂದು ಲಕ್ಷ ರೂ ವಿಶೇಷ ಪ್ಯಾಕೇಜ್ ಘೋಷಿಸಿ - ಡಾ. ಆನಂದಕುಮಾರ್



**ಬೆಂಗಳೂರು, ಅ.10:** ವೈಜ್ಞಾನಿಕ ಪ್ರಯೋಗಗಳಿಲ್ಲದೇ ಪೆಟ್ರೋಲ್‌ನಲ್ಲಿ ಶೇ.20 ರಷ್ಟು ಎಥನಾಲ್ ಮಿಶ್ರಣ ಮಾಡುತ್ತಿರುವುದು ದೇಶದ ಅತಿ ದೊಡ್ಡ ಹಗರಣವಾಗಿದ್ದು, ಇದರಿಂದ ದೇಶದ ಸಾಗಾಣೆ ವ್ಯವಸ್ಥೆಯೇ ಕುಸಿದು ಬೀಳಲಿದೆ. ವಾಹನಗಳ ಮೈಲೇಜ್ ತಗ್ಗುವ ಜೊತೆಗೆ ಕೋಟ್ಯಂತರ ವಾಹನಗಳು ಕೆಟ್ಟು ನಿಲ್ಲುವ ಆತಂಕ ಎದುರಾಗಿದೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕ ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಟೀಕಿಸಿದ್ದಾರೆ. ಎಥೆನಾಲ್ ಮಿಶ್ರಣದ ಪೆಟ್ರೋಲ್ ಮಾರಾಟ ಅಳಿಸಲಾಗದ ಹಾನಿಯುಂಟು ಮಾಡಲಿದೆ. ಹೆಚ್ಚು ಉದ್ಯೋಗ ನೀಡಿರುವ ಸಾಗಣೆ ವಲಯಕ್ಕೆ ಇದು ಪ್ರತಿಕೂಲ ಪರಿಣಾಮ ಬೀರುತ್ತಿದೆ. ಎಥೆನಾಲ್ ಮಿಶ್ರಣದ ನಂತರವೂ ಪೆಟ್ರೋಲ್ ದರ ಕಡಿಮೆಯಾಗಿಲ್ಲ. ಅದೇ ಬೆಲೆ, ಆದರೆ ದೂರ ಕಡಿಮೆ" ಎಂಬ ಪರಿಸ್ಥಿತಿ ನಿರ್ಮಾಣವಾಗಿದ್ದು, ದೇಶದ ಜನರ ಸಾವಿರಾರು ಕೋಟಿ ರೂ ತೈಲ ಕಂಪೆನಿಗಳ ಜೇಬಿಗೆ ಸೇರುತ್ತಿದೆ. ಕೋಟ್ಯಂತರ ವಾಹನಗಳ ಸಾಮರ್ಥ್ಯ ತಗ್ಗಿ ಕೆಟ್ಟು ನಿಲ್ಲಲಿದೆ. ಇದಕ್ಕೆ ಕೇಂದ್ರ ಸಚಿವ ನಿತಿನ್ ಗಡ್ಕರಿ ನೇರ ಹೊಣೆಯಾಗಿದ್ದಾರೆ. ಇದಕ್ಕಾಗಿಯೇ ಮೆಕ್ಯಾನಿಕಲ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಇದೀಗ ಭಾರೀ ಬೇಡಿಕೆ ಕಂಡು ಬಂದಿದೆ. ಜನಸಾಮಾನ್ಯರ ಮೇಲೆ ಎಥೆನಾಲ್ ಪ್ರಯೋಗ ಸರಿಯಲ್ಲ. ಆತಂಕದಲ್ಲಿರುವ ಚಾಲಕರು, ವಾಹನ ಮಾಲೀಕರಿಗೆ ವಿಶೇಷ ಪ್ಯಾಕೇಜ್ ನಡಿ ಒಂದು ಲಕ್ಷ ರೂ ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಎಥೆನಾಲ್ ನಿಂದ ದೀರ್ಘಕಾಲಕ್ಕಿಂತ ತಕ್ಷಣದ ಪ್ರತಿಕೂಲ ಪರಿಣಾಮಗಳ ಬಗ್ಗೆ ವಾಹನ ಮಾಲೀಕರು ಚಿಂಚಿತರಾಗಿದ್ದಾರೆ. ಉತ್ತರ ಭಾರತದಲ್ಲಿ ಎಥೆನಾಲ್ ವಿರುದ್ಧ ದೊಡ್ಡ ಮಟ್ಟದ ಆಕ್ರೋಶ ವ್ಯಕ್ತವಾಗಿದ್ದು, ದಕ್ಷಿಣದಲ್ಲಿ ಬಿಸಿ ತಟ್ಟುತ್ತಿದೆ. ದ್ವಿಚಕ್ರ, ಕಾರು, ಆಟೋ ಮತ್ತಿತರ ವಾಹನ ಚಾಲಕರಿಗೆ ನಮ್ಮ ವಾಹನದ ಎಂಜಿನ್ ಗತಿ ಏನು? ಕೆಟ್ಟು ನಿಂತರೆ ಯಾರು ಜವಾಬ್ದಾರರು ಎಂಬ ಆತಂಕ ಕಾಡುತ್ತಿದೆ. ಹಳೆಯ ಅಥವಾ ಇ 20–ಗೆ ಹೊಂದಿಕೆ ಯಾಗದ ಎಂಜಿನ್ ಗಳಲ್ಲಿ ಉಂಟಾಗಬಹುದಾದ ಸಮಸ್ಯೆಗಳ ಬಗ್ಗೆ ಕಳವಳ ಉಂಟಾಗಿದೆ.

ಪರಿಸರ ಉಳಿಸುವುದು ಒಂದು ನೆಪವಾಗಿದ್ದು, ಜನರ ಜೇಬಿಗೆ ಸರ್ಕಾರ ನೇರವಾಗಿ ಕೊಳ್ಳಿ ಇಟ್ಟಿದೆ. "ಹಸಿರು ಇಂಧನ" ಎಂದು ಬಿಂಬಿಸುತ್ತಿದ್ದು, ಈ ಹಸಿರು ನೀತಿಯ ಹೊರೆ ಹೊರುತ್ತಿರುವವರು ಸಾಮಾನ್ಯ ವಾಹನ ಮಾಲೀಕರು ಎಂದು ಹೇಳಿದ್ದಾರೆ.

ಹಳೆಯ ವಾಹನಗಳಲ್ಲಿ ರಬ್ಬರ್ ಪೈಪ್‌ಗಳು, ಗ್ಯಾಸ್ಕೆಟ್ ಮತ್ತು ಪ್ಲಾಸ್ಟಿಕ್ ಭಾಗಗಳ ಮೇಲೆ ಎಥನಾಲ್ ನಿಂದ ಪರಿಣಾಮ ಬೀರಲಿದೆ. ಇಂಧನ ಸೋರಿಕೆ, ತುಕ್ಕು ಹಿಡಿಯುವ ಜೊತೆಗೆ ನಿರ್ವಹಣಾ ವೆಚ್ಚ ಹೆಚ್ಚಲಿದೆ. ಪರಿಸರ ಸಂರಕ್ಷಣೆ ನೆಪದಲ್ಲಿ ಸಾಮಾನ್ಯ ಜನ ರ ಮೇಲೆ ಪ್ರಯೋಗ ನಡೆಸುತ್ತಿರುವುದು ಸರಿ ಇಲ್ಲ. ಪರಿಸರವೂ ಉಳಿಯಬೇಕು, ವಾಹನಗಳ ಆಯುಷ್ಯ ಹೆಚ್ಚಾಗಬೇಕು. ಜನರ ಆರ್ಥಿಕ ಸ್ಥಿತಿಯೂ ಹದಗೆಡಬಾರದು. ಈ ಗುರಿಗಳನ್ನು ಸಮತೋಲನ ಗೊಳಿಸುವ ನೀತಿಯೇ ನಿಜವಾದ ಜನಪರ ಇಂಧನ ನೀತಿಯಾಗಬೇಕು. ಆದರೆ ಏಕಾಏಕಿ ಇ20 ನೀತಿ ಜಾರಿಗೆ ತಂದಿರುವುದರ ಹಿಂದೆ ಸಾಮಾನ್ಯ ಜನರ ಹಿತಾಸಕ್ತಿಯನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿದೆ ಎಂದು ಡಾ. ಆನಂದ ಕುಮಾರ್ ಟೀಕಿಸಿದ್ದಾರೆ.

ಇ 20–ಗೆ ಹೊಂದಿಕೆಯಾಗದ ವಾಹನಗಳ ಪರಿವರ್ತನೆಗೆ ಆರ್ಥಿಕ ನೆರವು ನೀಡಬೇಕು. ಗ್ರಾಹಕರ ಹಿತಾಸಕ್ತಿಯ ರಕ್ಷಣೆ ಇಲ್ಲದಿದ್ದಲ್ಲಿ "ಎಥನಾಲ್ ಕ್ರಾಂತಿ" ಎಂಬ ಹೆಸರಿನಲ್ಲಿ ಸಾಮಾನ್ಯ ವಾಹನ ಸವಾರರೇ ಭಾರೀ ಬೆಲೆ ತೆರಬೇಕಾದ ಪರಿಸ್ಥಿತಿ ಉಂಟಾಗಬಹುದು. ಎಲ್ಲಾ ವಾಹನಗಳಿಗೆ ಒಂದೇ ರೀತಿಯ ಪರಿಹಾರ ಎಂದು ಪರಿಗಣಿಸುವುದು ವೈಜ್ಞಾನಿಕ ದೃಷ್ಟಿಯಿಂದ ಸರಿಯಲ್ಲ. ಎಥನಾಲ್ ನೀತಿಯ ಯಶಸ್ಸು ಕೇವಲ ಮಿಶ್ರಣದ ಪ್ರಮಾಣದಲ್ಲಲ್ಲ; ಅದು ವೈಜ್ಞಾನಿಕ ಸಂಶೋಧನೆ, ವಾಹನ ತಂತ್ರಜ್ಞಾನ, ಗ್ರಾಹಕರ ವಿಶ್ವಾಸ ಮತ್ತು ಪಾರದರ್ಶಕ ಅನುಷ್ಠಾನದ ಮೇಲೆ ಅವಲಂಬಿತವಾಗಬೇಕು ಎಂದು ಹೇಳಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ರೈತರ ಹೊಟ್ಟೆ ಮೇಲೆ ಹೊಡೆದು ಜಮೀನು ಕಬಳಿಸಲು ಬಿಡಲ್ಲ

**ರಾಜ್ಯ ಸರ್ಕಾರದ ವಿರುದ್ಧ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಗುಡುಗು**

**ಬಿಡದಿ ಟೌನ್‌ಶಿಪ್ ವಿರೋಧಿ ಪಾದಯಾತ್ರೆಯಲ್ಲಿ ಭಾಗಿ**



**ಬೆಂಗಳೂರು, ಆ.10:** ರೈತರ ಹೊಟ್ಟೆ ಮೇಲೆ ಹೊಡೆದು, ಜಮೀನು ಕಬಳಿಸಲು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಗುಡುಗಿದ್ದಾರೆ.

ಬಿಡದಿ ಟೌನ್‌ಶಿಪ್ ವಿರೋಧಿಸಿ ಜೆಡಿಎಸ್ ನಡೆಸುತ್ತಿರುವ ಎರಡನೇ ದಿನದ ಪಾದಯಾತ್ರೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನೀವು ರಾಜ್ಯ ಆಳುತ್ತಿದ್ದೀರಿ ಅದಕ್ಕೆ ನಮ್ಮ ವಿರೋಧವಿಲ್ಲ. ಆದರೆ ರೈತರನ್ನು ಬೀದಿಗೆ ತಳ್ಳುವುದು, ಅವರ ಹೊಟ್ಟೆ ಮೇಲೆ ಹೊಡೆದು ಇಲ್ಲಿ ಲೇಔಟ್‌ಗಳನ್ನು ಮಾಡುತ್ತೇವೆ ಎಂದು ಹೇಳುತ್ತಿದ್ದೀರಲ್ಲಾ, ನಿಮಗೆ ಯಾರು ನಿವೇಶನ ಬೇಕು ಎಂದು ಅರ್ಜಿ ಕೊಟ್ಟಿದ್ದಾರೆ ಎಂದು ಗೌಡರು ಪ್ರಶ್ನಿಸಿದರು.

ನೀವು ಮುಖ್ಯಮಂತ್ರಿಯಾಗಲು ದೆಹಲಿಗೆ ಹೋಗಿ ಯಾರ ಜೊತೆ ಚರ್ಚೆ ಮಾಡಿದ್ದೀರಿ, ಯಾವ ಸಹಾಯ ಮಾಡುತ್ತೇನೆ ಎಂದು ಮಾತು ಕೊಟ್ಟು ಬಂದಿದ್ದೀರಿ ಅದನ್ನು ಬಹಿರಂಗಪಡಿಸಿ ಎಂದು ಸಿಎಂ ಡಿ.ಕೆ.ಶಿವಕುಮಾರ್‌ಗೆ ಸವಾಲು ಹಾಕಿದರು. 7,481 ಎಕರೆ ರೈತರ ಜಮೀನನ್ನು ಕಬಳಿಸುತ್ತಿರುವ ಹುನ್ನಾರದ ಹಿಂದೆ ಹಲವಾರು ಯೋಜನೆಗಳಿವೆ. ನೀವು ನಿನ್ನೆ ದೆಹಲಿಗೆ ಹೊರಡುವ ಮುನ್ನ ಯಾರಿಗೂ ಬಲವಂತ ಮಾಡುವುದಿಲ್ಲ ಮತ್ತು ಜಮೀನನ್ನು ಬಲವಂತವಾಗಿ ವಶಪಡಿಸಿಕೊಳ್ಳುವುದಿಲ್ಲ ಎಂದು ಹೇಳಿದ್ದೀರಿ. ಅದರಂತೆ ನಡೆದುಕೊಳ್ಳಿ. ನಿಮಗೆ ಕೈಮುಗಿದು ಕೇಳಿಕೊಳ್ಳುತ್ತೇನೆ. ಅರ್ಧ ಎಕರೆ ಇರಲಿ, ಒಂದು ಎಕರೆ ಇರಲಿ, 20 ಗುಂಟೆ ಜಾಗ ಇರಲಿ ಅವರು ಬದುಕು ಕಟ್ಟಿಕೊಳ್ಳುತ್ತಾರೆ. ನೀವು ಅವರನ್ನು ಬೀದಿಗೆ ದೂಡಬೇಡಿ ಎಂದು ಒತ್ತಾಯಿಸಿದರು.

ರೈತರ ಹೊಟ್ಟೆ ಮೇಲೆ ಹೊಡೆಯುವಂತಹ ಯಾವುದೇ ಯೋಜನೆಯನ್ನು ನಾನು ಖಂಡಿಸುತ್ತೇನೆ. ನನ್ನ ದೇಹಕ್ಕೆ ವಯಸ್ಸಾಗಿರಬಹುದು. ಆದರೆ ಬುದ್ಧಿಗೆ ವಯಸ್ಸಾಗಿಲ್ಲ. ಹೋರಾಟಕ್ಕೆ ಸದಾ ಸಿದ್ಧನಿದ್ದೇನೆ. ಯಾರೂ ಕೂಡಾ ಧೃತಿಗೆಡಬಾರದು, ಎದೆಗುಂದಬಾರದು. ಈ ಹೋರಾಟ ರೈತರನ್ನು ಉಳಿಸುವ ಹೋರಾಟ. ಯಾವುದೇ ಕಾರಣಕ್ಕೂ ಬಿಡದಿ ಟೌನ್‌ಶಿಪ್‌ಗೆ ಅವಕಾಶ ನೀಡುವುದಿಲ್ಲ ಎಂದರು. ಒಕ್ಕಲಿಗರು ಮುಖ್ಯಮಂತ್ರಿಯಾದರೆ ಸಹಿಸುವುದಿಲ್ಲ, ಹೊಟ್ಟೆ ಉರಿ ಎಂದು ಹೇಳುತ್ತೀರ. ನಿಮಗೆ ಇನ್ನೂ ಒಂದೂವರೆ ವರ್ಷ ಅಧಿಕಾರ ಅವಧಿ ಇದೆ. ಒಳ್ಳೆಯ ಕೆಲಸ ಮಾಡಿ. ಅದಕ್ಕೆ ನಮ್ಮ ಸಹಕಾರವಿದೆ ಆದರೆ ನೂರಾರು ರೈತರ ಜಮೀನನ್ನು ಕಬಳಿಸುತ್ತಿದ್ದೀರಲ್ಲಾ ಅದಕ್ಕೆ ಹೊಟ್ಟೆ ಉರಿಯುತ್ತಿದೆ ಎಂದು ಲೇವಡಿ ಮಾಡಿದರು. ಪಾದಯಾತ್ರೆಯಲ್ಲಿ ಮಾಜಿ ಸಚಿವ ಪುಟ್ಟರಾಜು, ಹರೀಶ್‌ಗೌಡ, ಶರಣಗೌಡ ಕುಂದಪುರ, ಎ.ಮಂಜು, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ರಾಮನಗರ ತಾಲೂಕು ಅಧ್ಯಕ್ಷ ಶಿವಲಿಂಗಯ್ಯ, ಕರಿಯಮಾಜಿ, ರವಿಕುಮಾರ್, ಪೈಲ್ವಾನ್ ಪುಟ್ಟರಾಜು ಸೇರಿದಂತೆ ಹಲವಾರು ನಾಯಕರು, ಸಾವಿರಾರು ರೈತರು ಪಾಲ್ಗೊಂಡಿದ್ದರು.

## ಪ್ರಾಧಿಕಾರದ ಬಳಿ ಹಣ ಇದೆಯೇ? ನಿಖಿಲ್ ಕುಮಾರಸ್ವಾಮಿ

ಇದೇ ವೇಳೆ ಯುವಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿ, ಡಿ.ಕೆ.ಶಿವಕುಮಾರ್‌ರವರು ಪ್ರತಿ ಎಕರೆಗೆ 3 ಕೋಟಿ ರೂ. ಕೊಡುತ್ತೇವೆ ಎಂದು ಹೇಳುತ್ತಿದ್ದಾರೆ. ನೀವು 2 ಕೋಟಿ ರೂ. ಕೊಡಿ. ಅದಕ್ಕೆ ಬೇಕಾಗುವ 11.50 ಸಾವಿರ ಕೋಟಿ ಪ್ರಾಧಿಕಾರದ ಬಳಿ ಇದೆಯೇ ಎಂಬುದನ್ನು ತೋರಿಸಿ ಎಂದು ಟೀಕಿಸಿದರು.

ಈಗಾಗಲೇ ಬಿಡಿಎ, ಬಿಎಂಆರ್‌ಡಿಎ ಸೇರಿದಂತೆ ಹಲವಾರು ಸಂಸ್ಥೆಗಳ ಮೂಲಕ ಖಾಲಿ ನಿವೇಶನಗಳನ್ನು ಮಾರಾಟ ಮಾಡುವ ಜಾಹೀರಾತುಗಳನ್ನು ನೀಡಿ ಹಣ ಶೇಖರಣೆಗೆ ಮುಂದಾಗುತ್ತಿದ್ದೀರಿ. ಬಿಡದಿ ಟೌನ್‌ಶಿಪ್ ಹೆಸರಿನಲ್ಲಿ ರಿಯಲ್ ಎಸ್ಟೇಟ್ ದಂಧೆ ಮಾಡಿ ನಿಮ್ಮ ಜೇಬು ತುಂಬಿಸಿಕೊಳ್ಳಲು ಯತ್ನಿಸುತ್ತಿದ್ದೀರಿ ಎಂದು ಆರೋಪಿಸಿದರು.

ಕನಕಪುರ ರೈತರಿಗೆ ಜಮೀನು ಮಾರಬೇಡಿ ಎನ್ನುತ್ತೀರ. ಆದರೆ ಇಲ್ಲಿ ನೀವು ರೈತರ ಜಮೀನನ್ನು ಕಬಳಿಸುತ್ತಿದ್ದೀರ. ಫ್ರೀಡಂ ಪಾರ್ಕ್‌ವರೆಗೂ ನಾವು ಹೋರಾಟ ನಡೆಸಲು ಮುಂದಾಗಿರುವಾಗ ಅದನ್ನು ತಡೆಯಲು ನೀವು ಯತ್ನಿಸುತ್ತಿದ್ದೀರ ಎಂದು ನೇರ ಆರೋಪ ಮಾಡಿದರು.

# ಬಿಡದಿ ಟೌನ್‌ಶಿಪ್ ವಿರೋಧಿ ಪಾದಯಾತ್ರೆ ಕಾಂಗ್ರೆಸ್ ಸರ್ಕಾರಕ್ಕೆ ಮರಣ ಶಾಸನವಾಗಲಿದೆ: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಎಚ್ಚರಿಕೆ

**ರಾಮನಗರ, ಆ.10:** ದ ಗ್ರೇಟ್ ಡಿ.ಕೆ.ಶಿವಕುಮಾರ್ ಅವರು ದೆಹಲಿಯಲ್ಲಿರುವ ಕಾಂಗ್ರೆಸ್ ಅಧಿನಾಯಕರಿಗೆ ಪ್ರತಿ ತಿಂಗಳು ಹಣ ಕೊಡುವುದಾಗಿ ಅಗ್ರಿಮೆಂಟ್ ಮಾಡಿಕೊಂಡು ಬಂದಿದ್ದಾರೆ. ಅಲ್ಲಿಗೆ ಹಣ ಕೊಡಲು ಬಿಡದಿ ಟೌನ್‌ಶಿಪ್ ಯೋಜನೆ ಮಾಡುತ್ತಿದ್ದಾರೆ. ಈ ಪಾದಯಾತ್ರೆಯೇ ಕಾಂಗ್ರೆಸ್ ಸರ್ಕಾರಕ್ಕೆ ಮರಣ ಶಾಸನವಾಗಲಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಎಚ್ಚರಿಕೆ ನೀಡಿದರು.

ಬೈರಮಂಗಲ ವೃತ್ತದಲ್ಲಿ ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಜೆಡಿಎಸ್ ಯುವ ಘಟಕ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದ ಪಾದಯಾತ್ರೆಗೆ ಚಾಲನೆ ನೀಡಿದ ಅವರು, ಮುಖ್ಯಮಂತ್ರಿ ಸ್ಥಾನ ನೀಡಿದ್ದಕ್ಕಾಗಿ ಡಿ.ಕೆ.ಶಿವಕುಮಾರ್ ಪ್ರತಿ ತಿಂಗಳು ಹಣ ಕೊಡುವ ಅಗ್ರಿಮೆಂಟ್ ಮಾಡಿಕೊಂಡು ಬಂದಿದ್ದಾರೆ ಎಂದು ಟೀಕಿಸಿದರು.

ಪಾದಯಾತ್ರೆ ರೈತರ ಸಮಸ್ಯೆಗಳಿಗೆ ಪರಿಹಾರ ದೊರಕಿಸುವ ದಿಕ್ಸೂಚಿ ಜತೆಗೆ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಮರಣಶಾಸನವೂ ಆಗಲಿದೆ. ಭ್ರಷ್ಟ ಸರ್ಕಾರವನ್ನು ಕಿತ್ತೊಗೆಯಲು ಈ ಪಾದಯಾತ್ರೆ ಮೂಲಕ ರೈತರು ಅಡಿಪಾಯ ಹಾಕಿದ್ದಾರೆ ಎಂದು ಹೇಳಿದರು.

**ರೈತರು ಮರುಳಾಗಬೇಡಿ:**

ಮುಖ್ಯಮಂತ್ರಿ ಟೌನ್‌ಶಿಪ್ ಯೋಜನೆ ವಿಷಯದಲ್ಲಿ ಅತಿ ಕಾಳಜಿ ವಹಿಸುತ್ತಿದ್ದಾರೆ. ಮತ್ತೊಂದೆಡೆ ನೈಸ್ (ಬಿಎಂಐಸಿ) ಯೋಜನೆಗೆ ಭೂಸ್ವಾಧೀನ ಮಾಡಿಕೊಂಡು 30 ವರ್ಷ ಕಳೆದರೂ ಭೂಮಿ ಕಳೆದುಕೊಂಡವರಿಗೆ ಪರಿಹಾರ ಮತ್ತು ನಿವೇಶನ ಕೊಟ್ಟಿಲ್ಲ. ಯಾರಿಗೋ ಲಾಭ ಮಾಡಿಕೊಡಲು ಪ್ರಯತ್ನಿಸುತ್ತಿದ್ದಾರೆ. ಈಗ ಬಿಡದಿಯಲ್ಲಿ ಭೂಸ್ವಾಧೀನ ಮಾಡಿಕೊಳ್ಳುವ ಒಂದು ಎಕರೆಗೆ 2 ಕೋಟಿ ರೂ. ಭೂ ಪರಿಹಾರ ಕೊಡುವುದಾಗಿ ಹೇಳುತ್ತಿದ್ದವರು ಇಂದು 3 ಕೋಟಿ ರೂ. ಕೊಡುವುದಾಗಿ ಹೇಳುತ್ತಿದ್ದಾರೆ. ಯಾವ ಆಧಾರದ ಮೇಲೆ ಹೇಳಿದ್ದಾರೆ. ಇದೇನು ಚೌಕಾಸಿ ವ್ಯಾಪಾರವೇ?. ಇದಕ್ಕೆ ರೈತರು ಮರುಳಾಗಬಾರದು. ಮುಖ್ಯಮಂತ್ರಿಗಳು ಮೋಸ ಮಾಡುತ್ತಿದ್ದಾರೆ ಎಂದು ಎಚ್.ಡಿ. ಕುಮಾರಸ್ವಾಮಿ ಎಚ್ಚರಿಸಿದರು.

**ನೈಸ್–ಬಿಡದಿ ಟೌನ್‌ಶಿಪ್ ಎರಡೂ ಭ್ರಷ್ಟಾಚಾರದ ಯೋಜನೆಗಳು**

ಬಿಡದಿ ಟೌನ್ಶಿಪ್ ಹಾಗೂ ನೈಸ್ ಬ್ರಹ್ಮಾಂಡ ಭ್ರಷ್ಟಾಚಾರದ ಯೋಜನೆಗಳಾಗಿವೆ. ಎರಡೂ ಯೋಜನೆಗಳು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಕಾಗೋಡು ತಿಮ್ಮಪ್ಪ ಅಧ್ಯಕ್ಷತೆಯ ಸತ್ಯಶೋಧನಾ ಸಮಿತಿಯಲ್ಲಿ 2ನೇ ಹೆಸರು ಡಿ.ಕೆ.ಶಿವಕುಮಾರ್ ಅವರದ್ದಾಗಿದೆ. 2 ಸಾವಿರ ಎಕರೆ ನೋಟಿಫಿಕೇಷನ್ ಆಗಿದೆಯೆಂದು ಸಮಿತಿಯಲ್ಲಿ ಹೇಳಿದ್ದರಲ್ಲ. ಆ ಭೂಮಿ ಎಲ್ಲಿ ಹೋಯಿತು ಎಂದು ಎಚ್.ಡಿ. ಕುಮಾರಸ್ವಾಮಿ ಪ್ರಶ್ನೆ ಮಾಡಿದರು. ಬಿಡದಿ ಟೌನ್‌ಶಿಪ್ ಭಾಗದಲ್ಲಿ 6 ಲಕ್ಷ ಲೀಟರ್ ಹಾಲು ಉತ್ಪಾದಿಸಲಾಗುತ್ತಿದೆ. ಜೊತೆಗೆ ರೇಷ್ಮೆ, ಮಾವು, ಅಡಿಕೆ, ತೆಂಗು ಎಲ್ಲವೂ ಇದೆ. ಇಂತಹ ಭೂಮಿಯನ್ನು ಅವರೇ ನೀಡಿದ್ದ ಸತ್ಯಶೋಧನಾ ಸಮಿತಿ ವರದಿಗೆ ವಿರುದ್ಧವಾಗಿ ಟೌನ್‌ಶಿಪ್ ಮಾಡಲು ಹೊರಟಿದ್ದಾರೆ. ದಲ್ಲಾಳಿಗಳು ಮಾತ್ರ ಜಮೀನು ಕೊಡುತ್ತಿದ್ದಾರೆ. ಪಿತ್ರಾರ್ಜಿತ ಆಸ್ತಿ ಹಾಗೂ ಭೂಮಿಯನ್ನೇ ನಂಬಿ ಬದುಕುತ್ತಿರುವ ರೈತರು ಹೋರಾಟ ಮಾಡುತ್ತಿದ್ದಾರೆ. ಅವರ ಪರವಾಗಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಹೋರಾಟ ನಡೆಸುತ್ತಿವೆ ಎಂದರು.

**ನಾನು ಅಧಿಸೂಚನೆ ಹೊರಡಿಸಿರಲಿಲ್ಲ**

2006–07ರಲ್ಲಿ ನಾನು ಮುಖ್ಯಮಂತ್ರಿಯಾಗಿದ್ದಾಗ, ಆ ನಂತರ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಬಿಡದಿ ಯೋಜನೆಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿರಲಿಲ್ಲ. ಕಾಂಗ್ರೆಸ್ ಸರ್ಕಾರವೇ ಪ್ರಾಥಮಿಕ ಹಾಗೂ ಅಂತಿಮ ಅಧಿಸೂಚನೆ ಹೊರಡಿಸಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿದೇಶಗಳಂತೆ ರಸ್ತೆ, ಬೃಹತ್ ಕಾರ್ಖಾನೆ, ಉದ್ಯೋಗ ನಿರ್ಮಿಸಿ ಯುವಕರಿಗೆ ಉದ್ಯೋಗ ಕೊಡುವ ಭರವಸೆ ನೀಡಿದ್ದಾರೆ. ಇದನ್ನು ನಂಬಬೇಕೇ. ಹೀಗೆ ಹೇಳುತ್ತಿರುವ ಇವರು ಕನಕಪುರದಲ್ಲಿ ದಲಿತರ ಭೂಮಿಯನ್ನು ಲೂಟಿ ಹೊಡೆದಿದ್ದಾರೆ ಎಂದು ಎಚ್.ಡಿ. ಕುಮಾರಸ್ವಾಮಿ ಆರೋಪ ಮಾಡಿದರು.

### ಬಿಡದಿ ಪಾದಯಾತ್ರೆಯಲ್ಲಿ ಗೊಂದಲವಿಲ್ಲ: ವಿಜಯೇಂದ್ರ

ಬಿಡದಿ ಟೌನ್‌ಶಿಪ್ ವಿರೋಧಿಸಿ ಪಾದಯಾತ್ರೆ ವಿಷಯದಲ್ಲಿ ಬಿಜೆಪಿ– ಜೆಡಿಎಸ್ ನಡುವೆ ಗೊಂದಲ ಇಲ್ಲ. ನಾವು ಈ ಪಾದಯಾತ್ರೆಗೆ ಸಾಂಕೇತಿಕವಾಗಿ ಬೆಂಬಲ ಕೊಟ್ಟಿದ್ದು, ವಿಪಕ್ಷ ನಾಯಕ ಆರ್.ಅಶೋಕ್ ಪಾಲ್ಗೊಂಡಿದ್ದಾರೆ. ನಾವು ರೈತರ ಪರವಾಗಿದ್ದು, ಸದನದಲ್ಲೂ ಹೋರಾಟ ನಡೆಸಲಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರ ಮೇಲೆ ಸರಕಾರ ಒತ್ತಡ ಹೇರುತ್ತಿದೆ ಎಂದು ಆಕ್ಷೇಪಿಸಿದರು. ಬಿಡದಿ ವಿಚಾರ, ವಿಮಾನನಿಲ್ದಾಣದ ವಿಷಯದಲ್ಲಿ ರೈತರ ಸಮಸ್ಯೆಗಳು ಬಂದಾಗ ನಾವು ರೈತರ ಪರವಾಗಿ ಇರುತ್ತೇವೆ ಎಂದು ಪ್ರಶ್ನೆಗೆ ಉತ್ತರಿಸಿದರು.

# ಸಂಪುಟದಲ್ಲಿ ಯಾರಿರಬೇಕು ಎನ್ನುವುದು ಸಿಎಂ ಆದ್ಯತೆ

**ಯಾರನ್ನು ಕೈಬಿಡಬೇಕು ಎನ್ನುವುದು ಮುಖ್ಯಮಂತ್ರಿಗೆ ಸವಾಲಾಗಿದೆ: ಸಚಿವ ಪ್ರಿಯಾಂಕ್ ಖರ್ಗೆ**

**ಕಲಬುರಗಿ, ಆ.10:** ರಾಜ್ಯದಲ್ಲಿ 224 ವಿಧಾನಸಭಾ ಸದಸ್ಯರ ಪೈಕಿ ಶೇ.15ರಷ್ಟು ಮಂದಿಗೆ ಮಾತ್ರ ಸಚಿವ ಸ್ಥಾನ ನೀಡಲು ಅವಕಾಶವಿದ್ದು, 135 ಶಾಸಕರಿರುವ ಸಂದರ್ಭದಲ್ಲಿ ಯಾರನ್ನು ಸಚಿವರನ್ನಾಗಿ ಮಾಡಬೇಕು, ಯಾರನ್ನು ಕೈಬಿಡಬೇಕು ಎಂಬುದು ಮುಖ್ಯಮಂತ್ರಿಗಳಿಗೆ ಇರುವ ಸವಾಲಾಗಿದೆ ಎಂದು ಗೃಹ, ಐ.ಟಿ–ಬಿ.ಟಿ ಹಾಗೂ ಇ–ಆಡಳಿತ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲಬುರಗಿ ತಾಲೂಕಿನ ಅವರಾದ ಬಿ. ಗ್ರಾಮಕ್ಕೆ ಭೇಟಿ ನೀಡಿ ಮುಂಗಾರು ಮಳೆಯ ಕೊರತೆಯಿಂದ ಹಾನಿಗೊಳಗಾದ ಬೆಳೆ ಪ್ರದೇಶಗಳನ್ನು ವೀಕ್ಷಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಪುಟದಲ್ಲಿ ಯಾರು ಇರಬೇಕು, ಯಾರು ಇರಬಾರದು ಎನ್ನುವುದು ಮುಖ್ಯಮಂತ್ರಿಗಳ ಆದ್ಯತೆ. ನನಗೆ ಗೃಹ ಸಚಿವರ ಜವಾಬ್ದಾರಿ ನೀಡಲಾಗಿದೆ. ಅದನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದೇನೆ. ಆ ಜವಾಬ್ದಾರಿ ತೆಗೆದರೆ ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡುತ್ತೇನೆ ಎಂದು ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೆಹಲಿಗೆ ತೆರಳಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಸಚಿವರು ಆಯ್ಕೆಯಾದ ಬಳಿಕ ಅಥವಾ ಸಂಪುಟಕ್ಕೆ ಸಂಬಂಧಿಸಿದ ವಿಚಾರಗಳಲ್ಲಿ ದೆಹಲಿಗೆ ತೆರಳಿ ಪಕ್ಷದ ಹಿರಿಯರಿಂದ ಸಲಹೆ ಪಡೆಯುವುದು ಸಹಜ ಪ್ರಕ್ರಿಯೆಯಾಗಿದೆ ಎಂದರು.

### ಶೀಘ್ರವೇ ಕೃಷಿ ಖಾತೆಗೆ ಸಚಿವರ ನೇಮಕ: ಬರ ನಿರ್ವಹಣೆಗೆ ವಿಶೇಷ ಆದ್ಯತೆ

ಕೃಷಿ ಸಚಿವರ ಸ್ಥಾನವನ್ನು ಶೀಘ್ರದಲ್ಲೇ ಭರ್ತಿ ಮಾಡಲಾಗುವುದು. ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ಯಾವುದೇ ತೊಂದರೆ ಉಂಟಾಗಬಾರದು ಎಂಬ ಉದ್ದೇಶದಿಂದಲೇ ಜಿಲ್ಲಾ ಉಸ್ತುವಾರಿ ಸಚಿವರಿಗೆ ವಿಶೇಷ ಜವಾಬ್ದಾರಿ ನೀಡಲಾಗಿದೆ. ಕಳೆದ ಎರಡು–ಮೂರು ವರ್ಷಗಳಲ್ಲಿ ರೈತರಿಗೆ ಹೆಚ್ಚಿನ ಪ್ರಮಾಣದ ಪರಿಹಾರ ಒದಗಿಸುವಲ್ಲಿ ಸರಕಾರ ಯಶಸ್ವಿಯಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ಜಿಲ್ಲೆಯ ವಸತಿ ನಿಲಯವೊಂದರಲ್ಲಿ ಕಳಪೆ ಆಹಾರ ಸೇವನೆಯಿಂದ ವಿದ್ಯಾರ್ಥಿಗಳು ಅಸ್ವಸ್ಥಗೊಂಡಿರುವ ಹಿನ್ನೆಲೆಯಲ್ಲಿ, ಜಿಲ್ಲೆಯ ಎಲ್ಲ ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.ವಸತಿ ನಿಲಯಗಳಲ್ಲಿ ಮಕ್ಕಳಿಗೆ ಗುಣಮಟ್ಟದ ಆಹಾರ ಪೂರೈಕೆ, ಶುಚಿತ್ವ, ನೈರ್ಮಲ್ಯ ಹಾಗೂ ಅಗತ್ಯ ಮೂಲಸೌಕರ್ಯಗಳ ಬಗ್ಗೆ ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಬೇಕು. ಯಾವುದೇ ಲೋಪ ಕಂಡುಬಂದಲ್ಲಿ ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.




ಸೋಮವಾರ ದೆಹಲಿಯಲ್ಲಿ ನಡೆದ ಸಂಸತ್ತಿನ ಮುಂಗಾರು ಅಧಿವೇಶನದ ಸಂದರ್ಭದಲ್ಲಿ ಸಂಸತ್ ಭವನದಲ್ಲಿ ರಾಮ ಮಂದಿರ ದೇಣಿಗೆ ದುರುಪಯೋಗ ಪ್ರಕರಣದ ಕುರಿತು ಕಾಂಗ್ರೆಸ್ ಸಂಸದ ಮತ್ತು ಲೋಕಸಭಾ ಸದಸ್ಯ ರಾಹುಲ್ ಗಾಂಧಿ, ಎಸ್‌ಪಿ ನಾಯಕ ಅಖಿಲೇಶ್ ಯಾದವ್ ಮತ್ತು ವಿರೋಧ ಪಕ್ಷದ ಸಂಸದರೊಂದಿಗೆ ಪ್ರತಿಭಟನೆ ನಡೆಸಿದರು.

# ನಕಲಿ ಗಾಂಧಿಗಳಿಗೆ ಬಿಜೆಪಿಯನ್ನು ಟೀಕಿಸುವ ನೈತಿಕತೆ ಇಲ್ಲ

**ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿದ್ದ ಕಾಂಗ್ರೆಸ್ ಎಂದೋ ಕಣ್ಮರೆಯಾಗಿದೆ: ಆರ್.ಅಶೋಕ್**



**ಬೆಂಗಳೂರು, ಆ.10:** ನಕಲಿ ಗಾಂಧಿಗಳಿಗೆ ಬಿಜೆಪಿ ಟೀಕಿಸುವ ಯಾವುದೇ ನೈತಿಕತೆ ಇಲ್ಲ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ.

ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ನಗರದ ಕೆ.ಸಿ. ಜನರಲ್ ಆಸ್ಪತ್ರೆಯ ಮುಂಭಾಗದ ಸರಕಾರಿ ಶಾಲೆ ಬಳಿಯಿಂದ ಸೋಮವಾರ ಹಮ್ಮಿಕೊಳ್ಳಲಾಗಿದ್ದ ತ್ರಿವರ್ಣ ಧ್ವಜ ಯಾತ್ರೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈಗಿರುವ ಕಾಂಗ್ರೆಸ್ ನಕಲಿ ಗಾಂಧಿಗಳದ್ದು. ಒರಿಜಿನಲ್ ಗಾಂಧಿಗಳು ಎಂದೋ ಕಾಣೆಯಾಗಿದ್ದಾರೆ. ಒಂದೇ ಮನೆಯ ಡೂಪ್ಲಿಕೇಟ್ ಗಾಂಧಿಗಳು ಈಗ ಉಳಿದಿದ್ದಾರೆ. ಇವರು ಬಿಜೆಪಿ ಟೀಕಿಸುತ್ತಾರೆ ಎಂದು ವ್ಯಂಗ್ಯವಾಡಿದರು.

ಬಿಜೆಪಿಯವರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿಲ್ಲ ಎಂದು ಕಾಂಗ್ರೆಸ್‌ನವರು ಟೀಕೆ ಮಾಡುತ್ತಾರೆ. ಆದರೆ ಈಗ ಟೀಕೆ ಮಾಡುವವರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾದವರಲ್ಲ. ಆಗಿನ ಕಾಂಗ್ರೆಸ್ ಬೇರೆ ಈಗಿನದ್ದೇ ಬೇರೆ. ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿದ್ದ ಕಾಂಗ್ರೆಸ್ ಎಂದೋ ಕಣ್ಮರೆಯಾಗಿದೆ. ಹಳೆಯ ಕಾಂಗ್ರೆಸ್ ಅನ್ನು ವಿಸರ್ಜನೆ ಮಾಡುವಂತೆ ಮಹಾತ್ಮ ಗಾಂಧಿ ಅವರು ಅಂದೇ ಹೇಳಿದ್ದರು. ಆದರೆ ಹಾಗೆ ಮಾಡಲಿಲ್ಲ. ಇಂತಹವರೆಲ್ಲ ಸೇರಿಕೊಂಡು ಬಿಜೆಪಿ ಟೀಕೆ ಮಾಡುತ್ತಿದ್ದಾರೆ ಎಂದಿದ್ದಾರೆ.

ಹರ್‌ಘರ್ ತಿರಂಗಾ ಅಭಿಯಾನದಲ್ಲಿ ನಾಗರಿಕರು ಸಕ್ರಿಯವಾಗಿ, ಉತ್ಸಾಹದಿಂದ ಭಾಗವಹಿಸಿ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಕರೆ ನೀಡಿದ್ದಾರೆ. ನಾವೆಲ್ಲ ಸೇರಿ ಈ ಅಭಿಯಾನವನ್ನು ಯಶಸ್ವಿಗೊಳಿಸೋಣ. ಇದರ ಅಂಗವಾಗಿ ಇಂದು ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಮನೆಮನೆಗೆ ತಿರಂಗವನ್ನು ಕೊಂಡೊಯ್ಯುವ ಕೆಲಸವನ್ನು ಬಿಜೆಪಿ ಹಮ್ಮಿಕೊಂಡಿದೆ ಎಂದು ಹೇಳಿದರು.

# ನದಿಗೆ ರಾಸಾಯನಿಕ ತ್ಯಾಜ್ಯ: ಮೂರು ಕೈಗಾರಿಕೆ ಮುಚ್ಚಲು ಈಶ್ವರ ಖಂಡ್ರೆ ಸೂಚನೆ



**ಬೆಂಗಳೂರು, ಆ.10:** ಬೀದರ್ ಜಿಲ್ಲೆಯ ಹುಮನಾಬಾದ್ ಕೈಗಾರಿಕಾ ಪ್ರದೇಶದಲ್ಲಿ ಕೈಗಾರಿಕೆಗಳು ಗುರುಗಂಗಾ, ಮಾಂಜ್ರಾ ನದಿಗೆ ರಾಸಾಯನಿಕ ತ್ಯಾಜ್ಯ ಹರಿಯ ಬಿಡುತ್ತಿರುವ ಬಗ್ಗೆ ಜನರು ಪ್ರತಿಭಟನೆ ನಡೆಸುತ್ತಿದ್ದು, ಈ ಕೂಡಲೇ 3 ಕೈಗಾರಿಕೆ ಮುಚ್ಚಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಬೀದರ್ ಜಿಲ್ಲೆ ಪ್ರಕೃತಿ ವಿಕೋಪ ಮೇಲುಸ್ತುವಾರಿ ಸಚಿವ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

ಈ ಸಂಬಂಧ ಜಿಲ್ಲಾಧಿಕಾರಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, 6ಎಚ್ ಇಂಡಸ್ಟ್ರೀಸ್, ಸತ್ಯದೀಪ್ತ ಕೆ. ಇಂಡಸ್ಟ್ರೀ ಮತ್ತು ಹಿಮಾಲಯ ಕೈಗಾರಿಕೆಗಳಿಗೆ ತಕ್ಷಣದಿಂದಲೇ ಜಾರಿಗೆ ಬರುವಂತೆ ಮುಚ್ಚುವ ಆದೇಶ (ಕ್ಲೋಷರ್ ಆರ್ಡರ್) ಹೊರಡಿಸಿ, ಅನುಸರಣಾ ವರದಿಯನ್ನು 24 ಗಂಟೆಯೊಳಗಾಗಿ ಈ ಕಚೇರಿಗೆ ಸಲ್ಲಿಸಲು ಆದೇಶಿಸಿದ್ದಾರೆ.

ಮಾಣಿಕನಗರದ ಹಳ್ಳಕ್ಕೆ, ಗುರುಗಂಗಾ ಮತ್ತು ಮಾಂಜ್ರಾ ನದಿಗಳಿಗೆ ಹುಮನಾಬಾದ್ ಕೈಗಾರಿಕಾ ಪ್ರದೇಶದ ಕೆಲವು ಕಾರ್ಖಾನೆಗಳಿಂದ ವಿಷಯುಕ್ತ ರಾಸಾಯನಿಕ ತ್ಯಾಜ್ಯ ಹರಿಸುತ್ತಿರುವ ಕಾರಣ ನದಿ ಕಲುಷಿತವಾಗಿ ಗಬ್ಬುವಾಸನೆ ಬೀರುತ್ತಿದ್ದು ಮೂಗು ಮುಚ್ಚಿಕೊಂಡು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ. ಜೊತೆಗೆ ಜನ, ಜಾನುವಾರುಗಳಿಗೆ ಮಾರಕವಾದ ಕಾಯಿಲೆಗಳು ಬರುತ್ತಿವೆ ಎಂದು ಸಾರ್ವಜನಿಕರು ಆರೋಪಿಸಿದ್ದು ಗುರುಗಂಗಾ ಉಳಿಸಿ ಎಂದು ಸಾರ್ವಜನಿಕರು ಜಾಥಾ, ಸಭೆ, ಪ್ರತಿಭಟನೆ ಹಾಗೂ ಅಭಿಯಾನ ಆರಂಭಿಸಿದ್ದಾರೆ ಎಂದೂ ತಮ್ಮ ಲಿಖಿತ ಸೂಚನೆಯಲ್ಲಿ ತಿಳಿಸಿದ್ದಾರೆ.

ಈ ಹಳ್ಳದ ನೀರು ಕಾರಂಜಾ ಹಿನ್ನೀರು ಸೇರುವ ಕಾರಣ ಕುಡಿಯುವ ನೀರು ಕಲುಷಿತವಾಗಿ ಸಾರ್ವಜನಿಕ ಆರೋಗ್ಯದ ಮೇಲೆ ತೀವ್ರ ಪರಿಣಾಮ ಆಗುತ್ತದೆ. ಈ ಹಿನ್ನೆಲೆಯಲ್ಲಿ ತಕ್ಷಣವೇ ಈ ಮಾಲಿನ್ಯಕಾರಕ ಕೈಗಾರಿಕೆಗಳನ್ನು ಜಲ ಮೂಲಗಳ ಸಂರಕ್ಷಣೆಯ ಹಿತದೃಷ್ಟಿಯಿಂದ, ಸಮುದಾಯ ಆರೋಗ್ಯ ರಕ್ಷಣೆಯ ಹಿನ್ನೆಲೆಯಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (ಬಿ.ಎನ್.ಎಸ್.ಎಸ್.) 2023ರ ಸೆಕ್ಷನ್ 152ರಡಿಯಲ್ಲಿ ಸಾರ್ವಜನಿಕ ಉಪದ್ರ್ಯಾಪ ತಡೆಯಲು ತುರ್ತು ಕ್ರಮ ವಹಿಸುವ ಅಗತ್ಯ ಮನಗಾಣಲಾಗಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಈ ಸಂಬಂಧ ಮಾಧ್ಯಮಗಳಲ್ಲಿ ಬಂದ ವರದಿಗಳ ಹಿನ್ನೆಲೆಯಲ್ಲಿ ಬೀದರ್ ಜಿಲ್ಲಾ ಪ್ರಕೃತಿ ವಿಕೋಪ ಮೇಲುಸ್ತುವಾರಿ ಸಚಿವನಾಗಿ ನಾನು, ಜಿಲ್ಲಾಡಳಿತಕ್ಕೆ ಸ್ಪಷ್ಟ ಸೂಚನೆ ನೀಡಿ ಈ ಭಾಗದ ನೀರಿನ ಪರೀಕ್ಷೆ ಮಾಡಿಸಿ, ತ್ಯಾಜ್ಯ ಹರಿಸುತ್ತಿರುವ ಕೈಗಾರಿಕೆಗಳ ವಿರುದ್ಧ ನಿಯಮಾನುಸಾರ ಕಠಿಣ ಕ್ರಮ ಜರುಗಿಸಿ, ಜಲ ಮೂಲ ಸಂರಕ್ಷಿಸಲು ಮತ್ತು 48 ಗಂಟೆಗಳ ಒಳಗಾಗಿ ಕೈಗೊಂಡ ಕ್ರಮದ ವರದಿ ಸಲ್ಲಿಸಲು ಸೂಚನೆ ನೀಡಲಾಗಿರುತ್ತದೆ ಎಂಬುದನ್ನು ಸ್ಮರಿಸಿದ್ದಾರೆ.

ಮತ್ತೆ ಈ ಕೈಗಾರಿಕೆಗಳು ಕಾರ್ಯಾಚರಣೆ ಮಾಡಿದ್ದು, ಕೈಗಾರಿಕಾ ತ್ಯಾಜ್ಯ ಜಲ ಮೂಲಗಳನ್ನು ಸೇರುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಮೂಲಗಳು ಕಲುಷಿತವಾಗುತ್ತಿರುವ ಕಾರಣ ಜಲ, ಪರಿಸರ ಸಂರಕ್ಷಣೆ, ಸಾರ್ವಜನಿಕರ ಹಿತದೃಷ್ಟಿ ಮತ್ತು ಸಮುದಾಯ ಆರೋಗ್ಯ ರಕ್ಷಣೆಯ ಹಿನ್ನೆಲೆಯಲ್ಲಿ ತ್ಯಾಜ್ಯವನ್ನು ಹಳ್ಳಕ್ಕೆ ಹರಿಸುತ್ತಿರುವ ಕೈಗಾರಿಕೆಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಈಶ್ವರ ಖಂಡ್ರೆ ನಿರ್ದೇಶನ ನೀಡಿದ್ದಾರೆ.

# ಖಾತೆ ಹಂಚಿಕೆಗೆ ಮೌಖಿಕ ಆದೇಶ: ಅಧಿಕೃತ ಆದೇಶ ಶೀಘ್ರ ಜಾರಿ– ಸಚಿವ ಎಚ್.ಸಿ. ಬಾಲಕೃಷ್ಣ




**ಬೆಂಗಳೂರು, ಆ.10:** ಖಾತೆ ಹಂಚಿಕೆಗಳ ಬಗ್ಗೆ ಮೌಖಿಕವಾಗಿ ಆದೇಶಗಳಾಗಿವೆ. ಅಧಿಕೃತ ಆದೇಶ ಶೀಘ್ರದಲ್ಲೇ ಹೊರ ಬೀಳಲಿದೆ ಎಂದು ಸಚಿವ ಎಚ್.ಸಿ.ಬಾಲಕೃಷ್ಣ ಹೇಳಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆಯ ಕೆಲ ಭಾಗಗಳಲ್ಲಿ ಬರ ಅಧ್ಯಯನ ನಡೆಸುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖಾತೆ ಹಂಚಿಕೆಯಾಗದೇ ಇರುವುದರಿಂದ ಅಧಿವೇಶನದಲ್ಲಿ ತೊಂದರೆಯಾಗುತ್ತದೆ ಎಂಬ ನಿರೀಕ್ಷೆ ಬೇಡ. ನಾವು ಯಶಸ್ವಿಯಾಗಿ ಕಲಾಪ ನಡೆಸುತ್ತೇವೆ ಎಂದು ಹೇಳಿದರು.

ಸರ್ಕಾರದ ವ್ಯವಸ್ಥೆಯಲ್ಲಿ ಕೆಲಸ ಕಾರ್ಯಗಳಾಗುತ್ತಿವೆ. ಸರ್ಕಾರಿ ಅಧಿಕಾರಿಗಳಿಗೆ ವೇತನ ಹಾಗೂ ಇತರ ಸೌಲಭ್ಯಗಳು ದೊರೆಯುತ್ತಿವೆ. ಖಾತೆ ಹಂಚಿಕೆಯಾಗದೇ ಇರುವುದರಿಂದ ಯಾವುದೇ ತೊಂದರೆಯಾಗಿಲ್ಲ, ಕೆಲಸಗಳು ನಿಂತಿಲ್ಲ ಎಂದರು.

ಸಚಿವರಾಗುವ ಅರ್ಹತೆ ಇರುವ ನೂರಕ್ಕೂ ಹೆಚ್ಚು ಮಂದಿ ಕಳೆದ ಬಾರಿ ಚುನಾವಣೆಯಲ್ಲಿ ಗೆದ್ದಿದ್ದಾರೆ. ಸಮಸ್ಯೆ ಬಗೆಹರಿಸುವುದು ಅಷ್ಟು ಸುಲಭವಲ್ಲ, 15–20 ಜನ ಸಚಿವರಾಗುವ ಸಾಮರ್ಥ್ಯ ಇರುವವರು ಗೆದ್ದು ಮುಖ್ಯಮಂತ್ರಿಯಾಗಿದ್ದರೆ, ಅದರ ಮಾತು ಬೇರೆ. ಈಗ ಅರ್ಹತೆ ಇರುವವರ ಸಂಖ್ಯೆ ಜಾಸ್ತಿ ಇದೆ. ಇದು ದೊಡ್ಡ ಸವಾಲು ಕೂಡ ಹೌದು ಎಂದರು. ಅಧಿವೇಶನಕ್ಕೆ ಯಾವುದೇ ತೊಂದರೆಯಾಗುವುದಿಲ್ಲ, ಖಾತೆಗಳ ಬಗ್ಗೆ ಮೌಖಿಕ ಮಾಹಿತಿ ಸಿಕ್ಕಿದೆ. ಅದಕ್ಕನುಗುಣವಾಗಿ ನಾವು ತಯಾರಿ ಮಾಡಿಕೊಂಡಿದ್ದೇವೆ ಎಂದರು.

ಸಚಿವ ಬಿ.ನಾಗೇಂದ್ರ ಅವರ ಷರತ್ತಿನ ನಿಯಮಗಳನ್ನು ಉಲ್ಲಂಘಿಸಿರುವ ಬಗ್ಗೆ ಮಾತನಾಡುವಷ್ಟು ಕಾನೂನು ಪರಿಣತಿ ತಮಗಿಲ್ಲ. ಹೈಕಮಾಂಡ್ ಮತ್ತು ಮುಖ್ಯಮಂತ್ರಿಯವರು ಅದನ್ನು ಗಮನಿಸುತ್ತಾರೆ ಎಂದರು.

**ಎಕರೆಗೆ 3 ಕೋಟಿ ರೂ.**

ಬಿಡದಿಯ ಟೌನ್‌ಶಿಪ್‌ನಲ್ಲಿ ಪ್ರತಿ ಎಕರೆಗೆ 3 ಕೋಟಿ ಕೊಡುವುದು ಹೇಗೆ ಸಾಧ್ಯ? ಮುಖ್ಯಮಂತ್ರಿಯವರು ತಮ ಮಾತಿನಲ್ಲಿ ಎರಡರಿಂದ ಮೂರು ಕೋಟಿ ನೀಡುವುದಾಗಿ ಹೇಳಿದ್ದಾರೆ. ಕೆಲವು ಜಾಗಗಳಲ್ಲಿ ಎರಡು ಕೋಟಿ ಸಿಗಬಹುದು, ಇನ್ನೂ ಕೆಲ ಕಡೆಗಳಲ್ಲಿ ಮೂರು ಕೋಟಿಯಾಗಬಹುದು. ಮರ ಹಾಗೂ ಇತರ ವಸ್ತುಗಳನ್ನು ಲೆಕ್ಕ ಹಾಕಿದರೆ ಮೂರೂವರೆ ಕೋಟಿಯಾಗಬಹುದು ಎಂದು ಎಚ್.ಸಿ. ಬಾಲಕೃಷ್ಣ ತಿಳಿಸಿದರು.

**ನಿಖಿಲ್ ಪಟ್ಟಾಭಿಷೇಕ ಯಾತ್ರೆ**

ಬಿಡದಿ ಟೌನ್‌ಶಿಪ್ ವಿಚಾರವಾಗಿ ಜೆಡಿಎಸ್ ನಡೆಸುತ್ತಿರುವುದು ಪಾದಯಾತ್ರೆಯಲ್ಲ, ಪಶ್ಚಾತ್ತಾಪದ ಯಾತ್ರೆ. ಜೊತೆಗೆ ನಿಖಿಲ್ ಕುಮಾರ್ ಸ್ವಾಮಿಯವರ ಪಟ್ಟಾಭಿಷೇಕ ಯಾತ್ರೆ ಕೂಡ. ಅದರಲ್ಲಿ ಭಾಗವಹಿಸುವವರಿಗೆ ಯಾರಿಗೂ ಗಂಭೀರತೆ ಇಲ್ಲ, ರೈತರ ಪರ ಕಾಳಜಿಯೂ ಇಲ್ಲ. ಬಿಜೆಪಿಯವರಿಗೆ ಸತ್ಯ ಅರಿವಾಗಿದೆ. ಹೀಗಾಗಿ ಅಂತರ ಕಾಯ್ದುಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ತಾವು ಸಚಿವರಾಗಿರುವುದಕ್ಕೆ ಕುಮಾರಸ್ವಾಮಿಯವರು ಲೇವಡಿ ಮಾಡಿದ್ದಾರೆ. ಅವರು ಮುಖ್ಯಮಂತ್ರಿಯಾಗಿದ್ದವರು ಈಗ ಕೇಂದ್ರ ಸಚಿವರಾಗಿದ್ದಾರೆ. ಸಚಿವ ಸ್ಥಾನ ಎಂಬುದು ಅವರಿಗೆ ಯಕಶ್ಚಿತ್ ಇರಬಹುದು. ಆದರೆ ನನಗೆ ದೊಡ್ಡದು. ಭಗವಂತ ಆಂಜನೇಯ ಸ್ವಾಮಿ ಕರುಣಿಸಿದ್ದಾನೆ. ಕುಮಾರಸ್ವಾಮಿ ಬೇರೆಯವರಿಗೆ ಪಟ್ಟಾಭಿಷೇಕ ಮಾಡುವುದಿಲ್ಲ, ತಮಗೆ ತಾವೇ ಮಾಡಿಕೊಳ್ಳುತ್ತಾರೆ ಎಂದರು. ತಾವು ದಳದಲ್ಲಿದ್ದಾಗ ಸಚಿವರನ್ನಾಗಿ ಮಾಡಬಹುದಿತ್ತು, ಮಾಡಲಿಲ್ಲ. ಸಚಿವ ಸ್ಥಾನ ತಪ್ಪಿದ್ದಕ್ಕಾಗಿ ಕನಿಷ್ಠ ಬಿಡಿಎ ಅಧ್ಯಕ್ಷರನ್ನಾದರೂ ಮಾಡಿ ಎಂದು ಆಗಿನ ಸಚಿವರಾದ ಬಸವರಾಜ ಹೊರಟ್ಟಿ, ಚೆನ್ನಿಗಪ್ಪ, ಚಲುವರಾಯ ಸ್ವಾಮಿ ಸೇರಿದಂತೆ ಕೆಲವರು ಕುಮಾರಸ್ವಾಮಿ ಅವರ ಬಳಿ ಕೇಳಿದಾಗ, ದುಡ್ಡು ಹೊಡೆಯಲಿಕ್ಕೆ ಬಿಡಿಎ ಅಧ್ಯಕ್ಷ ಸ್ಥಾನ ಬೇಕೇ ಎಂದು ಕುಮಾರಸ್ವಾಮಿ ಕೇಳಿದ್ದರು. ಇಂತಹವರಿಂದ ಕಾರ್ಯಕರ್ತರು ಏನನ್ನು ನಿರೀಕ್ಷೆ ಮಾಡಬಹುದು ಎಂದು ತಿರುಗೇಟು ನೀಡಿದರು. ಕುಮಾರಸ್ವಾಮಿಯವರಿಗೆ ನನ್ನನ್ನು ಸ್ನೇಹಿತ ಎಂದು ಪರಿಗಣಿಸುವಂತೆ ನಾನೇನೂ ಅರ್ಜಿ ಹಾಕಿಲ್ಲ. ಗುಬ್ಬಿಯ ಎಸ್.ಆರ್.ಶ್ರೀನಿವಾಸ್ ಸ್ವಲ್ಪ ಹೊಗಳಿಕೆ ಮಾತುಗಳನ್ನಾಡಿದಾಕ್ಷಣ ಕುಮಾರಸ್ವಾಮಿ ಅಲ್ಲಿ ಅರ್ಜಿ ಹಾಕಿದ್ದಾರೆ. ಇನ್ನೂ ಮುಂದೆ ಅವರು ಯಾರಿಗೂ ಅರ್ಜಿ ಹಾಕುವುದು ಬೇಡ ಎಂದರು. ನಾನು ಕಾಂಗ್ರೆಸ್‌ನಲ್ಲಿ ಮೊದಲ ಬಾರಿಗೆ ಶಾಸಕನಾಗಿದ್ದೇನೆ. ಜೊತೆಗೆ ಮುಖ್ಯಮಂತ್ರಿಯವರ ತವರು ಜಿಲ್ಲೆಯವನು. ಬೆಂಗಳೂರು ದಕ್ಷಿಣದಲ್ಲಿರುವುದು ಕೇವಲ ನಾಲ್ಕು ಕ್ಷೇತ್ರಗಳು. ಸಚಿವ ಸ್ಥಾನ ನೀಡಲೇ ಬೇಕು ಎಂದೇನೂ ಇಲ್ಲ. ಅಂತಹದರಲ್ಲೂ ತಮಗೆ ಅವಕಾಶ ನೀಡಿದ್ದಾರೆ. ಇದಕ್ಕಾಗಿ ಪಕ್ಷ ಹಾಗೂ ಮುಖ್ಯಮಂತ್ರಿಯವರಿಗೆ ಋಣಿಯಾಗಿದ್ದೇನೆ ಎಂದು ಬಾಲಕೃಷ್ಣ ಹೇಳಿದರು.

**ಹಗಲುಗನಸು ಬೇಡ**

ಅಧಿಕಾರ ಸಿಗದೇ ಇದ್ದ ಮೇಲೆ ಜನರ ಕೆಲಸ ಮಾಡುವುದು ಹೇಗೆ? ಅವರ ನಡವಳಿಕೆ ಜೆಡಿಎಸ್ ಅಧಿಕಾರಕ್ಕೆ ಬರುವಂತಿರಲಿಲ್ಲ. ಅದಕ್ಕಾಗಿ ತಾವು ಆ ಪಕ್ಷ ಬಿಟ್ಟಿದ್ದಾಗಿ ಹೇಳಿದ ಬಾಲಕೃಷ್ಣ, ಹಡಗು ಮುಳುಗುತ್ತದೆ ಎಂದಾಗ ಹೋಗಿ ಬಿಜೆಪಿಯವರ ಜೊತೆ ಸೇರಿಕೊಂಡಿದ್ದಾರೆ. ಇಲ್ಲವಾದರೆ ಜೆಡಿಎಸ್ ಇರುತ್ತಿರಲಿಲ್ಲ ಎಂದರು. ಅಸಮಾಧಾನಿತ ಶಾಸಕರು ಜೆಡಿಎಸ್‌ಗೆ ಸೇರ್ಪಡೆಯಾಗುತ್ತಾರೆ ಎಂದು ಎಚ್.ಡಿ.ಕುಮಾರಸ್ವಾಮಿಯವರು ಹಗಲು ಕನಸು ಕಾಣುವುದು ಬೇಡ. ಅಂತಹ ಪರಿಸ್ಥಿತಿ ಇಲ್ಲ ಎಂದು ಎಚ್.ಸಿ. ಬಾಲಕೃಷ್ಣ ಹೇಳಿದರು.

# ಮಹಿಳಾ ಮೀಸಲಾತಿ ಕಾಯ್ದೆ: ರಾಹುಲ್–ರಿಜಿಜು ವಾಕ್ಸಮರ



**ನವದೆಹಲಿ, ಆ. 10:** ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೊಳಿಸುವ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಮತ್ತು ವಿಪಕ್ಷಗಳ ನಡುವೆ ಮತ್ತೊಮ್ಮೆ ತೀವ್ರ ರಾಜಕೀಯ ಸಮರ ಏರ್ಪಟ್ಟಿದೆ. ಲೋಕಸಭೆ ವಿಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಾಮಾಜಿಕ ಜಾಲತಾಣದಲ್ಲಿ ಪರಸ್ಪರ ವಾಗ್ವಾದಕ್ಕಿಳಿದಿದ್ದಾರೆ. ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಮರುವಿಂಗಡಣೆಯನ್ನು ಒಂದಕ್ಕೊಂದು ತಳುಕು ಹಾಕಿರುವ ಕುರಿತು ಚರ್ಚೆಗಳು ನಡೆದಿವೆ.

ಕಾಂಗ್ರೆಸ್‌ನ ಅಧಿಕೃತ ಖಾತೆಯಲ್ಲಿ ಹಂಚಿಕೊಳ್ಳಲಾದ ವಿಡಿಯೋ ಒಂದರಲ್ಲಿ ಮಾತನಾಡಿದ್ದ ರಾಹುಲ್ ಗಾಂಧಿ, ಮಹಿಳೆಯರು ಸ್ವತಂತ್ರವಾಗಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಸಾಧ್ಯವಾಗದಿದ್ದರೆ ಭಾರತವು ಸಂಪೂರ್ಣವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ. ಮಹಿಳೆಯರ ಸ್ವಾತಂತ್ರ್ಯವು ಕೇವಲ ವಾಣಿಜ್ಯ ಅಥವಾ ರಾಜಕೀಯ ಕ್ಷೇತ್ರಕ್ಕೆ ಮಾತ್ರ ಸೀಮಿತವಾಗಿರದೆ, ಅವರು ರಸ್ತೆಗಳಲ್ಲಿ ಭಯವಿಲ್ಲದೆ ಓಡಾಡುವ ಮತ್ತು ತಮ್ಮ ಪೋಷಕರು, ಪತಿ ಹಾಗೂ ಸಹೋದರರನ್ನು ಪ್ರಶ್ನಿಸುವ ಮಟ್ಟಿಗೆ ಇರಬೇಕು. ಭಾರತ ಮುನ್ನಡೆಯಬೇಕಾದರೆ ಪುರುಷರ ಕಟ್ಟುನಿಟ್ಟಿನ ನಿಯಂತ್ರಣ ಮತ್ತು ಪಿತೃಪ್ರಭುತ್ವದ ಮನಸ್ಥಿತಿಯಿಂದ ಮಹಿಳೆಯರಿಗೆ ಮುಕ್ತಿ ಸಿಗುವುದು ಅಗತ್ಯ ಎಂದಿದ್ದರು.

ಈ ವಿಡಿಯೋಗೆ ಪ್ರತಿಕ್ರಿಯಿಸಿದ್ದ ಸಚಿವ ಕಿರಣ್ ರಿಜಿಜು, ರಾಹುಲ್ ಗಾಂಧಿ ಅವರಲ್ಲಿ ಮನಃ ಪರಿವರ್ತನೆ ಕಾಣಿಸುತ್ತಿದೆ. ಕಾಂಗ್ರೆಸ್ ಪಕ್ಷವು ಇನ್ಮುಂದೆ ಮಹಿಳಾ ಮೀಸಲಾತಿ ಮಸೂದೆಯನ್ನು ಯಾವುದೇ ಷರತ್ತುಗಳಿಲ್ಲದೆ ಬೆಂಬಲಿಸಲಿದೆ ಎಂಬುದಾಗಿ ಭಾವಿಸುತ್ತೇವೆ ಎಂದಿದ್ದರು.

ರಿಜಿಜು ಹೇಳಿಕೆಗೆ ತಕ್ಷಣವೇ ಪ್ರತ್ಯುತ್ತರ ನೀಡಿದ ರಾಹುಲ್ ಗಾಂಧಿ, 2023ರಲ್ಲೇ ಮಹಿಳಾ ಮೀಸಲಾತಿ ಮಸೂದೆಯನ್ನು (ನಾರಿ ಶಕ್ತಿ ವಂದನ್ ಅಧಿನಿಯಮ) ಸಂಸತ್ತು ಸರ್ವಾನುಮತದಿಂದ ಅಂಗೀಕರಿಸಿದೆ. ಅದಕ್ಕೆ ಕಾಂಗ್ರೆಸ್ ಸಂಪೂರ್ಣ ಬೆಂಬಲ ನೀಡಿತ್ತು ಎಂಬುದನ್ನು ಸಂಸದೀಯ ವ್ಯವಹಾರಗಳ ಸಚಿವರಾಗಿ ರಿಜಿಜು ನೆನಪಿಟ್ಟುಕೊಳ್ಳಬೇಕು. ಮಸೂದೆ ಅಂಗೀಕಾರವಾಗಿ ಮೂರು ವರ್ಷಗಳು ಕಳೆದರೂ ಅದನ್ನು ಯಾಕಾಗಿ ಜಾರಿಗೆ ತಂದಿಲ್ಲ ಮತ್ತು ಈಗ ಅದನ್ನು ಅನಗತ್ಯವಾಗಿ ಕ್ಷೇತ್ರ ಮರುವಿಂಗಡಣೆಯೊಂದಿಗೆ ಏಕೆ ಜೋಡಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಯಾವುದೇ ಷರತ್ತುಗಳಿಲ್ಲದೆ 2023ರ ಕಾಯ್ದೆಯನ್ನು ತಕ್ಷಣವೇ ಅನುಷ್ಠಾನಕ್ಕೆ ತರಬೇಕು ಎಂದು ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ.

ರಾಹುಲ್ ಪ್ರತಿಕ್ರಿಯೆಗೆ ಉತ್ತರಿಸಿದ ರಿಜಿಜು, ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಸ್ಥಾನಗಳನ್ನು ಕಾಯ್ದಿರಿಸುವುದು 106ನೇ ಸಂವಿಧಾನ ತಿದ್ದುಪಡಿ ಕಾಯ್ದೆ–2023ರ ಅಡಿಯಲ್ಲಿ ಮಾಡಲಾಗಿದೆ ಎಂಬುದು ರಾಹುಲ್ ಗಾಂಧಿಯವರಿಗೆ ಚೆನ್ನಾಗಿ ತಿಳಿದಿದೆ. ಈ ಕಾಯ್ದೆಯು 2023ರ ನಂತರ ಪ್ರಕಟವಾಗುವ ಜನಗಣತಿ ಆಧಾರಿತ ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆಯ ನಂತರವಷ್ಟೇ ಜಾರಿಗೆ ಬರಲು ಸಾಧ್ಯ ಎಂದಿದ್ದಾರೆ.

ಆದಾಗ್ಯೂ, ಮಹಿಳಾ ಮೀಸಲಾತಿಯನ್ನು ಕ್ಷೇತ್ರ ಮರುವಿಂಗಡಣೆಯೊಂದಿಗೆ ಬೆಸೆಯುವ ಸರ್ಕಾರದ ನಡೆಯನ್ನು ಕಾಂಗ್ರೆಸ್ ತೀವ್ರವಾಗಿ ವಿರೋಧಿಸಿದೆ. ಕ್ಷೇತ್ರ ಪುನರ್ವಿಂಗಡಣೆಯು ಲೋಕಸಭಾ ಸ್ಥಾನಗಳ ಹಂಚಿಕೆಯಲ್ಲಿ ರಾಜ್ಯಗಳ ನಡುವೆ ಬೇರೆಯದೇ ಆದ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ಈ ಜಟಿಲ ಪ್ರಕ್ರಿಯೆಯೊಂದಿಗೆ ಮಹಿಳಾ ಮೀಸಲಾತಿಯನ್ನು ತಳುಕು ಹಾಕುವುದು ಮಹಿಳೆಯರಿಗೆ ಮಾಡುವ ಅನ್ಯಾಯ ಎಂದು ಕಾಂಗ್ರೆಸ್ ವಾದಿಸಿದೆ.

ಕಾಂಗ್ರೆಸ್ ಪ್ರಚಾರ ವಿಭಾಗದ ಅಧ್ಯಕ್ಷ ಪವನ್ ಖೇರಾ ಪ್ರತಿಕ್ರಿಯಿಸಿ, 2011ರ ಹಳೆಯ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಪುನರ್ವಿಂಗಡಣೆ ನಡೆಸಲು ಸರ್ಕಾರವು ಮಹಿಳಾ ಮೀಸಲಾತಿಯನ್ನು ಒಂದು ಕಣ್ಣೊರೆಸುವ ತಂತ್ರವಾಗಿ ಬಳಸಿಕೊಳ್ಳುತ್ತಿದೆ. ಹೊಸ ಜನಗಣತಿ ಸಮಯಕ್ಕೆ ಸರಿಯಾಗಿ ಪೂರ್ಣಗೊಳ್ಳದ ಕಾರಣ, 15 ವರ್ಷಗಳಷ್ಟು ಹಳೆಯದಾದ ಅಂಕಿ–ಅಂಶಗಳನ್ನು ಬಳಸಿ ಕ್ಷೇತ್ರ ಮರುವಿಂಗಡಣೆ ಮಾಡಲು ಸರ್ಕಾರ ಹೊರಟಿದೆ. ಬಿಹಾರ ಮತ್ತು ತೆಲಂಗಾಣ ರಾಜ್ಯಗಳು ಆರು ತಿಂಗಳಿಗಿಂತ ಕಡಿಮೆ ಅವಧಿಯಲ್ಲಿ ಜಾತಿ ಗಣತಿಯನ್ನು ಪೂರ್ಣಗೊಳಿಸಿರುವಾಗ, ಕೇಂದ್ರ ಸರ್ಕಾರವು ವಿಳಂಬ ಮಾಡುತ್ತಿರುವುದೇಕೆ ಎಂದು ಪ್ರಶ್ನಿಸಿದ್ದಾರೆ. ಇದೇ ವೇಳೆ, ಕಿರಣ್ ರಿಜಿಜು ಅವರು ಕರ್ನಾಟಕ ಸರ್ಕಾರದ ಉದಾಹರಣೆಯನ್ನು ನೀಡಿ ಕಾಂಗ್ರೆಸ್ ಪಕ್ಷವನ್ನು ಟೀಕಿಸಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಂಪುಟದಲ್ಲಿ ಒಬ್ಬರೇ ಒಬ್ಬರೂ ಮಹಿಳಾ ಸಚಿವರಿಲ್ಲ. 33% ಮೀಸಲಾತಿಯ ಬಗ್ಗೆ ಕಾಂಗ್ರೆಸ್‌ಗೆ ಇರುವ ಬದ್ಧತೆಯನ್ನು ಇದು ಪ್ರಶ್ನಿಸುವಂತೆ ಮಾಡುತ್ತದೆ ಎಂದಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಡಿ.ಕೆ. ಶಿವಕುಮಾರ್, ಕಾಂಗ್ರೆಸ್ ಮಹಿಳಾ ಪ್ರಾತಿನಿಧ್ಯಕ್ಕೆ ಸದಾ ಬದ್ಧವಾಗಿದೆ. ಮಹಿಳಾ ಮೀಸಲಾತಿ ಮಸೂದೆಯನ್ನು ಬೆಂಬಲಿಸಿದ ಪ್ರಮುಖ ಪಕ್ಷಗಳಲ್ಲಿ ಕಾಂಗ್ರೆಸ್ ಒಂದಾಗಿದೆ. ಈ ಕಾಯ್ದೆಯನ್ನು ತಂದವರೂ ನಾವೇ ಮತ್ತು ಅದನ್ನು ಅಂಗೀಕರಿಸಿದವರೂ ನಾವೇ ಎಂದು ಅವರು ಹೇಳಿದ್ದಾರೆ. ಅಂದಹಾಗೆ, ಸಂಸತ್ತಿನ ಕಲಾಪಗಳ ನಿರ್ವಹಣೆ ವಿಷಯವಾಗಿ ರಿಜಿಜು ಮತ್ತು ರಾಹುಲ್ ಗಾಂಧಿ ನಡುವೆ ನಿರಂತರ ಮಾತುಕತೆ ನಡೆಯುತ್ತಿವೆ. ರಿಜಿಜು ಅವರು ರಾಹುಲ್ ಗಾಂಧಿ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿ, ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಮರುವಿಂಗಡಣೆ ಕ್ರಮಗಳಿಗೆ ವಿರೋಧ ಪಕ್ಷದ ಬೆಂಬಲ ಕೋರಿದ್ದರು. ಆದರೆ, ಈ ಪ್ರಸ್ತಾವಿತ ಶಾಸನದ ಕುರಿತು ಚರ್ಚಿಸಲು ಸರ್ಕಾರವು ಸರ್ವಪಕ್ಷ ಸಭೆ ಕರೆಯಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದ್ದರು.

## ಪ್ರಶ್ನೆಪತ್ರಿಕೆ ಸೋರಿಕೆ: ರಾಂಚಿಯಲ್ಲಿ ಉಗ್ರರೂಪ ಪಡೆದ ಪ್ರತಿಭಟನೆ; ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್



**ರಾಂಚಿ,ಂ.10:** ಜಾರ್ಖಂಡ್‌ನ ರಾಂಚಿಯಲ್ಲಿ ಇಂದು ಜೆಪಿಎಸ್‌ಸಿ ಮತ್ತು ಜೆಎಸ್‌ಎಸ್‌ಸಿ ಪರೀಕ್ಷಾರ್ಥಿಗಳು ನಡೆಸಿದ ವಿಧಾನಸಭೆ ಮುತ್ತಿಗೆ ಚಳವಳಿ ಉಗ್ರರೂಪ ಪಡೆದಿದೆ. ಜಾರ್ಖಂಡ್ ವಿಧಾನಸೌಧದ ಕಡೆಗೆ ನುಗ್ಗಲು ಯತ್ನಿಸಿದ ಪ್ರತಿಭಟನಾಕಾರರನ್ನು ಚದುರಿಸಲು ಭದ್ರತಾ ಸಿಬ್ಬಂದಿ ಲಾಠಿಚಾರ್ಜ್ ಹಾಗೂ ಜಲಫಿರಂಗಿ ಬಳಸಿಸಿದ್ದಾರೆ.

ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ನೇಮಕಾತಿ ಪರೀಕ್ಷೆಗಳಲ್ಲಿ ನಡೆದಿರುವ ಅಕ್ರಮಗಳಿಂದಾಗಿ ವಿದ್ಯಾರ್ಥಿಗಳ ಭವಿಷ್ಯ ಅನಿಶ್ಚಿತತೆಗೆ ಸಿಲುಕಿದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ತಕ್ಷಣವೇ ಪಾರದರ್ಶಕ ಸುಧಾರಣೆಗಳನ್ನು ತರಬೇಕು ಮತ್ತು ಈ ಪ್ರಕರಣವನ್ನು ಸಿಬಿಐ ತನಿಖೆ ಕೊಡಬೇಕೆಂದು ಆಗ್ರಹಿಸಿ ಸಾವಿರಾರು ಅಭ್ಯರ್ಥಿಗಳು ಸೋಮವಾರ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ನಿರ್ಧರಿಸಿದ್ದರು.

ತಡೆಬೇಲಿ ಮುರಿದು ಮುನ್ನುಗ್ಗಲು ಯತ್ನಿಸಿದಾಗ ಪೊಲೀಸರು ಲಾಠಿಚಾರ್ಜ್ ನಡೆಸಿದರು. ಇದಕ್ಕೆ ಆಕ್ರೋಶಗೊಂಡ ಪ್ರತಿಭಟನಾಕಾರರು ಪೊಲೀಸರತ್ತ ಚಪ್ಪಲಿ ಹಾಗೂ ಖಾಲಿ ನೀರಿನ ಬಾಟಲಿಗಳನ್ನು ತೂರಿದರು.

ಪೊಲೀಸರು ಜಲಫಿರಂಗಿ ಬಳಸಿ ನೀರನ್ನು ಹಾರಿಸಿದಾಗ, ಕೆಲವು ವಿದ್ಯಾರ್ಥಿಗಳು ಚದುರಿ ಹೋಗದೆ ಎದುರಾಗಿ ನಿಂತು ಕುಣಿದು ಕುಪ್ಪಳಿಸಿದರು.

ಉಪವಾಸ ಸತ್ಯಾಗ್ರಹದಲ್ಲಿದ್ದ ವಿದ್ಯಾರ್ಥಿ ನಾಯಕ ದೇವೇಂದ್ರ ಮಹತೋ ಮಾತನಾಡಿ, ಪೊಲೀಸರು ತಡೆದರೆ ಅವರೊಂದಿಗೆ ಜಗಳವಾಡಬೇಡಿ, ಶಿಸ್ತುಬದ್ಧವಾಗಿ ಬೇರೆ ಮಾರ್ಗಗಳ ಮೂಲಕ ವಿಧಾನಸೌಧವನ್ನು ತಲುಪಲು ಪ್ರಯತ್ನಿಸಿ ಎಂದು ಮನವಿ ಮಾಡಿದರು.ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ವಿದ್ಯಾರ್ಥಿಗಳು ಬೆಳಗ್ಗೆಯೇ ರೈಲು, ಬಸ್ ಹಾಗೂ ಖಾಸಗಿ ವಾಹನಗಳ ಮೂಲಕ ರಾಂಚಿಗೆ ಆಗಮಿಸಿದ್ದರು. ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಡದಂತೆ ತಡೆಯಲು ಆಡಳಿತ ಮಂಡಳಿಯು ಪ್ರಮುಖ ರಸ್ತೆ ಹಾಗೂ ಜಂಕ್ಷನ್‌ಗಳಲ್ಲಿ ಬ್ಯಾರಿಕೇಡ್ ಅಳವಡಿಸಿತ್ತು. ಮುನ್ನೆಚ್ಚರಿಕಾ ಕ್ರಮವಾಗಿ ರಾಂಚಿಯ ಹೆಚ್ಚಿನ ಶಾಲೆಗಳಿಗೆ ಇಂದು ರಜೆ ಘೋಷಿಸಲಾಗಿತ್ತು. ಅಲ್ಲದೆ, ನಗರಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ತಲುಪುವುದನ್ನು ತಡೆಯಲು ಜಿಲ್ಲೆಯ ಗಡಿಗಳು ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಪೊಲೀಸರು ತೀವ್ರ ವಾಹನ ತಪಾಸಣೆ ನಡೆಸಿದರು.

## ಗ್ರಾಮೀಣ ಉದ್ಯೋಗಗಳಲ್ಲಿ ತೀವ್ರ ಕುಸಿತ: ರಮೇಶ್



ನವದೆಹಲಿ, ಆಗಸ್ಟ್ 10: ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜ್ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಜಾರಿಗೆ ಬಂದ ಮೊದಲ ತಿಂಗಳು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯನ್ನು ಬದಲಿಸುವ ಪರಿಣಾಮಗಳನ್ನು ಬಹಿರಂಗಪಡಿಸಿದೆ ಎಂದು ಕಾಂಗ್ರೆಸ್ ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಸೋಮವಾರ ಆರೋಪಿಸಿದ್ದಾರೆ,

ಕಳೆದ ವರ್ಷದ ಇದೇ ತಿಂಗಳಿಗೆ ಹೋಲಿಸಿದರೆ ಜುಲೈ 2026 ರಲ್ಲಿ ಗ್ರಾಮೀಣ ಉದ್ಯೋಗ ಸೃಷ್ಟಿಯಲ್ಲಿ ತೀವ್ರ ಕುಸಿತ ಕಂಡುಬಂದಿದೆ ಎಂದು ಅವರು ಹೇಳಿದ್ದಾರೆ. ಹೊಸ ಚೌಕಟ್ಟಿನ ಮೊದಲ ತಿಂಗಳ ಉದ್ಯೋಗ ಅಂಕಿಅಂಶಗಳು ಕೆಲಸ ಪಡೆಯುವ ಕುಟುಂಬಗಳ ಸಂಖ್ಯೆ ಮತ್ತು ಉದ್ಯೋಗ ಸೃಷ್ಟಿಯಾದ ವ್ಯಕ್ತಿ–ದಿನಗಳೆರಡರಲ್ಲೂ ಗಮನಾರ್ಹ ಇಳಿಕೆಯನ್ನು ತೋರಿಸಿದೆ ಎಂದು ರಮೇಶ್ ಹೇಳಿದರು. "ಮೋದಿ ಸರ್ಕಾರದ VB-G RAM G ಯ ಮೊದಲ ತಿಂಗಳು ನರೇಗಾ ಯೋಜನೆಯನ್ನು ನಾಶಮಾಡುವ ವೆಚ್ಚವನ್ನು ಈಗಾಗಲೇ ಬಹಿರಂಗಪಡಿಸುತ್ತಿದೆ" ಎಂದು ಅವರು ಹೇಳಿದರು. ರಮೇಶ್ ಉಲ್ಲೇಖಿಸಿದ ಅಂಕಿಅಂಶಗಳ ಪ್ರಕಾರ, ಜುಲೈ 2025 ಕ್ಕೆ ಹೋಲಿಸಿದರೆ ಜುಲೈ 2026 ರಲ್ಲಿ ವ್ಯಕ್ತಿಯ ಕೆಲಸದ ದಿನಗಳು ಶೇ. 49.94 ರಷ್ಟು ಕಡಿಮೆಯಾಗಿದೆ, ಆದರೆ ಉದ್ಯೋಗ ಪಡೆದ ಕುಟುಂಬಗಳ ಸಂಖ್ಯೆ ಶೇ. 51.45 ರಷ್ಟು ಕಡಿಮೆಯಾಗಿದೆ.

ಈ ಅಂಕಿಅಂಶಗಳು ಈ ತಿಂಗಳಲ್ಲಿ ಸೃಷ್ಟಿಯಾಗುತ್ತಿರುವ ವ್ಯಕ್ತಿಯ ಕೆಲಸದ ದಿನಗಳ ಶೇ. 50 ರಷ್ಟು ಕಡಿಮೆಯಾಗಿದೆ ಎಂದು ಅವರು ಹೇಳಿದರು. ನರೇಗಾ ಹೊಸ ಗ್ರಾಮೀಣ ಉದ್ಯೋಗ ಚೌಕಟ್ಟಿನಿಂದ ಮೂಲಭೂತವಾಗಿ ಭಿನ್ನವಾಗಿದೆ ಏಕೆಂದರೆ ಇದು ಕಾರ್ಮಿಕರಿಗೆ ಶಾಸನಬದ್ಧ ಉದ್ಯೋಗದ ಖಾತರಿಯನ್ನು ಒದಗಿಸಿತು ಮತ್ತು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಲ್ಲಿ ಗ್ರಾಮ ಪಂಚಾಯತ್ಗಳಿಗೆ ಪ್ರಮುಖ ಪಾತ್ರವನ್ನು ನೀಡಿತು. "ನರೇಗಾ ಗ್ರಾಮೀಣ ಕಾರ್ಮಿಕರಿಗೆ ಉದ್ಯೋಗದ ಕಾನೂನುಬದ್ಧ ಖಾತರಿಯನ್ನು ನೀಡಿತು ಮತ್ತು ಅದನ್ನು ಕಾರ್ಯಗತಗೊಳಿಸಲು ಗ್ರಾಮ ಪಂಚಾಯತ್ಗಳಿಗೆ ಅಧಿಕಾರ ನೀಡಿತು" ಎಂದು ರಮೇಶ್ ಹೇಳಿದರು. "ನರೇಗಾ ದ ಉದ್ದೇಶ ಕಾರ್ಮಿಕರನ್ನು ಅಂದಿನ ಸರ್ಕಾರದ ರಾಜಕೀಯ ಆಶಯಗಳ ಮೇಲೆ ಅವಲಂಬನೆಯಿಂದ ಮುಕ್ತಗೊಳಿಸುವುದಾಗಿದೆ" ಎಂದು ಅವರು ಹೇಳಿದರು. ಮೋದಿ ಸರ್ಕಾರವು ಹೊಸ ಕಾರ್ಯಕ್ರಮವನ್ನು ಕೇಂದ್ರೀಕರಿಸುತ್ತಿದೆ ಮತ್ತು ರಾಜ್ಯ ಸರ್ಕಾರಗಳ ಮೇಲೆ ಹೆಚ್ಚಿನ ಆರ್ಥಿಕ ಹೊರೆಯನ್ನು ವರ್ಗಾಯಿಸುತ್ತಿದೆ ಎಂದು ರಮೇಶ್ ಆರೋಪಿಸಿದರು. ಕಾಂಗ್ರೆಸ್ ಮತ್ತು ಇತರ

ವಿರೋಧ ಪಕ್ಷಗಳು ಈ ಕ್ರಮವನ್ನು ವಿರೋಧಿಸಿವೆ, ಇದು ಶಾಸನಬದ್ಧ ಉದ್ಯೋಗ ಖಾತರಿಯನ್ನು ದುರ್ಬಲಗೊಳಿಸುತ್ತದೆ ಮತ್ತು ರಾಜ್ಯಗಳ ಮೇಲೆ ಹೆಚ್ಚಿನ ಆರ್ಥಿಕ ಜವಾಬ್ದಾರಿಯನ್ನು ಹೇರುತ್ತದೆ ಎಂದು ಆರೋಪಿಸಿದ್ದಾರೆ. ವಿಬಿ–ಜಿ ರಾಮ್ ಜಿ ಅವರನ್ನು "ಸರಳವಾಗಿ ರೋಜಗಾರ್ ಚೋರಿ" ಎಂದು ಕರೆದ ಕಾಂಗ್ರೆಸ್ ನಾಯುಕರು, ಆರಂಭಿಕ ಉದ್ಯೋಗ ದತ್ತಾಂಶವು ನರೇಗಾ ಬದಲಿ ಬಗ್ಗೆ ವಿರೋಧ ಪಕ್ಷದ ಕಳವಳಗಳನ್ನು ಸಮರ್ಥಿಸುತ್ತದೆ ಎಂದು ಸಮರ್ಥಿಸಿಕೊಂಡರು.

## ಆರ್‌ಜಿ ಕರ್ ವೈದ್ಯೆ ಅತ್ಯಾಚಾರ–ಕೊಲೆ ಪ್ರಕರಣ: ಮರು ತನಿಖೆಗೆ ಆದೇಶ

**ಕೋಲ್ಕತ್ತಾ, ಆ. 10:** ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನಡೆದಿದ್ದ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣವನ್ನು ಹೊಸದಾಗಿ ಮರು ತನಿಖೆ ನಡೆಸಬೇಕೆಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಆದೇಶಿಸಿದ್ದಾರೆ. ಸಂತ್ರಸ್ತೆಯ ತಾಯಿ ರತ್ನಾ ದೇವನಾಥ್ ಅವರು ಪ್ರಸ್ತುತ ಬಿಜೆಪಿ ಶಾಸಕಿಯಾಗಿದ್ದಾರೆ. ಅವರ ಕೋರಿಕೆಯ ಮೇರೆಗೆ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ವರದಿಯಾಗಿದೆ.

ಪ್ರಕರಣ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ತಜ್ಞರ ತಂಡದೊಂದಿಗೆ ಸುದೀರ್ಘ ಚರ್ಚೆ ನಡೆಸಿದ ನಂತರ, 1952ರ ಸ್ಪೆಷಲ್ ಕಮಿಷನ್ ಕಾಯ್ದೆಯಡಿ ಹೊಸದಾಗಿ ತನಿಖೆ ಆರಂಭಿಸಲು ನಿರ್ಧರಿಸಲಾಗಿದೆ ಸುವೇಂದು ಅಧಿಕಾರಿ ತಿಳಿಸಿದ್ದಾರೆ. ಅಲ್ಲದೆ, ಈ ಪ್ರಕರಣದಲ್ಲಿ ಪೊಲೀಸರು ತಮ್ಮ ಕರ್ತವ್ಯ ನಿರ್ವಹಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿರುವ ಸುವೇಂದು, ಸಂತ್ರಸ್ತೆಯ ಶವಸಂಸ್ಕಾರದ ವೇಳೆ ನಡೆದಿದೆ ಎನ್ನಲಾದ ಲೋಪದೋಷಗಳ ಕುರಿತು ಪ್ರತ್ಯೇಕ ತನಿಖೆಗೆ ಆದೇಶಿಸಲಾಗಿದೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದ್ದಾರೆ.

2024ರಲ್ಲಿ ನಡೆದಿದ್ದ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಘಟನೆಯ ನೆನಪಿಗಾಗಿ ಭಾನುವಾರದಂದು ಪಶ್ಚಿಮ ಬಂಗಾಳದ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಎರಡು ನಿಮಿಷಗಳ ಮೌನಾಚರಣೆ ನಡೆಸಲಾಗಿದೆ. ಘಟನೆ ನಡೆದಾಗ ರಾಜ್ಯಾದ್ಯಂತ ನಡೆದಿದ್ದ ಬೃಹತ್ ಪ್ರತಿಭಟನೆಗಳ ನೇತೃತ್ವ ವಹಿಸಿದ್ದ ಪಶ್ಚಿಮ ಬಂಗಾಳ ಕಿರಿಯ ವೈದ್ಯರ ರಂಗ ಉತ್ತರ ಕೋಲ್ಕತ್ತಾದ ಚಿತ್ಪುರದಲ್ಲಿ ಬಡಜನರಿಗಾಗಿ ಉಚಿತ ಆರೋಗ್ಯ ಶಿಬಿರವನ್ನು ನಡೆಸಿದೆ. ಅತ್ಯಾಚಾರಕ್ಕೊಳಗಾಗಿ ಹತ್ಯೆಯಾದ ವೈದ್ಯೆಗೆ ನ್ಯಾಯ ಸಿಗಬೇಕೆಂಬ ಉದ್ದೇಶದಿಂದ ಈ ಶಿಬಿರವನ್ನು ನಡೆಸಲಾಗುತ್ತಿದೆ ಎಂದು ಸಂಘಟನೆಯ ವೈದ್ಯರೊಬ್ಬರು ತಿಳಿಸಿದ್ದಾರೆ.

ಅಪರಾಧದಲ್ಲಿ ನೇರವಾಗಿ ಅಥವಾ ಪರೋಕ್ಷವಾಗಿ ಭಾಗಿಯಾಗಿರುವ ಇತರ ವ್ಯಕ್ತಿಗಳನ್ನು ಬಂಧಿಸಿ ಸೂಕ್ತ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದ್ದಾರೆ.

## ಮನುಷ್ಯನ ಆಹಾರ ಸಂಸ್ಕೃತಿ ನಿಸರ್ಗದ ಬದಲಾವಣೆಯಲ್ಲಿ ಬೆಸುಗೆ: ನಿವೃತ್ತ ಪ್ರಾಧ್ಯಾಪಕ ಪ್ರೊ.ಬಿ.ಶಿವರಾಮ ಶೆಟ್ಟಿ ಬಣ್ಣನೆ




**ಮುಂಬಯಿ, ಆ.10:** ಕಣ್ಮರೆಯಾಗುತ್ತಿರುವ ತುಳುನಾಡಿದ ಆಹಾರ ಸಂಸ್ಕೃತಿ ಕುರಿತು ವಿಚಾರಸಂಕಿರಣ ಬಂಟ್ವಾಳ ತಾಲೂಕಿನ ಬಿ.ಸಿ.ರೋಡ್ ಸಂಚಯಗಿರಿಯ ರಾಣಿ ಅಬ್ಬಕ್ಕ ತುಳು ಅಧ್ಯಯನ ಕೇಂದ್ರ ಮತ್ತು ತುಳು ಬದುಕು ವಸ್ತು ಸಂಗ್ರಹಾಲಯ, ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ ಸಹಯೋಗದಲ್ಲಿ ಭಾನುವಾರ ನಡೆಯಿತು.

ಮಂಗಳೂರು ವಿಶ್ವವಿದ್ಯಾನಿಲಯದ ಎಸ್.ವಿ.ಪಿ. ಕನ್ನಡ ಅಧ್ಯಯನ ಸಂಸ್ಥೆಯ ನಿವೃತ್ತ ಪ್ರಾಧ್ಯಾಪಕ ಪ್ರೊ. ಬಿ.ಶಿವರಾಮ ಶೆಟ್ಟಿ ದಿಕ್ಸೂಚಿ ಭಾಷಣ ಮಾಡಿ, ಮನುಷ್ಯನ ಆಹಾರ ಸಂಸ್ಕೃತಿ ನಿಸರ್ಗದಲ್ಲಿ ಆಗುವ ಬದಲಾವಣೆಗಳೊಂದಿಗೆ ಬೆಸೆದುಕೊಂಡಿದೆ. ತುಳುನಾಡಿನ ಆಹಾರ ಪದ್ಧತಿಗಳು ಆಯಾ ಕಾಲಕ್ಕೆ ಏನೇನು ಬೇಕು ಎಂಬುದನ್ನು ವಿವರಿಸುತ್ತದೆ ಎಂದರು.

ಆಟಿ ಅಮಾವಾಸ್ಯೆಗೆ ಮಾಡುವ ಹಾಲೆ ಮರದ ತೊಗಟೆಯ ರಸದ ಕಷಾಯದ ವಿಧಿ ನಿಷೇಧ ಕುರಿತು ವಿವರಿಸಿದ ಅವರು, ಮರದ ತೊಗಟೆ ಮದ್ದಾಗಿ ಪರಿವರ್ತನೆ ಆಗಬೇಕಿದ್ದರೆ ನಿಸರ್ಗದ ಪಾತ್ರವಿದೆ. ಇದೇ ರೀತಿ ಕೌಟುಂಬಿಕ ಜೀವನಕ್ಕೂ ಆಹಾರ ಪದ್ಧತಿಗೂ ಸಂಬಂಧವಿದೆ ಎಂದರು. ಕುಟುಂಬ ಸಂರಕ್ಷಣೆ, ಬಂಧುತ್ವ, ಸಮಾಜದ ಒಳಗೆ ಇರುವ ಜಾತಿಯ ವಿನ್ಯಾಸಗಳು ಆಹಾರ ಸಂಸ್ಕೃತಿಯ ಕುರಿತು ವಿವರಿಸಿದ ಅವರು ಇಡೀ ವಿಚಾರಸಂಕಿರಣ ಉತ್ತಮ ಮಂಥನಕ್ಕೆ ವೇದಿಕೆ ಒದಗಿಸಿದೆ ಎಂದರು.

ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ ನ ಕಾರ್ಯನಿರ್ವಾಹಕ ನಿರ್ದೇಶಕಿ ಮೇನಕಾ ರೋಡ್ರಿಗ್ರಸ್ ಉದ್ಘಾಟಿಸಿ ಮಾತನಾಡಿ, ಆಹಾರ ಸಂಸ್ಕೃತಿಯ ವೈವಿಧ್ಯವನ್ನು ಅರಿಯಲು ವಿಚಾರಸಂಕಿರಣ ಪೂರಕ ಪಾತ್ರ ವಹಿಸುತ್ತದೆ ಎಂದರು.

ರಾಣಿ ಅಬ್ಬಕ್ಕ ತುಳು ಅಧ್ಯಯನ ಕೇಂದ್ರದ ಸಂಸ್ಥಾಪಕ ಡಾ। ತುಕಾರಾಮ ಪೂಜಾರಿ ಮಾತನಾಡಿ, ಹಿಂದಿನ ಕಾಲದ ತುಳು ಬದುಕು, ಜನಜೀವನದ ಕುರಿತು ವಿವರಿಸಿ, ಪ್ರಸ್ತುತ ಸನ್ನಿವೇಶದಲ್ಲಿ ಪುನರಾವಲೋಕನ ನಡೆಸುವ ಅಗತ್ಯವನ್ನು ತಿಳಿಸಿದರು. ಈ ಸಂದರ್ಭ ಕೇಂದ್ರದ ಡಾ. ಆಶಾಲತಾ ಸುವರ್ಣ, ಕಾರ್ಯಕ್ರಮ ಸಂಯೋಜಕ ಅರವಿಂದ ಕುಡ್ಲ ಉಪಸ್ಥಿತರಿದ್ದರು.

ಮೊದಲ ಅಧಿವೇಶನದಲ್ಲಿ ತುಳುವ ಸಮಾಜ ಮತ್ತು ಆಹಾರ ಸಂಸ್ಕೃತಿ ಕುರಿತು ಸಂಶೋಧಕಿ ರಾಜಶ್ರೀ ಟಿ. ರೈ ಪೆರ್ಲ ಮತ್ತು ಪಾರಂಪರಿಕ ಆಹಾರ ತಜ್ಞ ಸುದರ್ಶನ ಭಟ್ ಬೆದ್ರಡಿ ಮಾತನಾಡಿದರು. ಎರಡನೇ ಅಧಿವೇಶನದಲ್ಲಿ ತುಳುವ ಸಂಸ್ಕೃತಿಯಲ್ಲಿ ಪಾತ್ರೆಗಳ ಮಹತ್ವ ಕುರಿತು ಪ್ರಾಚೀನ ವಸ್ತುಗಳ ಸಂಗ್ರಾಹಕ ಹಾಗೂ ದೃಶ್ಯ ಕಲಾವಿದ ಪುರುಷೋತ್ತಮ ಅಡ್ವೆ, ಮೂರನೇ ಅಧಿವೇಶನದಲ್ಲಿ ಬದಲಾಗುತ್ತಿರುವ ಆಧುನಿಕ ಯುಗದಲ್ಲಿ ಆಹಾರ ಮತ್ತು ಆರೋಗ್ಯದ ಕುರಿತು ವೈದ್ಯ ಡಾ. ಸುಪ್ರೀತ್ ಜೆ. ಲೋಬೊ ಮಾತನಾಡಿದರು.

ಕಾರ್ಯಕ್ರಮ ಸಂಯೋಜಕ ಅರವಿಂದ ಕುಡ್ಲ ನಿರೂಪಿಸಿದರು. ರಾಣಿ ಅಬ್ಬಕ್ಕ ತುಳು ಅಧ್ಯಯನ ಕೇಂದ್ರದ ಸಿಂಧೂರ ಟಿ.ಪಿ. ವಂದಿಸಿದರು.

## ವಿಶಾಖಪಟ್ಟಣದಲ್ಲಿ ಆರ್‌ಎಸ್‌ಎಸ್, 32 ಅಂಗಸಂಸ್ಥೆಗಳ ಸಭೆ; ಜೆನ್–ಝೀ ಬಗ್ಗೆ ಚರ್ಚೆ



ವಿಶಾಖಪಟ್ಟಣ, ಆ.10: ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಮತ್ತು ಬಿಜೆಪಿ ಹಾಗೂ ಅದರ 32 ಅಂಗಸಂಸ್ಥೆಗಳ ಹಿರಿಯ ಕಾರ್ಯಕರ್ತರು ಮುಂದಿನ ವಾರ ಆಂಧ್ರಪ್ರದೇಶದ ವಿಶಾಖಪಟ್ಟಣಂ ಜಿಲ್ಲೆಯಲ್ಲಿ ವಾರ್ಷಿಕ ಸಮನ್ವಯ ಸಭೆ ನಡೆಸಲಿದ್ದಾರೆ.

ಇದರಲ್ಲಿ ಜೆನ್ ಝೀಗೆ ಸಂಬಂಧಿಸಿದ ವಿಷಯಗಳು ಮತ್ತು ಇತರ ಸಮಕಾಲೀನ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

ಮೂರು ದಿನಗಳ ಸಭೆಯು ಆಗಸ್ಟ್ 19 ರಂದು ವಿಶಾಖಪಟ್ಟಣದ ಗುಡಿಲೋವಾದಲ್ಲಿ ಪ್ರಾರಂಭವಾಗಲಿದೆ. ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಮತ್ತು ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಸಭೆಯ ಅಧ್ಯಕ್ಷತೆ ವಹಿಸಲಿದ್ದು, ಇದು ಆಗಸ್ಟ್ 21 ರಂದು ಮುಕ್ತಾಯಗೊಳ್ಳುತ್ತದೆ.

"ಸಭೆಯ ಸಮಯದಲ್ಲಿ, ಎಲ್ಲಾ 32 ಸಂಸ್ಥೆಗಳು ತಮ್ಮ ತಮ್ಮ ಚಟುವಟಿಕೆಗಳ ಬಗ್ಗೆ ಮಾಹಿತಿಯನ್ನು ಹಂಚಿಕೊಳ್ಳುತ್ತವೆ ಮತ್ತು ವಿವಿಧ ಪ್ರಮುಖ ವಿಷಯಗಳ ಕುರಿತು ತಮ್ಮ ಅವಲೋಕನಗಳು ಮತ್ತು ಸಲಹೆಗಳನ್ನು ಪ್ರಸ್ತುತಪಡಿಸುತ್ತವೆ" ಎಂದು ಆರ್‌ಎಸ್‌ಎಸ್ ರಾಷ್ಟ್ರೀಯ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಮುಖ್ಯಸ್ಥ ಸುನಿಲ್ ಅಂಬೇಕರ್ ತಿಳಿಸಿದ್ದಾರೆ.

ಪರಸ್ಪರ ಸಮನ್ವಯ ಮತ್ತು ಸಹಕಾರವನ್ನು ಹೆಚ್ಚಿಸುವಂತಹ ವಿಷಯಗಳನ್ನು ಹಾಗೂ ಸಾರ್ವಜನಿಕ ಕಲ್ಯಾಣ ಮತ್ತು ನೀತಿ–ಸಂಬಂಧಿತ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಅವರು ಹೇಳಿದರು.

"ಜನಸಂಖ್ಯೆಯ ಅಸಮತೋಲನ, 'ನಶ ಮುಕ್ತಿ' (ವ್ಯಸನ ನಿವಾರಣೆ), ಯುವಕರಲ್ಲಿ ಜಾಗೃತಿ ಮೂಡಿಸುವುದು, 'ಪಂಚ ಪರಿವರ್ತನ' ಅನುಷ್ಠಾನ, ಭಾರತೀಯ ಅಭಿವೃದ್ಧಿ ಪರಿಕಲ್ಪನೆ ಮತ್ತು ಇತರ ಸಂಬಂಧಿತ ವಿಷಯಗಳ ಬಗ್ಗೆಯೂ ಸಭೆಯಲ್ಲಿ ಚರ್ಚಿಸುವ ನಿರೀಕ್ಷೆಯಿದೆ" ಎಂದು ಆರ್‌ಎಸ್‌ಎಸ್ನ ಹಿರಿಯ ಪದಾಧಿಕಾರಿ ಹೇಳಿದರು.

"ಜೆನ್ ಝೀಗೆ ಸಂಬಂಧಿಸಿದ ವಿಷಯಗಳ" ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಮೂಲಗಳು ತಿಳಿಸಿವೆ. ಸಭೆಯಲ್ಲಿ ಎಲ್ಲಾ 32 ಆರ್‌ಎಸ್‌ಎಸ್ ಅಂಗಸಂಸ್ಥೆಗಳ ಉನ್ನತ ಪದಾಧಿಕಾರಿಗಳು, ಅವುಗಳ ಅಧ್ಯಕ್ಷರು ಮತ್ತು ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿಗಳುಭಾಗವಹಿಸಲಿದಾದ್ದರೆ. "ಸರಸಂಘಚಾಲಕ ಡಾ. ಮೋಹನ್ ಭಾಗವತ್, ಸರ್ಕಾರಿವಾಹ ದತ್ತಾತ್ರೇಯ ಹೊಸಬಾಳೆ ಮತ್ತು ಎಲ್ಲಾ ಸಹಸರ್ಕಾರ್ಯವಾಹರು ಮತ್ತು ಅಖಿಲ ಭಾರತೀಯ ಕಾರ್ಯವಿಭಾಗ ಪ್ರಮುಖರು ಸಭೆಯಲ್ಲಿ ಉಪಸ್ಥಿತರಿರುತ್ತಾರೆ" ಎಂದು ಆರ್‌ಎಸ್‌ಎಸ್ ಹೇಳಿಕೆಯಲ್ಲಿ ತಿಳಿಸಿದೆ.

## ವಂದೇಮಾತರಂ ಗೀತೆಯ 150ನೇ ವರ್ಷಾಚರಣೆ: ಪಾಮ್‌ಬೀಚ್ ರಸ್ತೆಯಲ್ಲಿ ಮಾನವ ಸರಪಳಿ–ಸಾಮೂಹಿಕ ಗಾಯನ




**ಮುಂಬಯಿ, ಆ.10:** ಭಾರತದ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಕೋಟ್ಯಾಂತರ ಭಾರತೀಯರಲ್ಲಿ ರಾಷ್ಟ್ರಭಕ್ತಿ, ಏಕತೆ, ತ್ಯಾಗ ಮತ್ತು ದೇಶಪ್ರೇಮದ ಪ್ರೇರಣೆಯನ್ನು ಮೂಡಿಸಿದ ಅಮರ ಗೀತೆ ವಂದೇ ಮಾತರಂ ರಚನೆಯ 150ನೇ ವರ್ಷಾಚರಣೆಯ ಅಂಗವಾಗಿ ನವಿಮುಂಬಯಿಯಲ್ಲಿ ವಿಶಿಷ್ಟ ರಾಷ್ಟ್ರಭಕ್ತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಕವಿ ಬಂಕಿಮಚಂದ್ರ ಚಟ್ಟೋಪಾಧ್ಯಾಯ ಅವರ ಅಮರ ಕೃತಿ ವಂದೇಮಾತರಂ ಕೇವಲ ಒಂದು ಗೀತೆಯಾಗಿರದೆ, ಸ್ವಾತಂತ್ರ್ಯಕ್ಕಾಗಿ ಎಚ್ಚೆತ್ತ ಭಾರತದ ಹೃದಯದ ಮಿಡಿತವಾಗಿತ್ತು. ಬ್ರಿಟಿಷರ ಆಳ್ವಿಕೆಯ ವಿರುದ್ಧ ನಡೆದ ಹೋರಾಟದಲ್ಲಿ ಈ ಗೀತೆ ಲಕ್ಷಾಂತರ ಭಾರತೀಯರಲ್ಲಿ ಧೈರ್ಯ, ಒಗ್ಗಟ್ಟು, ತ್ಯಾಗ ಮತ್ತು ದೇಶಪ್ರೇಮದ ಮನೋಭಾವವನ್ನು ಮೂಡಿಸಿತ್ತು. ಇಂದಿಗೂ ವಂದೇ ಮಾತರಂ ಎಂಬ ಘೋಷ ಪ್ರತಿಯೊಬ್ಬ ಭಾರತೀಯನ ಹೃದಯದಲ್ಲಿ ತಾಯ್ನಾಡಿನ ಬಗ್ಗೆ ಹೆಮ್ಮೆ ಮತ್ತು ಭಕ್ತಿಯನ್ನು ಮೂಡಿಸುತ್ತಿದೆ.

ಈ ಐತಿಹಾಸಿಕ ಗೀತೆಯ 150ನೇ ವರ್ಷಾಚರಣೆಯನ್ನು ಸ್ಮರಣೀಯವಾಗಿಸುವ ಉದ್ದೇಶದಿಂದ ವಂದೇಮಾತರಂ ಪ್ರತಿಷ್ಠಾನ, ನವಿಮುಂಬಯಿ ವತಿಯಿಂದ ಸ್ವಾತಂತ್ರ್ಯ ದಿನಾಚರಣೆಯಾದ ಇದೇ ಆಗಸ್ಟ್. 15ರ ಶನಿವಾರ ಪಾಮ್ ಬೀಚ್ ರಸ್ತೆಯಲ್ಲಿ ಬೃಹತ್ ಮಾನವ ಸರಪಳಿ ಹಾಗೂ ಸಾಮೂಹಿಕ ವಂದೇ ಮಾತರಂ ಗಾಯನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 10ರಿಂದ 11:30ರವರೆಗೆ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ನಾಗರಿಕರು ಹಾಗೂ ದೇಶಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಒಗ್ಗಟ್ಟಿನ ಧ್ವನಿಯಲ್ಲಿ ವಂದೇಮಾತರಂ ಗಾಯನ ಮಾಡುವ ಮೂಲಕ ರಾಷ್ಟ್ರೀಯ ಏಕತೆ, ಸಾಮಾಜಿಕ ಸಾಮರಸ್ಯ ಹಾಗೂ ವಿಶ್ವಶಾಂತಿಯ ಸಂದೇಶವನ್ನು ಸಾರಲಿದ್ದಾರೆ.

ಒಂದು ರಾಷ್ಟ್ರ ಒಂದು ಧ್ವನಿ ಎಂಬ ಆಶಯದೊಂದಿಗೆ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಪಾಮ್ ಬೀಚ್ ರಸ್ತೆಯಲ್ಲಿ ಮಾನವ ಸರಪಳಿ ನಿರ್ಮಿಸಿ, ಸಾಮೂಹಿಕವಾಗಿ ವಂದೇ ಮಾತರಂ ಗಾಯನ ಮಾಡುವುದರ ಜೊತೆಗೆ ರಾಷ್ಟ್ರದ ಏಕತೆ, ಸಾಮಾಜಿಕ ಸೌಹಾರ್ದತೆ ಮತ್ತು ವಿಶ್ವಶಾಂತಿಗಾಗಿ ಪ್ರಾರ್ಥನೆ ಸಲ್ಲಿಸಲಾಗುವುದು. ತಾಯ್ನಾಡಿನ ಸೌಂದರ್ಯ, ಶಕ್ತಿ, ಸಮೃದ್ಧಿ ಹಾಗೂ ಅಮರ ಚೈತನ್ಯವನ್ನು ಕೊಂಡಾಡುವ ಈ ಪವಿತ್ರ ಗೀತೆಯೊಂದಿಗೆ ದೇಶಭಕ್ತಿಯ ಭಾವನೆಯನ್ನು ಮತ್ತೊಮ್ಮೆ ಜಾಗೃತಗೊಳಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಆಗಸ್ಟ್ 15ರಂದು ನಡೆಯಲಿರುವ ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಎಲ್ಲರೂ ಕುಟುಂಬ ಸಮೇತರಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು, ತಮ್ಮ ಧ್ವನಿಯನ್ನು ದೇಶದ ಧ್ವನಿಯೊಂದಿಗೆ ಬೆರೆಸುವಂತೆ ವಂದೇ ಮಾತರಂ ಪ್ರತಿಷ್ಠಾನ, ನವಿಮುಂಬಯಿ ಮನವಿ ಮಾಡಿದೆ. ಕಾರ್ಯಕ್ರಮದ ಕುರಿತು ಹೆಚ್ಚಿನ ಮಾಹಿತಿಗಾಗಿ ಹಾಗೂ ಸ್ಥಳ ಕಾಯ್ದಿರಿಸಲು ನಿತ್ಯಾನಂದ ನಾಯ್ಡು (9699155189) ಅವರನ್ನು ಸಂಪರ್ಕಿಸಬಹುದು. ಸೀವೂಡ್ ಹಾಗೂ ನೆರೂಲ್ ಭಾಗದ ನಾಗರಿಕರು ಸೇರಿದಂತೆ ನವಿಮುಂಬಯಿ ಎಲ್ಲ ದೇಶಪ್ರೇಮಿಗಳು ಈ ರಾಷ್ಟ್ರಭಕ್ತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಯೋಜಕರಲ್ಲೋರ್ವರಾದ ಕೆ.ರಘುರಾಮ ಆಚಾರ್ಯ ಈ ಮೂಲಕ ತಿಳಿಸಿದ್ದಾರೆ.

# ಕಾವಡ್ ಯಾತ್ರೆ ಪೂರೈಸಿದ ಸಂಸದ ತೇಜಸ್ವಿ ಸೂರ್ಯ: ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ಗಂಗಾಜಲ ಅಭಿಷೇಕ

**ಬೆಂಗಳೂರು,ಆ.10:** ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ಹಾಗೂ ಭಾರತೀಯ ಜನತಾ ಯುವಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ತೇಜಸ್ವಿ ಸೂರ್ಯ ಅವರು ಹರಿದ್ವಾರದಿಂದ ಋಷಿಕೇಶಕ್ಕೆ ಪವಿತ್ರ ಗಂಗಾಜಲವನ್ನು ಹೊತ್ತು ತಂದು ಕಾವಡ್ ಯಾತ್ರೆಯನ್ನು ಪೂರ್ಣ ಗೊಳಿಸಿದ್ದಾರೆ.

ನಂತರ ಈ ಗಂಗಾಜಲವನ್ನು ಬೆಂಗಳೂರಿಗೆ ತಂದು, ಬಸವನಗುಡಿಯ ಐತಿಹಾಸಿಕ ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ಶಿವನಿಗೆ ಅರ್ಪಿಸಿದರು.



ಹರಿದ್ವಾರದ ಹರ್ ಕಿ ಪೌರಿಯಲ್ಲಿ ಗಂಗಾ ಸ್ನಾನ ಮಾಡುವ ಮೂಲಕ ಯಾತ್ರೆ ಆರಂಭಿಸಿದ ಸೂರ್ಯ ಅವರು, ನೂರಾರು ಯುವ ಭಕ್ತರೊಂದಿಗೆ ಗಂಗಾಜಲದ ಕಾವಡ್ ಹೊತ್ತು ಋಷಿಕೇಶದ ವೀರಭದ್ರ ಮಹಾದೇವ ದೇವಾಲಯದವರೆಗೆ 26 ಕಿ.ಮೀ. ಪಾದಯಾತ್ರೆ ನಡೆಸಿದರು.

ಈ ಯಾತ್ರೆಯು ಪ್ರಮುಖವಾಗಿ, ಸಾಧನೆ (ಆತ್ಮಶಿಸ್ತು), ಸೇವೆ, ಸಮರಸತೆ (ಸಾಮಾಜಿಕ ಸಾಮರಸ್ಯ ಮತ್ತು ಒಳಗೊಳ್ಳುವಿಕೆ) ಮತ್ತು ಸ್ವಚ್ಛತೆ. ಮಾರ್ಗದುದ್ದಕ್ಕೂ ಭಕ್ತರಿಗೆ ಹಣ್ಣುಗಳನ್ನು ವಿತರಿಸಲಾಯಿತು, ಬಿಲ್ವಪತ್ರೆ ಸಸಿಗಳನ್ನು ನೆಡಲಾಯಿತು, ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು ಹಾಗೂ ಸ್ಥಳೀಯ ಸಮುದಾಯದೊಂದಿಗೆ ಸಂವಾದ ನಡೆಸಿದ್ದು ವಿಶೇಷ.

ತಮ್ಮ ಅನುಭವವನ್ನು ಹಂಚಿಕೊಂಡ ಸಂಸದರು. "ಹೆಚ್ಚಿನ ಕಾವಡ್ ಯಾತ್ರಿಕರು ಅತ್ಯಂತ ಸಾಮಾನ್ಯ ಹಿನ್ನೆಲೆಯಿಂದ ಬಂದವರು. ಆದರೆ ಅವರ ಭಕ್ತಿ, ಶಿಸ್ತು ಮತ್ತು ದೈಹಿಕ ಶ್ರಮ ವಹಿಸುವ ಸಾಮರ್ಥ್ಯ ಅಸಾಧಾರಣವಾದದ್ದು," ಎಂದು ತಿಳಿಸಿದ್ದಾರೆ.

ಯಾತ್ರೆಯ ಮಾರ್ಗದುದ್ದಕ್ಕೂ ಕಂಡುಬಂದ ಸೇವಾ ಮನೋಭಾವದ ಬಗ್ಗೆ ಮಾತನಾಡಿದ ಅವರು, 'ಸಾಮಾನ್ಯ ಜನರು ಯಾವುದೇ ಶುಲ್ಕವಿಲ್ಲದೆ ಯಾತ್ರಿಕರಿಗೆ ಆಹಾರ, ನೀರು, ವೈದ್ಯಕೀಯ ನೆರವು ಮತ್ತು ವಿಶ್ರಾಂತಿ ಪಡೆಯಲು ಸ್ಥಳಾವಕಾಶವನ್ನು ಒದಗಿಸುವ ಮೂಲಕ ಉಚಿತವಾಗಿ ಸೇವೆ ಸಲ್ಲಿಸಲು ಮುಂದೆ ಬಂದಿದ್ದು ಗಮನಾರ್ಹ' ಎಂದರು.

ಈ ಯಾತ್ರೆಯಲ್ಲಿ ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಲಾಗಿ, ಯಾತ್ರಿಕರು ಮಾರ್ಗದುದ್ದಕ್ಕೂ ಸ್ವಚ್ಛತಾ ಕಾರ್ಯಕ್ರಮಗಳನ್ನು ಕೈಗೊಂಡು, ಇತರ ಭಕ್ತರಿಗೂ ಪವಿತ್ರ ಸ್ಥಳಗಳು ಮತ್ತು ಯಾತ್ರಾ ಮಾರ್ಗವನ್ನು ಸ್ವಚ್ಛವಾಗಿಟ್ಟುಕೊಳ್ಳಲು ಅರಿವು ಮೂಡಿಸಿದ್ದು ವಿಶೇಷ.

ಋಷಿಕೇಶದ ವೀರಭದ್ರ ದೇವಾಲಯದಲ್ಲಿ ಮಹಾದೇವನಿಗೆ ಪವಿತ್ರ ಗಂಗಾಜಲವನ್ನು ಅರ್ಪಿಸಿ ನಂತರ, ಬೆಂಗಳೂರಿನ ಬಸವನ ಗುಡಿಯ ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ಅಂತಿಮ ಗಂಗಾಜಲ ಅಭಿಷೇಕ ಮಾಡುವ ಮೂಲಕ ಯಾತ್ರೆಯು ಪೂರ್ಣ ಗೊಂಡಿದ್ದು, "ಹರಿದ್ವಾರದ ಗಂಗೆ ಯಿಂದ ನಮ್ಮ ಬೆಂಗಳೂರಿನ ಗಂಗಾಧರನವರೆಗೆ, ಈ ಯಾತ್ರೆಯು ಸಂಪೂರ್ಣ ವೃತ್ತವನ್ನು ಪೂರ್ಣ ಗೊಳಿಸಿದೆ," ಎಂದು ಸಂಸದರು ತಿಳಿಸಿದ್ದಾರೆ.




ಕೇಂದ್ರದ ನಾಲ್ಕು ಕಾರ್ಮಿಕ ಸಂಹಿತೆಗಳ ವಿರುದ್ಧ ಸೋಮವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕಾರ್ಮಿಕ ಸಂಘಗಳ ಜಂಟಿ ಸಮಿತಿ ಸದಸ್ಯರು ಪ್ರತಿಭಟನೆ ನಡೆಸಿದರು.

### ಆ.13ರ ಕರ್ನಾಟಕ ಬಂದ್ ಕರೆ ಹಿಂತೆಗೆದುಕೊಳ್ಳುವ ಸಾಧ್ಯತೆ

## ಪ್ರತಿಭಟನೆಯಿಂದ ಹಿಂದೆಸರಿದ ಕನ್ನಡಪರ – ರೈತ ಸಂಘಟನೆಗಳು

**ಬೆಂಗಳೂರು, ಆ.10:** ತಮಿಳು ನಾಡಿಗೆ ಕಾವೇರಿ ನದಿ ನೀರು ಬಿಡುವುದನ್ನು ಖಂಡಿಸಿ ಕನ್ನಡಪರ ಸಂಘಟನೆಗಳು ಕರೆ ನೀಡಿರುವ 13ರ ಅಖಂಡ ಕರ್ನಾಟಕ ಬಂದ್ ಬಹುತೇಕ ರದ್ದಾಗುವ ಸಾಧ್ಯತೆ ದಟ್ಟವಾಗಿದೆ.

ರಾಜ್ಯದಲ್ಲಿ ಸದ್ಯ ಮಳೆಯಾಗು ತ್ತಿರುವ ಹಿನ್ನೆಲೆಯಲ್ಲಿ ಕಾವೇರಿ ನದಿ ನೀರು ಸಮಸ್ಯೆ ಸದ್ಯಕ್ಕಿಲ್ಲ. ಹಾಗಾಗಿ ಬಂದ್ ಪ್ರತಿಭಟನೆಯಿಂದ ಹಲವು ಕನ್ನಡಪರ ಸಂಘಟನೆಗಳು, ರೈತ ಸಂಘಟನೆಗಳು ಹಿಂದೆ ಸರಿದಿವೆ. ಆದರೆ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಮಾತ್ರ ಬಂದ್‌ಗೆ ಪಟ್ಟು ಹಿಡಿದಿದ್ದಾರೆ.

ಇನ್ನು ವಾಟಾಳ್ ನಾಗರಾಜ್ ಬಣದೊಂದಿಗೆ ಗುರುತಿಸಿ ಕೊಂಡಿರುವ ಸಾರಾ ಗೋವಿಂದ್, ಬಂದ್‌ಗೆ ಬೆಂಬಲವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಮತ್ತೊಂದೆಡೆ, ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ನಾರಾಯಣ ಗೌಡ ಅವರು ಈಗಾಗಲೇ, ಬಂದ್‌ಗೆ ಬೆಂಬಲ ನೀಡುವುದಿಲ್ಲ ಎಂದು ಹಿಂದೆ ಸರಿದಿದ್ದಾರೆ. ಪ್ರವೀಣ್ ಶೆಟ್ಟಿ ಬಣ ಕೂಡ ಬಂದ್ ನಿಂದ ಹಿಂದೆ ಸರಿಯುವ ಸಾಧ್ಯತೆ ಇದೆ ಎನ್ನಲಾಗಿದೆ.

ಓಲಾ-ಉಬರ್ ಅಸೋಸಿ ಯೇಷನ್ ನಿಂದಲೂ ಇದುವರೆಗೆ ಬಂದ್‌ಗೆ ಬೆಂಬಲ ವ್ಯಕ್ತವಾಗಿಲ್ಲ. ಹೋಟೆಲ್ ಮಾಲೀಕರ ಸಂಘವೂ ಬಂದ್ ನಡೆಸುವುದರಿಂದ ಹಿಂದೆ ಸರಿಯುವ ಸಾಧ್ಯತೆ ಇದೆ. ಬಂದ್ ನಡೆಸುವುದರಿಂದ ವ್ಯಾಪಾರ-ವಹಿಟು ಸ್ಥಗಿತಗೊಳ್ಳುತ್ತದೆ.



ಇದರಿಂದ ರಾಜ್ಯದ ಆರ್ಥಿಕ ಚಟುವಟಿಕೆಗಳಿಗೆ ಹೊಡೆತ ಬೀಳುವುದಲ್ಲದೆ, ದಿನಗೂಲಿ ಕಾರ್ಮಿಕರು, ರೈತರು, ಬೀದಿ ಬದಿ ವ್ಯಾಪಾರಿಗಳು ಹಾಗೂ ಹೋಟೆಲ್ ಉದ್ಯಮವನ್ನೇ ಅವಲಂಬಿಸಿರು ವವರಿಗೆ ಸಮಸ್ಯೆಯಾಗಲಿದೆ ಎಂಬ ಅಭಿಪ್ರಾಯ ಕೇಳಿಬರುತ್ತಿದೆ.

ಬಂದ್ ನಿರ್ಧಾರದಿಂದ ಹಲವು ಸಂಘಟನೆಗಳು ಹಿಂದೆ ಸರಿಯುತ್ತಿರುವುದರಿಂದ ಆಗಸ್ಟ್ 13ರ ಅಖಂಡ ಕರ್ನಾಟಕ ಬಂದ್ ರದ್ದಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

### ರಾಜ್ಯದ ಗಡಿದಾಟಲು ವಿಧಿಸಿದ್ದ ನಿರ್ಬಂಧಕ್ಕೆ ತಡೆ, ಪೂರ್ವಾನುಮತಿ ಪಡೆಯುವುದು ಕಡ್ಡಾಯ

## ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ಸಚಿವ ನಾಗೇಂದ್ರಗೆ ಹೈಕೋರ್ಟ್‌ನಿಂದ ರಿಲೀಫ್

**ಬೆಂಗಳೂರು, ಆ.10:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರಿಗೆ ಕರ್ನಾಟಕ ಹೈಕೋರ್ಟ್‌ನಿಂದ ಸಮಾಧಾನ ಸಿಕ್ಕಿದೆ. ವಿಚಾರಣಾ ನ್ಯಾಯಾಲಯ ವಿಧಿಸಿದ್ದ ಜಾಮೀನು ಷರತ್ತನ್ನು ಹೈಕೋರ್ಟ್ ಸಡಿಲಗೊಳಿಸಿದ್ದು, ರಾಜ್ಯದ ಗಡಿ ದಾಟಲು ವಿಧಿಸಲಾಗಿದ್ದ ನಿರ್ಬಂಧಕ್ಕೆ ತಡೆ ನೀಡಿದೆ. ಹಗರಣಕ್ಕೆ ಸಂಬಂಧಿಸಿ ನಾಗೇಂದ್ರಗೆ ಜಾಮೀನು ನೀಡುವಾಗ ವಿಚಾರಣಾ ನ್ಯಾಯಾಲಯವು, 'ಪೂರ್ವ ಅನುಮತಿ ಇಲ್ಲದೆ ರಾಜ್ಯ ಬಿಟ್ಟು ಹೊರಗೆ ತೆರಳಬಾರದು' ಎಂಬ ಕಟ್ಟುನಿಟ್ಟಿನ ಷರತ್ತು ವಿಧಿಸಿತ್ತು. ಆದರೆ, ಈ ಷರತ್ತಿನಲ್ಲಿ ಬದಲಾವಣೆ ಮಾಡಿರುವ ಹೈಕೋರ್ಟ್, ರಾಜ್ಯ ಬಿಟ್ಟು ತೆರಳುವ ನಿರ್ಬಂಧ ತೆರವುಗೊಳಿಸಿದ್ದು, 'ಅನುಮತಿ ಇಲ್ಲದೆ ದೇಶ ಬಿಟ್ಟು ಹೊರಗೆ ಹೋಗುವಂತಿಲ್ಲ' ಎಂದು ಷರತ್ತನ್ನು ಮಾರ್ಪಾಡು ಮಾಡಿ ಆದೇಶ ಹೊರಡಿಸಿದೆ.ಇದಕ್ಕೂ ಮುನ್ನ, ರಾಷ್ಟ್ರ ರಾಜಧಾನಿ ದೆಹಲಿಗೆ ಪ್ರಯಾಣಿಸಲು ಅನುಮತಿ ಕೋರಿ ನಾಗೇಂದ್ರ ಸಲ್ಲಿಸಿದ್ದ ಅರ್ಜಿಯನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾ ಗೊಳಿಸಿತ್ತು.

ವಿಚಾರಣಾ ನ್ಯಾಯಾಲಯದ ಈ ನಿರ್ಧಾರವನ್ನು ಪ್ರಶ್ನಿಸಿ ನಾಗೇಂದ್ರ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಅವರಿಗೆ ದೆಹಲಿ ಸೇರಿದಂತೆ ದೇಶದ ಇತರ ರಾಜ್ಯಗಳಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿದೆ. ಇದೇ ವೇಳೆ, ಈ ಪ್ರಕರಣದಲ್ಲಿ



ತನ್ನ ಆಕ್ಷೇಪಣೆ ಹಾಗೂ ವಿವರಣೆ ಸಲ್ಲಿಸಲು ಜಾರಿ ನಿರ್ದೇಶನಾಲಯಕ್ಕೆ ಹೈಕೋರ್ಟ್ ಆಗಸ್ಟ್ 12 ರವರೆಗೆ ಕಾಲಾವಕಾಶ ನೀಡಿದೆ. ಜಾರಿ ನಿರ್ದೇಶನಾಲಯದ ತನಿಖೆ ಎದುರಿಸುತ್ತಿರುವ ನಾಗೇಂದ್ರ ಅವರಿಗೆ ನ್ಯಾಯಾಲಯದ ಈ ಮಧ್ಯಂತರ ಆದೇಶ ತಾತ್ಕಾಲಿಕ ರಿಲೀಫ್ ನೀಡಿದ್ದು, ಆ.12 ರಂದು ಇ.ಡಿ ಸಲ್ಲಿಸಲಿರುವ ಆಕ್ಷೇಪಣೆ ಹಾಗೂ ಮುಂದಿನ ವಿಚಾರಣೆ ಕುತೂಹಲ ಮೂಡಿಸಿದೆ.

### ಮಾಫಿಸಾಕ್ಷಿ ಆಗಲು 14ನೇ ಆರೋಪಿ ಪ್ರದೋಷ್ ಅರ್ಜಿ ಸಲ್ಲಿಕೆ

## ರೇಣುಕಾಸ್ವಾಮಿ ಕೊಲೆ ಪ್ರಕರಣ: ಹಲ್ಲೆ, ಕೊಲೆಯ ವಿವರ ಬಹಿರಂಗ

**ಬೆಂಗಳೂರು, ಆ.10:** ರೇಣುಕಸ್ವಾಮಿ ಕೊಲೆ ಪ್ರಕರಣ ಇದೀಗ ಮತ್ತೊಂದು ಮಹತ್ವದ ಕಾನೂನು ತಿರುವು ಪಡೆದುಕೊಂಡಿದೆ. ಪ್ರಕರಣದ 14ನೇ ಆರೋಪಿ ಪ್ರದೋಷ್, ತಾನು ಮಾಫಿ ಸಾಕ್ಷಿದಾರನಾಗಲು (ಅನುಮೋದಕ -ಅಪ್ರೂವರ್) ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದು, ರೇಣುಕಾಸ್ವಾಮಿ ಮೇಲೆ ನಡೆದ ಭೀಕರ ಹಲ್ಲೆ ಹಾಗೂ ಕೊಲೆಯ ಬಳಿಕ ಕೃತ್ಯವನ್ನು ಮುಚ್ಚಿಹಾಕಲು ನಡೆದ ಯತ್ನಗಳ ಕುರಿತು ಬೆಚ್ಚಿಬೀಳಿಸುವ ವಿವರಗಳನ್ನು ಬಹಿರಂಗಪಡಿಸಿದ್ದಾರೆ.

**ಜೀವ ಬೆದರಿಕೆ: ಪ್ರತ್ಯೇಕ ಸೆಲ್‌ನಲ್ಲಿಡಲು ಪ್ರದೋಷ್ ಕೋರಿಕೆ**



**ಜೈಲಿನಲ್ಲಿ ಸಹ-ಆರೋಪಿಗಳಿಂದ ಜೀವ ಬೆದರಿಕೆ ಅಥವಾ ಒತ್ತಡ ಎದುರಾಗಬಹುದು ಎಂಬ ಕಾರಣಕ್ಕೆ, ತನ್ನನ್ನು ಪ್ರತ್ಯೇಕ ಸೆಲ್‌ನಲ್ಲಿಡಬೇಕು ಮತ್ತು ವಿಚಾರಣೆ ವೇಳೆ ಪ್ರತ್ಯೇಕವಾಗಿ ಹಾಜರುಪಡಿಸಬೇಕು ಎಂದು ಕೋರಿ ಪ್ರದೋಷ್ ಪ್ರತ್ಯೇಕ ರಕ್ಷಣಾ ಅರ್ಜಿಯನ್ನೂ ಸಲ್ಲಿಸಿದ್ದಾರೆ. ಪ್ರಾಸಿಕ್ಯೂಷನ್ ಪರ ವಕೀಲರು ಪ್ರದೋಷ್ ಅವರ ಅನುಮೋದಕ ಸ್ಥಾನಮಾನದ ಅರ್ಜಿಯನ್ನು ಬೆಂಬಲಿಸಿದ್ದು, ಎಲ್ಲಾ ಕಡೆಯ ವಾದಗಳನ್ನು ಆಲಿಸಿರುವ 59ನೇ ಸೆಷನ್ಸ್ ನ್ಯಾಯಾಲಯವು ತನ್ನ ಆದೇಶವನ್ನು ಕಾಯ್ದಿರಿಸಿದೆ. ನ್ಯಾಯಾಲಯದ ಅಂತಿಮ ನಿರ್ಧಾರವು ಈ ಹೈಪ್ರೊಫೈಲ್ ಕೊಲೆ ಪ್ರಕರಣದ ತೀರ್ಪಿನ ದಿಕ್ಕನ್ನೇ ಬದಲಿಸುವ ಸಾಧ್ಯತೆಯಿದೆ.**

ಪ್ರದೋಷ್ ಸಲ್ಲಿಸಿರುವ ಅರ್ಜಿಯ ಪ್ರಕಾರ, ನಟ ದರ್ಶನ್ ಹಾಗೂ ಇತರರು ರೇಣುಕಸ್ವಾಮಿ ಮೇಲೆ ಅಮಾನುಷವಾಗಿ ಹಲ್ಲೆ ನಡೆಸಿದ್ದಾರೆ. ಪವಿತ್ರಾ ಗೌಡಗೆ ಕಳುಹಿಸಲಾಗಿದೆ ಎನ್ನಲಾದ ವಾಟ್ಸಾಪ್ ಸಂದೇಶಗಳ ವಿಚಾರವಾಗಿ ರೇಣುಕಸ್ವಾಮಿಯನ್ನು ನಿಂದಿಸಿದ ದರ್ಶನ್, ಮೊದಲು ಹಲ್ಲೆ ನಡೆಸಿದ್ದಾರೆ.

ಈ ವೇಳೆ ರೇಣುಕಾಸ್ವಾಮಿ ತಲೆಯಿಂದ ರಕ್ತಸುರಿದಿದೆ. ಪವಿತ್ರಾ ಗೌಡ ಕೂಡ ತಮ್ಮ ಚಪ್ಪಲಿಯಿಂದ ಹೊಡೆದಿದ್ದಾರೆ. ಬಳಿಕ ರೇಣುಕಾಸ್ವಾಮಿಯನ್ನು ಒಳಉಡುಪಿನವರೆಗೆ ವಿವಸ್ತ್ರಗೊಳಿಸಲಾಗಿದ್ದು, ನಂದೀಶ್, ಪವನ್ ಮತ್ತು ನಾಗರಾಜ್ ಮರದ ಕೋಲು ಹಾಗೂ ನೈಲಾನ್ ಹಗ್ಗದಿಂದ ಹಲ್ಲೆ ನಡೆಸಿದ್ದಾರೆ.

**ದರ್ಶನ್ ಕ್ರೌರ್ಯ:** ನೈಲಾನ್ ಹಗ್ಗದಿಂದ ರೇಣುಕಸ್ವಾಮಿಯ ಕೈ ಹಾಗೂ ಬೆನ್ನಿಗೆ ದರ್ಶನ್ ಹಲವು ಬಾರಿ ಹೊಡೆದಿದ್ದಾರೆ. ಅಲ್ಲದೆ ಖಾಸಗಿ ಅಂಗಗಳಿಗೆ ಪದೇ ಪದೇ ಒದ್ದಿದ್ದಾರೆ. ಆಹಾರ ಮತ್ತು ನೀರು ನೀಡಿದ ಬಳಿಕವೂ ಕುತ್ತಿಗೆ ಹಾಗೂ ಎದೆಗೆ ಒದ್ದಿದ್ದರಿಂದ ರೇಣುಕಸ್ವಾಮಿ ಕುಸಿದು ಬಿದ್ದಿದ್ದಾರೆ. ದರ್ಶನ್ ತಮ್ಮ ಎರಡೂ ಕಾಲುಗಳನ್ನು ರೇಣುಕಸ್ವಾಮಿ ಎದೆಯ ಮೇಲೆ ಇಟ್ಟು ಒತ್ತಿದ್ದಾರೆ. ಆಗ ಹಲ್ಲೆ ಮಾರಕವಾಗಬಹುದು ಎಂದು ತಾನು ಹಲವು ಬಾರಿ ತಡೆದಿದ್ದಾಗಿಯೂ ಅವರು ತಿಳಿಸಿದ್ದಾರೆ.

ಪರಿಸ್ಥಿತಿ ಕೈಮೀರಿದ ಬಳಿಕ, ತಕ್ಕ ಪರಿಣಾಮಗಳನ್ನು ಎದುರಿಸಲು ಸಹಾಯ ಮಾಡದಿದ್ದರೆ ತಾನು ಬಂದೂಕಿನಿಂದ ಆತಹತ್ಯೆ ಮಾಡಿಕೊಳ್ಳುವುದಾಗಿ ದರ್ಶನ್ ಬೆದರಿಕೆ ಹಾಕಿದ್ದರು ಎಂದು ಪ್ರದೋಷ್ ಅರ್ಜಿಯಲ್ಲಿ ತಿಳಿಸಿದ್ದಾರೆ.

ತನಿಖೆಯನ್ನು ದಾರಿ ತಪ್ಪಿಸಲು, ಹಣಕಾಸಿನ ವಿವಾದದ ಹಿನ್ನೆಲೆಯಲ್ಲಿ ಚಿತ್ರದುರ್ಗದಿಂದ ಕರೆತರಲಾದ ರೇಣುಕಸ್ವಾಮಿಯನ್ನು ಜಗಳದ ಸಮಯದಲ್ಲಿ ಕೊಲೆ ಮಾಡಲಾಗಿದೆ ಎಂದು ಬಿಂಬಿಸಲು ಪರ್ಯಾಯ ಕಥೆಯನ್ನು ಸೃಷ್ಟಿಸಲು ಗುಂಪು ಚರ್ಚಿಸಿದೆ.

ರಾಘವೇಂದ್ರ, ಕಪ್ಪೆ ಅಲಿಯಾಸ್ ಕಾರ್ತಿಕ್ ಮತ್ತು ನಿಖಿಲ್ ಶರಣಾಗಲು ಒಪ್ಪಿಕೊಂಡಿದ್ದು, ದರ್ಶನ್ ನಗದು ಚೀಲದಿಂದ ನಾಗರಾಜ್‌ಗೆ 5 ಲಕ್ಷ ರೂ. ಮತ್ತು ವಿನಯ್‌ಗೆ 10 ಲಕ್ಷ ರೂ.ಗಳನ್ನು ನೀಡಿದ್ದಾರೆ.

ಸುಮನಹಳ್ಳಿ ಬಳಿಯ ಚರಂಡಿಯಲ್ಲಿ ಶವವನ್ನು ಎಸೆಯಲು ಬಿಳಿ ಸ್ಕಾರ್ಪಿಯೋ ವಾಹನ ಬಳಸಲಾಗಿದ್ದು, ಪೊಲೀಸರ ಕಣ್ಣು ತಪ್ಪಿಸಲು ವಾಹನದ ನಂಬರ್ ಪ್ಲೇಟ್‌ಗಳನ್ನು ತೆಗೆದು ಹಾಕಲಾಗಿತ್ತು.

ಕೊಲೆ ಮತ್ತು ಇತರ ಆರೋಪಿಗಳ ಪಾತ್ರದ ಬಗ್ಗೆ ತನಗೆ ತಿಳಿದಿರುವ ಎಲ್ಲಾ ಸತ್ಯಗಳನ್ನು ಬಹಿರಂಗಪಡಿಸುವುದಾಗಿ ತಿಳಿಸಿರುವ ಪ್ರದೋಷ್, ಕಾನೂನುಬದ್ಧ ಕ್ಷಮಾದಾನ ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಈ ಮೂಲಕ ಈ ಪ್ರಕರಣದಲ್ಲಿ ಕ್ಷಮಾದಾನ ಕೋರಿ ಅರ್ಜಿ ಸಲ್ಲಿಸಿದ ಮೊದಲ ಆರೋಪಿ ಇವರಾಗಿದ್ದಾರೆ. ಇವರ ಜತೆಗೆ ಆರೋಪಿಗಳಾದ ರವಿಶಂಕರ್ ಮತ್ತು ವಿನಯ್ ಕೂಡ ಅನುಮೋದಕ ಸ್ಥಾನಮಾನಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ.

### ಖಾಲಿ ನಿವೇಶನ ಸ್ವಚ್ಛವಾಗಿಡದಿದ್ದರೆ ಕ್ರಮ

## ಮಾಲೀಕರಿಂದ ಸ್ವಚ್ಛತಾ ವೆಚ್ಚ ವಸೂಲಿ: ಆಯುಕ್ತ ಮಹೇಶ್ವರ್ ರಾವ್

**ಬೆಂಗಳೂರು, ಆ.10:** ಜಿಬಿಎ ವ್ಯಾಪ್ತಿಯಲ್ಲಿ ಖಾಲಿ ನಿವೇಶನಗಳನ್ನು ಸ್ವಚ್ಛವಾಗಿಡದ ಮಾಲೀಕರ ವಿರುದ್ಧ ಕ್ರಮ ಕೈ ಸ್ವಚ್ಛತಾ ವೆಚ್ಚ ವಸೂಲಿ ಮಾಡಲಾಗುವುದೆಂದು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ತಿಳಿಸಿದರು.

ಬೆಂಗಳೂರು ನಗರವನ್ನು ಸ್ವಚ್ಛ, ಸುಂದರ ಹಾಗೂ ವಾಸಯೋಗ್ಯ ನಗರವನ್ನಾಗಿಸುವ ಉದ್ದೇಶದಿಂದ ಆಗಸ್ಟ್-2026ರ ಮಾಹೆಯಲ್ಲಿ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಘನತ್ಯಾಜ್ಯ ನಿರ್ವಹಣಾ ಉಪವಿಧಿಗಳು 2020ರು ಉಪಾವಿಧಿ 18(1)(ಬಿ) ರನ್ವಯ, ನಗರದ ಖಾಲಿ ನಿವೇಶನಗಳನ್ನು ಸ್ವಚ್ಛ ಹಾಗೂ ನೈರ್ಮಲ್ಯಯುತ ಸ್ಥಿತಿಯಲ್ಲಿ ನಿರ್ವಹಿಸುವುದು ಸಂಬಂಧಪಟ್ಟ ನಿವೇಶನ ಮಾಲೀಕರ ಕಡ್ಡಾಯ ಜವಾಬ್ದಾರಿಯಾಗಿದೆ ಎಂದಿದ್ದಾರೆ.

ಈ ಹಿನ್ನೆಲೆಯಲ್ಲಿ ಖಾಲಿ ನಿವೇಶನಗಳ ಮಾಲೀಕರು ತಮ್ಮ ನಿವೇಶನದಲ್ಲಿರುವ ತ್ಯಾಜ್ಯ, ಕಸ, ಮಣ್ಣು ಹಾಗೂ ಇತರೆ ವಸ್ತುಗಳನ್ನು ತೆರವುಗೊಳಿಸಿ, ನಿವೇಶನವನ್ನು



ಸ್ವಚ್ಛವಾಗಿಟ್ಟುಕೊಳ್ಳುವಂತೆ ಸೂಚಿಸಲಾಗಿದೆ.

ನಗರದ ಎಲ್ಲಾ ಖಾಲಿ ನಿವೇಶನಗಳ ಮಾಲೀಕರು 15.08.2026 ರೊಳಗಾಗಿ ತಮ್ಮ ನಿವೇಶನವನ್ನು ಸ್ವಚ್ಛಗೊಳಿಸಿ, ನಗರ ಪಾಲಿಕೆಯ ವತಿಯಿಂದ ಗುರುತಿಸಲಾದ ನಿಗದಿತ ಸ್ಥಳ(5 ಸ್ಥಳಗಳು)ದಲ್ಲಿ ವಿಲೇವಾರಿ ಮಾಡುವುದು. ಅಗತ್ಯವಿದ್ದಲ್ಲಿ, ಸ್ವಚ್ಛತೆಗಾಗಿ ಆಯಾ ನಗರ ಪಾಲಿಕೆಗಳು ಅಧಿಸೂಚಿಸಿದ ಸೇವಾದಾರರ ಸೇವೆಯನ್ನು ಸಹ ಪಡೆಯಬಹುದು ಎಂದು ತಿಳಿಸಿದ್ದಾರೆ.

ಆಗಸ್ಟ್-15 ರ ನಂತರವೂ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸ ದಿದ್ದಲ್ಲಿ, ನಗರ ಪಾಲಿಕೆಯ ವತಿಯಿಂದ ತ್ಯಾಜ್ಯ/ಡೆಬ್ರಿಸ್ ಅನ್ನು ತೆರವುಗೊಳಿಸಿ, ಸ್ವಚ್ಛತಾ ವೆಚ್ಚ ಹಾಗೂ ತ್ಯಾಜ್ಯ ಸಾಗಾಣಿಕೆ ವೆಚ್ಚವನ್ನು ಸಂಬಂಧಪಟ್ಟ ನಿವೇಶನ ಮಾಲೀಕರಿಂದ ವಸೂಲಿ ಮಾಡಲಾಗುವುದು. ಈ ಕ್ರಮವು ಘನತ್ಯಾಜ್ಯ ನಿರ್ವಹಣಾ ಉಪ ವಿಧಿಗಳು?2020ರ ಉಪವಿಧಿ 18(1)(ಎ) (ii) ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಧಿನಿಯಮ, 2024ರ ಕಲಂ 285(2)ರನ್ವಯ ಆಸ್ತಿ ತೆರಿಗೆಯೊಂದಿಗೆ ಸಂಗ್ರಹಿಸಲಾಗುವುದು ಎಂದು ಹೇಳಿದ್ದಾರೆ.


ಖಾಲಿ ನಿವೇಶನಗಳ ಮಾಲೀಕರು ಸಾರ್ವಜನಿಕ ಆರೋಗ್ಯ ಮತ್ತು ನಗರದ ಸ್ವಚ್ಛತೆಯ ಹಿತದೃಷ್ಟಿಯಿಂದ ನಿಗದಿತ ದಿನಾಂಕ ದೊಳಗಾಗಿ ತಮ್ಮ ನಿವೇಶನ ಗಳನ್ನು ಸ್ವಚ್ಛಗೊಳಿಸಿ, ತ್ಯಾಜ್ಯರಹಿತ ವಾಗಿಡಲು ಸಹಕರಿಸುವಂತೆ ಮನವಿ

**1) ನಿವೇಶನ ಸ್ವಚ್ಛಗೊಳಿಸಲು ತಗಲುವ ವೆಚ್ಚ**
**20/30 = 600 ಚ.ಅಡಿ / 55.74 ಚ.ಮೀ:**
**ಖಾಲಿ ನಿವೇಶನ (ತಡೆಗೋಡೆ ಇಲ್ಲದ) (0.45 ಮೀ. ಆಳ) – 6700 ರೂ.**
**ಖಾಲಿ ನಿವೇಶನ (ತಡೆಗೋಡೆಯಿರುವ) 0.45 ಮೀ. ಆಳ) – 7700 ರೂ.**
**ತ್ಯಾಜ್ಯ/ಅವಶೇಷ ಸಾಗಣೆಯ ವೆಚ್ಚ – 19,200 ರೂ.**
**2) 30/40 = 1,200 ಚ.ಅಡಿ / 111.48 ಚ.ಮೀ.:**
**ಖಾಲಿ ನಿವೇಶನ (ತಡೆಗೋಡೆ ಇಲ್ಲದ) (0.45 ಮೀ. ಆಳ) – 13,400 ರೂ.**
**ಖಾಲಿ ನಿವೇಶನ (ತಡೆಗೋಡೆಯಿರುವ) (0.45 ಮೀ. ಆಳ) – 14,400 ರೂ.**
**ತ್ಯಾಜ್ಯ/ಅವಶೇಷ ಸಾಗಣೆಯ – 38,400 ರೂ.**
**3) 30/50 = 1,500 ಚ.ಅಡಿ / 139.35 ಚ.ಮೀ.:**
**ಖಾಲಿ ನಿವೇಶನ (ತಡೆಗೋಡೆ ಇಲ್ಲದ) (0.45 ಮೀ. ಆಳ) – 16,750 ರೂ.**
**ಖಾಲಿ ನಿವೇಶನ (ತಡೆಗೋಡೆಯಿರುವ) (0.45 ಮೀ. ಆಳ) – 14,750 ರೂ.**
**ತ್ಯಾಜ್ಯ/ಅವಶೇಷ ಸಾಗಣೆಯ ವೆಚ್ಚ – 48,000 ರೂ.**
**4) 40/60 = 2,400 ಚ.ಅಡಿ / 222.97 ಚ.ಮೀ.:**
**ಖಾಲಿ ನಿವೇಶನ (ತಡೆಗೋಡೆ ಇಲ್ಲದ) (0.45 ಮೀ. ಆಳ) – 26,800 ರೂ.**
**ಖಾಲಿ ನಿವೇಶನ (ತಡೆಗೋಡೆಯಿರುವ) (0.45 ಮೀ. ಆಳ) – 27,800 ರೂ.**
**ತ್ಯಾಜ್ಯ/ಅವಶೇಷ ಸಾಗಣೆಯ ವೆಚ್ಚ – 76,800 ರೂ.**
**5) 50/80 = 4,000 ಚ.ಅಡಿ / 371.61 ಚ.ಮೀ.:**
**ಖಾಲಿ ನಿವೇಶನ (ತಡೆಗೋಡೆ ಇಲ್ಲದ) (0.45 ಮೀ. ಆಳ) – 46,700 ರೂ.**
**ಖಾಲಿ ನಿವೇಶನ (ತಡೆಗೋಡೆಯಿರುವ) (0.45 ಮೀ. ಆಳ) – 47,700 ರೂ.**
**ತ್ಯಾಜ್ಯ/ಅವಶೇಷ ಸಾಗಣೆಯ ವೆಚ್ಚ – 1,28,000 ರೂ.**
**(ಮೇಲ್ಕಂಡಂತೆ, ಇದಕ್ಕಿಂತಲೂ ಹೆಚ್ಚಿನ ಅಳತೆ/ವಿಸ್ತೀರ್ಣದ ನಿವೇಶನಗಳಿಗೆ, ವಿಸ್ತೀರ್ಣಕ್ಕೆ ಅನುಗುಣವಾಗಿ ವೆಚ್ಚವನ್ನು ಆಸ್ತಿ ತೆರಿಗೆಯೊಂದಿಗೆ ಸಂಗ್ರಹಿಸಲಾಗುವುದು.)**

## ನೇಕಾರ ಸಮ್ಮಾನ್ ಯೋಜನೆ: ಪ್ರೋತ್ಸಾಹಧನ 5 ಸಾವಿರ ರೂ.ಗೆ ಏರಿಕೆ

**ಬೆಂಗಳೂರು, ಆ.10:** ನೇಕಾರ ಸಮ್ಮಾನ್ ಯೋಜನೆಯಡಿ ನೇರ ನಗದು ವರ್ಗಾವಣೆ ಮೂಲಕ ವಾರ್ಷಿಕ ಎರಡು ಸಾವಿರ ರೂ ಇದ್ದ ಪ್ರೋತ್ಸಾಹಧನದ ಮೊತ್ತವನ್ನು ಸರ್ಕಾರ ಐದು ಸಾವಿರ ರೂಗಳಿಗೆ ಹೆಚ್ಚಿಸಿದೆ.

ಪ್ರೋತ್ಸಾಹಧನ ಹೆಚ್ಚಳದಿಂದ ಕೈಮಗ್ಗ ನೇಕಾರರಿಗೆ ವರದಾನವಾಗಿದೆ. ಕೈಮಗ್ಗ ನೇಕಾರರ ಚಟುವಟಿಕೆಗಳ ಪಾರಂಪರಿಕ ಕಲೆ ಮತ್ತು ಶ್ರಮ ಪರಿಗಣಿಸಿ, ಸಂಕಷ್ಟದಲ್ಲಿರುವ ನೇಕಾರರ ನೆರವಿಗಾಗಿ ನೇಕಾರ ಸಮ್ಮಾನ್ ಯೋಜನೆ ಜಾರಿಯಲ್ಲಿದೆ.



ಆರಂಭದಲ್ಲಿ ತಲಾ ಎರಡು ಸಾವಿರ ರೂ. ನೀಡುತ್ತಿದ್ದ ರಾಜ್ಯ ಸರ್ಕಾರ, ಕಳೆದ ಮೂರು ವರ್ಷಗಳಿಂದ ಐದು ಸಾವಿರ ರೂ. ಸಹಾಯಧನ ನೀಡುತ್ತಿರುವುದು ಚಿತ್ರದುರ್ಗ ಜಿಲ್ಲೆಯ ನೇಕಾರರಲ್ಲಿ ಮತ್ತಷ್ಟು ಚೈತನ್ಯ ಮೂಡಿಸಿದೆ.ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಹಿಂದೆ ಎರಡು ಸಾವಿರ ರೂ. ಸಹಾಯಧನ ನೀಡಲಾಗುತ್ತಿತ್ತು, ಈಗ ಐದು ಸಾವಿರ ರೂ. ನೀಡಲಾಗುತ್ತಿದೆ.

ಅಲ್ಲದೆ, ನಾನಾ ರೀತಿಯ ಯಂತ್ರೋಪಕರಣ ಹಾಗೂ ಸಲಕರಣೆಗಳನ್ನು ಒದಗಿಸಲಾಗುತ್ತಿದೆ. ಇದರಿಂದ ಹೊಸ ವಿನ್ಯಾಸಗಳ ರೇಷ್ಮೆ ಸೀರೆಗಳನ್ನು ತಯಾರಿಸಿ ದೇಶ, ವಿದೇಶಗಳಲ್ಲಿ ಪ್ರದರ್ಶಿಸಲು ಸಹಕಾರಿಯಾಗಿದೆ.

ನೇಕಾರರ ಸೇವಾ ಕೇಂದ್ರದ ಮೂಲಕ ಕೇಂದ್ರ ಸರ್ಕಾರ ಹಲವು ಸಲಕರಣೆಗಳನ್ನು ಒದಗಿಸುತ್ತಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒದಗಿಸುತ್ತಿರುವ ಯಂತ್ರೋಪಕರಣ, ಸಲಕರಣೆಗಳನ್ನು ಪಡೆಯುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

## ಮಳೆ ಕೊರತೆ: ರಾಜ್ಯದ 10 ಜಿಲ್ಲೆಗಳಲ್ಲಿ ಭತ್ತದ ಬಿತ್ತನೆಯೇ ಆರಂಭವಾಗಿಲ್ಲ

**ಬೆಂಗಳೂರು, ಆ.10:** ಕರ್ನಾಟಕದಲ್ಲಿ ಮಳೆ ಕೊರತೆಯಿಂದ ಈವರೆಗೂ 10 ಜಿಲ್ಲೆಗಳಲ್ಲಿ ಭತ್ತದ ಬಿತ್ತನೆ ಆರಂಭವಾಗಿಯೇ ಇಲ್ಲ. ಏಳು ಜಿಲ್ಲೆಗಳಲ್ಲಿ ಇನ್ನೂ ಬಿತ್ತನೆಯೇ ಆರಂಭವಾಗಿಲ್ಲ. ಉಳಿದ ಜಿಲ್ಲೆಗಳಲ್ಲಿ ಈಗಷ್ಟೇ ಪ್ರಕ್ರಿಯೆ ಶುರುವಾಗಿದೆ.

ದೇಶದ ಪ್ರಮುಖ ಭತ್ತ ಬೆಳೆಯುವ ರಾಜ್ಯಗಳಲ್ಲಿ ಕರ್ನಾಟಕವೂ ಒಂದು. ಇಲ್ಲಿ ಮಳೆಯಾಶ್ರಿತವಾಗಿ ಭತ್ತ ಬೆಳೆಯುವ ಕೆಲವು ಜಿಲ್ಲೆಗಳಿದ್ದರೆ, ನಾಲೆ ನೀರು ಆಶ್ರಯಿಸಿ ಹೆಚ್ಚು ಜಿಲ್ಲೆಗಳಲ್ಲಿ ಭತ್ತವನ್ನು ಬೆಳೆಯಲಾಗುತ್ತಿದೆ. ಈ ಬಾರಿ ಮಳೆಯೂ ಇಲ್ಲದೇ, ನಾಲೆಗಳಿಗೂ ನೀರು ಹರಿಸದೇ ಇರುವುದರಿಂದ ಭತ್ತ ಬಿತ್ತನೆ ಪ್ರಮಾಣ ಶೇ.20 ದಾಟಿಲ್ಲ. ಏಳೆಂಟು ಜಿಲ್ಲೆಗಳಲ್ಲಿ ಮಾತ್ರ ಮಳೆ ನಂಬಿಯೇ ಬಿತ್ತನೆ ಮಾಡಲಾಗಿದೆ. ಕರ್ನಾಟಕದಲ್ಲಿ 10 ಲಕ್ಷ ಹೆಕ್ಟೇರ್ ನಲ್ಲಿ ಭತ್ತ ಬೆಳೆಯಲಾಗುತ್ತದೆ. ಈ ಬಾರಿ ಬರೀ 2 ಲಕ್ಷಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಚಾಮರಾಜನಗರ, ಬಾಗಲಕೋಟೆ, ವಿಜಯಪುರ, ಮಂಡ್ಯ, ಮೈಸೂರು, ಬೆಂಗಳೂರು ದಕ್ಷಿಣ, ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಬಿತ್ತನೆ ಪ್ರಮಾಣ ಶೂನ್ಯ ಇದೆ. ಚಿತ್ರದುರ್ಗ, ಕೋಲಾರದಲ್ಲಿ ಶೇ 1, ಬೆಂಗಳೂರು ಗ್ರಾಮಾಂತರ, ರಾಯಚೂರು ಜಿಲ್ಲೆಗಳಲ್ಲಿ ಶೇ 2ರಷ್ಟು ಮಾತ್ರ ಭತ್ತದ ಬಿತ್ತನೆ ಪೂರ್ಣಗೊಂಡಿದೆ. ತುಮಕೂರು ಜಿಲ್ಲೆಯಲ್ಲಿ ಶೇ 9, ಹಾಸನ ಜಿಲ್ಲೆಯಲ್ಲಿ ಶೇ 7ರಷ್ಟು ಮಾತ್ರ ಬಿತ್ತನೆಯಾಗಿದೆ. ಬಳ್ಳಾರಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಶೇ 10ರಷ್ಟು ಬಿತ್ತನೆಯಾಗಿದೆ. ವಿಜಯಪುರ, ಬಾಗಲಕೋಟೆ ಜಿಲ್ಲೆಯಲ್ಲಿ ಅಲ್ಪ ಪ್ರಮಾಣದಲ್ಲಿ ಮಾತ್ರ ಬಿತ್ತನೆ ಮಾಡಲಾಗುತ್ತದೆ. ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ 200 ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆದರೂ ಈವರೆಗೂ ಬಿತ್ತನೆ ಆಗಿಲ್ಲ. ಮೈಸೂರು ಜಿಲ್ಲೆಯಲ್ಲಿ 77500 ಹೆಕ್ಟೇರ್ ಹಾಗೂ ಮಂಡ್ಯ ಜಿಲ್ಲೆಯಲ್ಲಿ 56889 ಹೆಕ್ಟೇರ್, ಬೆಂಗಳೂರು ದಕ್ಷಿಣದಲ್ಲಿ 3025 ಹೆಕ್ಟೇರ್ ಪ್ರದೇಶ ಭತ್ತ ಬೆಳದರೂ ಈವರೆಗೂ ಬಿತ್ತನೆ ಮಾಡಿಯೇ ಇಲ್ಲ. ಚಾಮರಾಜನಗರ ಜಿಲ್ಲೆಯಲ್ಲಿ 8330 ಹೆಕ್ಟೇರ್ ಭತ್ತದ ಪ್ರದೇಶವಿದ್ದರೂ ಈವರೆಗೂ



ಬಿತ್ತನೆ ಮಾಡುವ ಸಾಹಸಕ್ಕೆ ರೈತರು ಹೋಗಿಲ್ಲ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 150 ಹೆಕ್ಟೇರ್ ಬಿತ್ತನೆ ಪ್ರದೇಶವಿದ್ದರೂ ಶೇ 2, ರಾಯಚೂರು ಜಿಲ್ಲೆಯಲ್ಲಿ 190638 ಹೆಕ್ಟೇರ್ ಭತ್ತದ ಪ್ರದೇಶವಿದ್ದರೂ ಈವರೆಗೂ 4020 ಹೆಕ್ಟೇರ್ ನೊಂದಿಗೆ ಶೇ 2 ಗುರಿ ಮಾತ್ರ ತಲುಪಲಾಗಿದೆ. ಕೋಲಾರ ಜಿಲ್ಲೆಯ 3916 ಹೆಕ್ಟೇರ್‌ನಲ್ಲಿ 32 ಹೆಕ್ಟೇರ್ ಹಾಗೂ ಚಿತ್ರದುರ್ಗ ಜಿಲ್ಲೆಯ 1100 ಹೆಕ್ಟೇರ್ ನಲ್ಲಿ ಬರೀ 11 ಹೆಕ್ಟೇರ್ ನೊಂದಿಗೆ ಶೇ 1ರ ಗುರಿ ಮುಟ್ಟಲಾಗಿದೆ. ಹಾಸನ ಜಿಲ್ಲೆಯಲ್ಲಿ 30500 ಹೆಕ್ಟೇರ್ ಗುರಿ ಇದ್ದರೂ ಈವರೆಗೂ 2255 ಹೆಕ್ಟೇರ್ ನೊಂದಿಗೆ ಶೇ 7, ಕೊಡಗು ಜಿಲ್ಲೆಯಲ್ಲೂ 17500 ಹೆಕ್ಟೇರ್ ಗುರಿ ಇದ್ದರೂ 1186 ಹೆಕ್ಟೇರ್ ಬಿತ್ತನೆಯೊಂದಿಗೆ ಶೇ 7ರ ಗುರಿ ತಲುಪಲಾಗಿದೆ. ತುಮಕೂರು 3050 ಹೆಕ್ಟೇರ್ ನಲ್ಲಿ 277 ಹೆಕ್ಟೇರ್ ಮಾತ್ರ ಭತ್ತ ಬಿತ್ತನೆಯಾಗಿ ಶೇ.9 ಗುರಿ ಮುಟ್ಟಲಾಗಿದೆ.ಬಳ್ಳಾರಿ 87741 ಹೆಕ್ಟೇರ್ ಪ್ರದೇಶವಿದ್ದರೂ ಬರೀ 8547 ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ2000 ಹೆಕ್ಟೇರ್ ಪ್ರದೇಶದಲ್ಲಿ ಬರೀ 200 ಹೆಕ್ಟೇರ್ ನೊಂದಿಗೆ ಶೇ 10ರ ಗುರಿ ಮುಟ್ಟಲಾಗಿದೆ. ಕೆಲವು ಜಿಲ್ಲೆಗಳಲ್ಲಿ ಮಳೆ ಕೊರತೆ ಹಾಗೂ ನಾಲೆಗಳಲ್ಲಿ ನೀರು ಬಾರದೇ ಇರುವುದರಿಂದ ಹೆಚ್ಚು ಬಿತ್ತನೆ ಮಾಡಿಲ್ಲ. ಸರ್ಕಾರ ತಿಂಗಳ ಹಿಂದೆಯೇ ಈ ಬಾರಿ ಬೆಳೆಗೆ ನೀರು ಇಲ್ಲ ಎಂದು ಘೋಷಿಸಿದ ನಂತರ ಕೆಲವರು ಬಿತ್ತನೆ ಮಾಡಲು ಮುಂದಾಗಿಲ್ಲ ಎನ್ನುವುದು ಕೃಷಿ ಇಲಾಖೆ ಅಧಿಕಾರಿಗಳ ವಿವರಣೆ.

## ಕಾವೇರಿ ಜಲಾಶಯಗಳ ನೀರಿನ ಮಟ್ಟ ಏರಿಕೆ

**ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಕಳೆದ ಒಂದು ವಾರದಿಂದ ನಿರಂತರ ಮಳೆಯಾಗುತ್ತಿರುವ ಪರಿಣಾಮ ಪ್ರಮುಖ ಕಾವೇರಿ ಜಲಾಶಯಗಳಲ್ಲಿ ನೀರಿನ ಮಟ್ಟದಲ್ಲಿ ಏರಿಕೆಯಾಗಿದೆ.**



**ಪ್ರಮುಖ ಕೆ.ಆರ್.ಎಸ್ ಜಲಾಶಯದ ಇಂದಿನ ನೀರಿನ ಮಟ್ಟ 109 ಅಡಿಗೆ ತಲುಪಿದೆ. ಜಲಾಶಯದ ಗರಿಷ್ಠ ಮಟ್ಟ 124.80 ಅಡಿ ಇದೆ. 11,587 ಕ್ಯೂಸೆಕ್ ಒಳಹರಿವು ಹಾಗೂ 2,335 ಕ್ಯೂಸೆಕ್ ಹೊರಹರಿವು ಇದೆ. ಉಳಿದಂತೆ, ಕಬಿನಿ ಜಲಾಶಯದ ಇಂದಿನ ನೀರಿನ ಮಟ್ಟ 2 ಸಾವಿರದ 283ಕ್ಕೂ ಅಧಿಕ ಎಂ.ಎಸ್.ಎಲ್. ಮಟ್ಟ ತಲುಪಿದ್ದರೆ, ಹಾರಂಗಿ ಜಲಾಶಯ 2 ಸಾವಿರದ 858ಕ್ಕೂ ಅಧಿಕ ಎಂ.ಎಸ್.ಎಲ್ ಮಟ್ಟ ತಲುಪಿದೆ.**



ಬೆಂಗಳೂರಿನ ಕಬ್ಬನ್ ರಸ್ತೆಯಲ್ಲಿರುವ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಸೋಮವಾರ ಕಂಡುಬಂದ ಸ್ವಾತಂತ್ರ್ಯ ದಿನಾಚರಣೆಯ ಸಿದ್ಧತೆ.

# 4ನೇ ದಾಸ ಸಾಹಿತ್ಯ ಸಮ್ಮೇಳನ, ಮನದ ತೊಳಲಾಟಕ್ಕೆ ದಾಸಸಾಹಿತ್ಯ ದಿವ್ಯೌಷಧ: ಸುರೇಶ ಜಾಧವ ಅಭಿಮತ

**ಕಲಬುರಗಿ, ಆ. 10:** 'ತಾಳುವಿಕೆಂತ ತಪವು ಇಲ್ಲ', 'ಈಸಬೇಕು ಇದ್ದು ಜಯಿಸಬೇಕು', 'ರೊಕ್ಕ ಎರಡಕ್ಕೂ ದುಃಖ. ಗಕ್ಕನೆ ಹೋದರೆ ಘಾತ ಕಾಣಕ್ಯ, ಚಿಕ್ಕತನಕ್ಕೆ ತಂದು ಕೆಡೆಸುವುದು ರೊಕ್ಕ...'



ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಸುರೇಶ ಎಲ್.ಜಾಧವ, 'ಕುಟುಂಬ ಮತ್ತು ಸಮಾಜದ ಸ್ವಾಸ್ಥ್ಯದ ಕೀಲಿಕೈ ದಾಸ ಸಾಹಿತ್ಯದಲ್ಲಿ ಅಂತರ್ಗತವಾದ ಜೀವನ ಮೌಲ್ಯಗಳಲ್ಲಿ ಅಡಗಿದೆ ಎಂದು ಪ್ರತಿಪಾದಿಸಿದರು.

ದಾಸ ಸಾಹಿತ್ಯವು ಕನ್ನಡ ವಾಗ್ದೇವಿಯ ಭಂಡಾರಕ್ಕೆ ಅಮೂಲ್ಯ ಕಾಣಿಕೆ ನೀಡಿದೆ. ಮನುಷ್ಯನ ಸಣ್ಣತನಗಳನ್ನು ಹೋಗಲಾಡಿಸಿ, ವಿಶ್ವಮಾನವನಂತೆ ಬಾಳಲು ಪ್ರೇರಣೆಯನ್ನು ದಾಸಸಾಹಿತ್ಯ ಒಳಗೊಂಡಿದೆ. ಇಂದಿನ ವಿಜ್ಞಾನ–ತಂತ್ರಜ್ಞಾನಗಳ ನಾಗಾಲೋಟದಲ್ಲಿ ಯುವಜನರು ವಾಟ್ಸ್‌ಆಯಪ್, ಫೇಸ್‌ಬುಕ್, ಇನ್‌ಸ್ಟಾಗ್ರಾಂ ಮುಂತಾದ ಡಿಜಿಟಲ್ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಯುವ ಜನರ ಮನಸ್ಸನ್ನು ನಿಯಂತ್ರಿಸುವ ಸಾಂಸ್ಕೃತಿಕ ಮೌಲ್ಯಗಳನ್ನು ದಾಸ ಸಾಹಿತ್ಯ ಒಳಗೊಂಡಿದೆ. ಜೀವನಮೌಲ್ಯಗಳು ಮಾಯವಾಗಿ, ಭ್ರಮೆ–ಅನಿಶ್ಚತತೆಯಲ್ಲಿ ಮುಳುಗಿ, ಯಾವುದರಲ್ಲೂ ಸುಖ ಕಾಣದಂಥ ಮನಗಳ ತೊಳಲಾಟಕ್ಕೆ ಹರಿದಾಸರ ಕೀರ್ತನೆಗಳೇ ದಿವ್ಯೌಷಧ ಎಂದು ಬಣ್ಣಿಸಿದರು.

ವಚನ ಸಾಹಿತ್ಯ ಮತ್ತು ದಾಸ ಸಾಹಿತ್ಯ ಎರಡೂ ಕನ್ನಡ ನಾಡು–ನುಡಿ, ಸಾಹಿತ್ಯದ ಎರಡು ಚಕ್ಷುಗಳು. ಶರಣರ ಬದುಕು ಹಾಗೂ ಸಾಹಿತ್ಯಗಳೆರಡೂ ಸಾಮಾಜಿಕ ಬದಲಾವಣೆಯ ಸಾಮೂಹಿಕ ಕ್ರಾಂತಿಯ ಸ್ವರೂಪ ಪಡೆದರೆ, ದಾಸರ ಬದುಕು ಹಾಗೂ ಸಾಹಿತ್ಯಗಳೆರಡೂ ವ್ಯಕ್ತಿಯ ಮಾನಸಿಕ ಪರಿವರ್ತನೆಯ ಮೂಲಕ ಬದಲಾವಣೆಗೆ ನಾಂದಿ ಹಾಡಿದವು. ಸಿದ್ಧಾಂತಗಳು ಭಿನ್ನವಾದರೂ, ಶರಣರ–ದಾಸರ ಗುರಿ–ಉದ್ದೇಶಗಳು ಒಂದೇ; ಅದುವೇ ಸಮಾಜ ಶುದ್ಧಿ, ಬದುಕಿನ ಸಿದ್ಧಿ ಎಂದು ವಿಶ್ಲೇಷಿಸಿದರು.

ಸಮ್ಮೇಳನ ಉದ್ಘಾಟಿಸಿದ ಕರ್ನಾಟಕ ಜಾನಪದ ವಿ.ವಿ ವಿಶ್ರಾಂತ ಕುಲಪತಿ ಪ್ರೊ.ಡಿ.ಬಿ.ನಾಯಕ, ದಾಸ ಸಾಹಿತ್ಯದ ಮೂಲ ನೆಲೆ ಭಕ್ತಿ. ಅಂಥ ದಾಸ ಸಾಹಿತ್ಯವು ಧರ್ಮದ ಕಟ್ಟಳೆಗೆ ಒಳಗಾಗಿ ಇಂದಿಗೂ ಸರ್ವಜನರನ್ನು ಮುಟ್ಟಲು ಸಾಧ್ಯವಾಗಲಿಲ್ಲ. ಇದೇ ಕಾರಣಕ್ಕೆ ಸಂಸ್ಕೃತ ಭಾಷೆ ಶ್ರೀಸಾಮಾನ್ಯರಿಂದ ದೂರವಾಯಿತು. ಈ ಸಾಹಿತ್ಯವು ಬೇರೆ ಭಾಷೆಗಳಿಗೂ ಅನುವಾದಗೊಳ್ಳಬೇಕಿದೆ. ಜೊತೆಗೆ ಮಕ್ಕಳು, ಯುವಜನರಿಗೂ ತಲುಪಬೇಕಿದೆ.

ಸಮಾಜದಲ್ಲಿ ಇಂದು ಢಂಬಾಚಾರ ಹೆಚ್ಚಾಗಿದೆ. ಹೊರಗೊಂದು–ಒಳಗೊಂದು ಮನೋಭಾವವಿದೆ. ಸಮಸಮಾಜದ ನಿರ್ಮಾಣ, ಸಾಮರಸ್ಯದ ಬದುಕು, ಧಾರ್ಮಿಕ ಸಹಿಷ್ಣುತೆ ಜನರ ಮನದಲ್ಲಿ ಬೆಳೆಸಬೇಕಿದೆ. ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿಯನ್ನು ಹೊಸ ಪೀಳಿಗೆಗೆ ಸಂವಾದಿಸಬೇಕಿದೆ. ಆ ನೆಲೆಯಲ್ಲಿ ದಾಸ ಸಾಹಿತ್ಯ ಇಂದಿನ ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.

ಸಾಹಿತಿ ಶ್ರೀನಿವಾಸ ಸಿರನೂರಕರ 'ಈಸಬೇಕು, ಇದ್ದು ಜಯಿಸಬೇಕು' ಎಂಬ ದಾಸರವಾಣಿ ಯನ್ನು ಸರ್ಕಾರ ಮಾನಸಿಕ ಆರೋಗ್ಯ ಕಾರ್ಯಕ್ರಮದ ಘೋಷವಾಕ್ಯ ಮಾಡಬೇಕು. 'ಕೆರೆಯ ನೀರು ಕೆರೆಗೆ ಚೆಲ್ಲಿ' ವಾಣಿಯನ್ನು ಕೆರೆಗಳ ಪುನಶ್ಚೇತನ ಯೋಜನೆಯ

> ಲೌಕಿಕ–ಪಾರಮಾರ್ಥಿಕಗಳೆರಡರ ಸಮನ್ವಯ ದಾಸರ ಲೋಕಸೃಷ್ಟಿಯ ವಿಶೇಷ. ಅವರು ತಾಳ್ಮೆ, ವೈರಾಗ್ಯಕ್ಕೆ ಒತ್ತುಕೊಟ್ಟರು. ಭಕ್ತಿ ಮೀರಿದ ವಿಶ್ವಮಾನವ ಚಿಂತನೆ ಸಾರಿದರು.
> – ಸುರೇಶ್ ಜಾಧವ
> ಸಮ್ಮೇಳನಾಧ್ಯಕ್ಷ.

# ಬರಗಾಲ ಪೀಡಿತ ರೈತರ ಸಮಸ್ಯೆ ಆಲಿಸಿದ ಸಚಿವ ಪ್ರಿಯಾಂಕ್ ಖರ್ಗೆ



ಕಲಬುರಗಿ ಜಿಲ್ಲೆಯ ಬರಪೀಡಿತ ಪ್ರದೇಶಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಭೇಟಿ ನೀಡಿ ಪರಿಶೀಲಿಸಿ ರೈತರೊಂದಿಗೆ ಮತನಡಿದರು. ಶಾಸಕ ಅಲ್ಲಮಪ್ರಭು ಪಾಟೀಲ್, ಕೃಷಿ ಅಧಿಕಾರಿಗಳೂ ಇದ್ದರು.

**ಕಲಬುರಗಿ, ಆ. 10:** ಮುಂಗರು ಆರಂಭವಾಗಿ ಎರಡು ತಇಂಗಳು ಕಳೆದರೂ ಜಿಲ್ಲೆಯಲ್ಲಿ ನಿರೀಕ್ಷಿತ ಮಳೆ ಬಂದಿಲ್ಲ. ಹೀಗಾಗಿ ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆ ತೊಗರಿ ಬಿತ್ತನೆಗೆ ಹಿನ್ನೆಡೆಯಗಿದ್ದು, ಇನ್ನುಳಿದಂತೆ ಹೆಸರು, ಸೂರ್ಯಕಾಂತಿ, ಎಳ್ಳು, ಸಜ್ಜೆ ಮತ್ತು ಉದ್ದು ಬೆಳೆಗಳೂ ಕೈಬಿಟ್ಟು ಹೋಗಿವೆ. ನಮ್ಮೂರಲ್ಲಿ ಕುಡಿಯುವ ನೀರಿನ ಬಾವಿಗಳೂ ಬತ್ತಿ ಹೋಗಿದ್ದು, ಜಾನುವರುಗಳಿಗೆ ಮೇವು ನೀರು ಕೂಡ ಇಲ್ಲದಂತಾಗಿದೆ ಎಂದು ರೈತರು ಜಿಲ್ಲಾ ಉಸ್ತುವಾರಿ ಸಚಿವರ ಮುಂದೆ ಗೋಳು ತೋಡಿಕೊಂಡರು.

ರಾಜ್ಯದ ಗೃಹ, ಐ.ಟಿ–ಬಿ.ಟಿ, ಇ–ಆಡಳಿತ ಮತ್ತು ಜಿಲ್ಲಾ ಉಸ್ತುವಾರಿ (ಪ್ರಕೃತಿ ವಿಕೋಪ) ಸಚಿವ ಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿಗಳ ಆದೇಶದ ಮೇರೆಗೆ ಸೋಮವಾರ ಕಲಬುರಗಿ ತಾಲೂಕಿನ ಅವರಾದ ಬಿ. ಮತ್ತು ಕೆರೆ ಭೋಸಗಾ ಗ್ರಾಮಗಳಿಗೆ ಭೇಟಿ ನೀಡಿ, ಮುಂಗಾರು ಮಳೆ ಇಲ್ಲದೆ ಹಾಳಾದ ಬೆಳೆ ಪ್ರದೇಶಗಳ ವೀಕ್ಷಣೆ ಮಾಡಿದರು.

ಸಚಿವರೊಂದಿಗೆ ಕೃಷಿ ಅಧಿಕಾರಿಗಳೂ ಇದ್ದು, ತೊಗರಿ ಪ್ರದೇಶದಲ್ಲಿ ಕೇವಲ ಶೇ.42 ರಷ್ಟು ಮಾತ್ರ ಬಿತ್ತನೆಯಾಗಿದ್ದು, ಅದೂ ಕೂಡ ಮಳೆಯಿಲ್ಲದೇ ರೈತರು ಅದನ್ನು ತೆಗೆಯುತ್ತಿದ್ದಾರೆ.

ಇನ್ನುಳಿದಂತೆ ಮುಂಗಾರಿನ ಯಾವುದೇ ಬೆಳೆಗಳು ರೈತರ ಕೈಗೆ ಹತ್ತುವದಿಲ್ಲ. ಮಳೆ ಕೊರತೆಯೇ ಕಾರಣ ಎಂದು ಸಚಿವರ ಗಮನಕ್ಕೆ ತಂದರು. ಅಲ್ಲದೇ ಜಿಲ್ಲೆಯ ಯಾವ ಯಾವ ಭಾಗದಲ್ಲಿ ಯಾವ ಯಾವ ಬೆಳೆಗಳು ಸಂಪೂರ್ಣ ನಷ್ಟವಾಗಿವೆ ಎಂಬುದನ್ನೂ ಸಚಿವರಿಗೆ ವಿವರಿಸಿದರು.

ಈ ವೇಳೆ ರೈತರೊಂದಿಗೆ ಮಾತನಾಡಿದ ಅವರು, ರೈತರ ಸಮಸ್ಯೆಗಳನ್ನು ಆಲಿಸಿದರು. ಕಳೆದ ಎರಡು ತಿಂಗಳಿಂದ ನಿರೀಕ್ಷಿತ ಮಳೆ ಬಿದ್ದಿಲ್ಲ. ಇದರಿಂದಾಗಿ ಬಿತ್ತಿದ ತೊಗರಿ ಸುಟ್ಟುಹೋಗುವ ಹಂತದಲ್ಲಿದೆ. ಕೆಲವು ಕಡೆಗಳಲ್ಲಿ ಈಗಾಗಲೇ ಬಿತ್ತಿದ್ದ ತೊಗರಿ ಬೆಳೆಯನ್ನು ಪುನಃ ತೆಗೆದು ಹರಗಿ (ತೆಗೆದು ಹಾಕಿ) ಮತ್ತೊಮ್ಮೆ ಬಿತ್ತಲು ಭೂಮಿ ಹದ ಮಾಡಿಕೊಳ್ಳಲಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಸರಕಾರ ರೈತರ ನೆರವಿಗೆ ಬರಬೇಕು ಎಂದು ರೈತರು ಸಚಿವ ಖರ್ಗೆ ಅವರಿಗೆ ಮನವಿ ಮಾಡಿದರು.

# ಆಕಾಶವಾಣಿಯ ಹಿರಿಯ ವಾರ್ತಾ ವಾಚಕಿ ನಾಗಮಣಿ ಎಸ್. ರಾವ್ ಅವರಿಗೆ ಸನ್ಮಾನ

**ಬೆಂಗಳೂರು, ಆ.10:** ಹಿರಿಯ ಪತ್ರಕರ್ತೆಯರಿಗೆ 'ಮನೆಯಂಗಳದಲ್ಲಿ ಗೌರವ' ಸಲ್ಲಿಸುವ ಸರಣಿ ಕಾರ್ಯಕ್ರಮದ ಭಾಗವಾಗಿ ಹಿರಿಯರಾದ ಆಕಾಶವಾಣಿಯ ಸಹಾಯಕ ಸಂಪಾದಕಿ ನಾಗಮಣಿ ಎಸ್. ರಾವ್ ಮನೆಗೆ ಪತ್ರಕರ್ತೆಯರ ಸಂಘದ ಸದಸ್ಯೆಯರು ಭೇಟಿ ನೀಡಿ ಆತ್ಮೀಯವಾಗಿ ಸನ್ಮಾನಿಸಿದರು.



ಪತ್ರಕರ್ತೆಯರ ಸಂಘದ ಅಧ್ಯಕ್ಷೆ ಆರ್. ಪೂರ್ಣಿಮಾ, ಕಾರ್ಯದರ್ಶಿ ಮಾಲತಿ ಭಟ್, ಖಜಾಂಚಿ ಜೆ.ಎನ್. ವಾಣಿಶ್ರೀ, ಕಾರ್ಯಕಾರಿ ಸಮಿತಿ ಸದಸ್ಯರಾದ ಎಂ. ಪಿ. ಸುಶೀಲಾ, ಸಿ.ಜಿ. ಮಂಜುಳಾ, ಶಮಂತ, ಹಿಂದಿನ ಅಧ್ಯಕ್ಷೆ ಪದ್ಮಾ ಶಿವಮೊಗ್ಗ, ಆಕಾಶವಾಣಿಯ ಹಿರಿಯ ಉದ್ಘೋಷಕಿ ಬಿ.ಕೆ. ಸುಮತಿ ಮತ್ತು ಪಿ.ಐ.ಬಿ. ನಿವೃತ್ತ ಅಧಿಕಾರಿ ಕಿರಣ್ಮಯಿ ನಾಗಮಣಿ ಅವರ ಮನೆಗೆ ತೆರಳಿ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ತಮ್ಮ ವೃತ್ತಿಜೀವನದ ಹಲವು ಮಹತ್ವದ ಸನ್ನಿವೇಶಗಳನ್ನು ನಾಗಮಣಿ ಎಸ್. ರಾವ್ ನೆನಪಿಸಿಕೊಂಡರು. ಕಿರಿಯರೊಂದಿಗೆ ಆತ್ಮೀಯವಾಗಿ ಹರಟೆ ಹೊಡೆದರು. ಮಳೆಗಾಲದ ಒಂದು ಸಂಜೆ ಹೀಗೆ ಉಲ್ಲಾಸಮಯವಾಗಿ ಕಳೆಯಿತು.

## ಸಚಿವ ಸ್ಥಾನ ಕೈತಪ್ಪಲು ನಾನು ಕಾರಣ ಅಲ್ಲ ಆರೋಪ ತಳ್ಳಿಹಾಕಿದ ಸಚಿವ ಎಂ.ಬಿ. ಪಾಟೀಲ್

## ಶಾಸಕ ನಾಡಗೌಡ, ಯಶವಂತರಾಯಗೌಡ ಪಾಟೀಲ್ ಆರೋಪದಲ್ಲಿ ಹುರುಳಿಲ್ಲ

**ವಿಜಯಪುರ, ಆ.10:** ಕರ್ನಾಟಕ ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆಯಲ್ಲಿ ಸಚಿವ ಸ್ಥಾನ ಕೈತಪ್ಪಲು ನಾನು ಕಾರಣ ಎಂಬ ಶಾಸಕರಾದ ಸಿ.ಎಸ್. ನಾಡಗೌಡ ಹಾಗೂ ಯಶವಂತರಾಯಗೌಡ ಪಾಟೀಲ್ ಅವರ ಆರೋಪವನ್ನು ಸಚಿವ ಎಂ.ಬಿ. ಪಾಟೀಲ್ ತಳ್ಳಿ ಹಾಕಿದ್ದಾರೆ.



ಸುದ್ದಿಗಾರರೊಂದಿಗೆ, ಸಚಿವ ಸ್ಥಾನ ನೀಡುವ ಅಂತಿಮ ನಿರ್ಧಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕಾಂಗ್ರೆಸ್ ಹೈಕಮಾಂಡ್‌ಗೆ ಸೇರಿದ್ದು ಎಂದು ಸ್ಪಷ್ಟಪಡಿಸಿದರು. ವಿಜಯಪುರ ಜಿಲ್ಲೆಗೆ ಮತ್ತೊಂದು ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದೇ ನಾನು. ಸಿ.ಎಸ್. ನಾಡಗೌಡ ಹಾಗೂ ಯಶವಂತರಾಯ ಗೌಡ ಪಾಟೀಲ್ ಅವರು ತಮಗೆ ಸಚಿವ ಸ್ಥಾನ ಸಿಗದಿರಲು ಎಂಬಿ ಪಾಟೀಲ್ ಕಾರಣ ಎಂದು ಆರೋಪಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಈ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ಹೇಳಿದರು.

ಈ ವಿಚಾರದಲ್ಲಿ ತಾನು ಬಲವಾಗಿ ಪ್ರತಿಪಾದನೆ ಮಾಡಿದ್ದರೂ, ಅಂತಿಮ ತೀರ್ಮಾನವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ರಾಹುಲ್ ಗಾಂಧಿ ಅವರು ಕೈ ಗೊಳ್ಳುತ್ತಾರೆ ಎಂದರು.

ಸಚಿವ ಸ್ಥಾನ ಏಕೆ ಸಿಗಲಿಲ್ಲ ಎಂಬುದನ್ನು ತಿಳಿದುಕೊಳ್ಳಬೇಕಾದರೆ ಅವರು ಮುಖ್ಯಮಂತ್ರಿ, ಎಐಸಿಸಿ ಅಧ್ಯಕ್ಷರು, ಸುರ್ಜೇವಾಲಾ ಹಾಗೂ ರಾಹುಲ್ ಗಾಂಧಿ ಅವರನ್ನು ಕೇಳಬೇಕು ಎಂದರು.

# ಬಸವ, ಅಂಬೇಡ್ಕರ್ ಆವಾಸ್ ಯೋಜನೆ, ಆಯ್ಕೆಯಾದ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ವಿತರಣೆ

**ಕಲಬುರಗಿ, ಆ. 10:** ಕಲಬುರಗಿ ದಕ್ಷಿಣ ಮತಕ್ಷೇತ್ರದಲ್ಲಿ ಬರುವ ಪಟ್ಟಣ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ ಬಸವ ವಸತಿ, ಅಂಬೇಡ್ಕರ್ ನಿವಾಸ ಅಡಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಕಲಬುರಗಿ ದಕ್ಷಿಣ ಮತಕ್ಷೇತ್ರ ಶಾಸಕರಾದ ಅಲ್ಲಂಪ್ರಭು ಪಾಟೀಲರು ಮಂಜೂರಾತಿ ಆದೇಶ ಪತ್ರ ವಿತರಣೆ ಮಾಡಿ ಶುಭ ಕೋರಿದರು.



ನಂತರ ನಡೆದ ಸಾರ್ವಜನಿಕ ಸಮಾರಂಭದಲ್ಲಿ ಮಾತನಾಡಿದ ಶಾಸಕರು, ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಪ್ರಗತಿ ಮಾಡೋದು ತಮ್ಮ ಸಂಕಲ್ಪವಾಗಿದೆ ಎಂದರಲ್ಲದೆ ಈಗಾಗಲೇ ತಾವು ಶಾಸಕರಾಗಿ ಆಯ್ಕೆಯಾದ ನಂತರ ಈ ಭಾಗದಲ್ಲಿ ಕೈಗೊಂಡ ಪ್ರಮುಖ ಮೂಲ ಸೌಕರ್ಯ ಯೋಜನೆಗಳನ್ನು ಪಟ್ಟಿ ಮಾಡಿ ಜನರ ಗಮನ ಸೆಳೆದರು.

ಪಟ್ಟಣ ಎಸ್ಸಿ ಬಡಾವಣೆಯಲ್ಲಿ 55 ಲಕ್ಷ ರು, ಶಿವಲಿಂಗೇಶ್ವರ ಮಠಕ್ಕೆ 1 ಕೋಟಿ ರು, ಜಗಜೀವನ ರಾಮ ಭವನಕ್ಕೆ 50 ಲಕ್ಷ ರು, 20 ಎಕರೆಯಲ್ಲಿ 6. 29 ಕೋಟಿ ರು ವೆಚ್ಚದಲ್ಲಿ ಕೆರೆ, ಪಟ್ಟಣ ಮುಖ್ಯ ರಸ್ತೆಯಿಂದ 2 ಕೋಟಿ ರು ಪಿಎಂಜಿಎಸ್‌ವೈ ಕಾಮಗಾರಿ, ಟೋಲ್‌ಗೇಟ್‌ನಿಂದ ಪಟ್ಟಣಕ್ಕೆ ಬರಲು 1 ಕೋಟಿ ರು ರಸ್ತೆ, ಅಂಬೇಡ್ಕರ್ ವಸತಿ ನಿಲಯಕ್ಕೆ 22 ಕೋಟಿ ರು, ನವೋದಯ ಶಾಲೆಗೆ 16 ಕೋಟಿ ರು, 110 ಕೆವಿ ಸಬ್ ಸ್ಟೇಷನ್‌ಗೆ 17 ಕೋಟಿ ರು, ಅಂಬೇಡ್ಕರ್ ಭವನಕ್ಕೆ 1 ಕೋಟಿ ರು, ಅಂಬಾಭವಾನಿ, ಮರಗಮ್ಮ ಮಂದಿರಗಳಿಗೆ ಅನುದಾನ ನೀಡಲಾಗಿದೆ ಎಂದರು.

ಕನಕ ಭವನಕ್ಕೆ 10 ಲಕ್ಷ ರು, ಸಿಎಂಐಡಿಪಿ ಅಡಿಯಲ್ಲಿ ರಸ್ತೆಗೆ 50 ಲಕ್ಷ ರು, ಕೆಆರ್‌ಡಿಪಿ ಅಡಿ 2 ಲಕ್ಷ ಹೀಗೆ ಹಲವು ಮೂಲ ಸಲತ್ತಿಗೆ ಹಣ ಮಂಜೂರಾಗಿದೆ. ಹಲವು ಕಾಮಗಾರಿ ಅದಾಗಲೇ ಮುಗಿದಿವೆ. ಕೆಲವು ಪ್ರಗತಿಯಲ್ಲಿವೆ. ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಪ್ರಗತಿಗೆ ತಾವು ಬದ್ಧರಾಗಿದ್ದೇನೆಂದು ಶಾಸಕ ಅಲ್ಲಂಪ್ರಭು ಹೇಳಿದರು.

ಇದೇ ಸಂದರ್ಭದಲ್ಲಿ ರಾಜೀವ ಗಾಂಧಿ ವಸತಿ ನಿಗಮದಿಂದ ಮಂಜೂರಾದ ಬಸವ ವಸತಿ 152, ಅಂಬೇಡ್ಕರ್ 48 ಮನೆಗಳ ಮಂಜೂರಾದ ಅರ್ಹರಿಗೆ ಆದೇಶ ಪತ್ರ ನೀಡಿದರು. 2024– 25 ರಲ್ಲಿ ಒಟ್ಟು 200 ಮನೆಗಳು ಮಂಜೂರಾಗಿವೆ ಎಂದು ಮಾಹಿತಿ ನೀಡಿದರು.

# ಗ್ರಾಹಕ ಚಿನ್ನಾಭರಣ ವಂಚನೆ ಆರೋಪ: ಚಿನ್ನತಂಬಿ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳುವಂತೆ ಶಾಸಕ ಶ್ರೀವತ್ಸ ಒತ್ತಾಯ

**ಮೈಸೂರು, ಆ.10:** ಗ್ರಾಹಕರಿಂದ ಪಡೆದ ಚಿನ್ನಾಭರಣಗಳನ್ನು ಕರಗಿಸಿ ದುರುಪಯೋಗಪಡಿಸಿಕೊಂಡು ಮೋಸ ಎಸಗಿದ ಆರೋಪ ಎದುರಿಸು ತ್ತಿರುವ 'ಡಿಜಿಎಫ್ ಗೋಲ್ಡ್ ಆಂಡ್ ಡೈಮಂಡ್' ಮಾಲೀಕ ಸೌಂದರ್‌ರಾಜ್ ಅಲಿಯಾಸ್ ಚಿನ್ನತಂಬಿ ಅವರ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು. ಪ್ರಕರಣದ ತನಿಖೆಗೆ ಎಸ್‌ಐಟಿ ರಚಿಸಬೇಕು' ಎಂದು ಶಾಸಕ ಟಿ.ಎಸ್.ಶ್ರೀವತ್ಸ ಒತ್ತಾಯಿಸಿದರು.

'ಮೋಸಕ್ಕೆ ಒಳಗಾದವರು ನೀಡಿದ ದೂರಿನ ಅನ್ವಯ ಚಿನ್ನತಂಬಿ ಮತ್ತು ಸಹಚರರನ್ನು ಪೊಲೀಸರು ಬಂಧಿಸಿದ್ದರು. ಬಳಿಕ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು. ಅವರಿಗೆ ಜಾಮೀನು ಸಿಕ್ಕಿ ಬಿಡುಗಡೆ ಆಗಿದ್ದಾರೆ. ಇದು ದೂರುದಾರರ ಆಕ್ರೋಶಕ್ಕೆ ಕಾರಣವಾಗಿದೆ' ಎಂದು ಇಲ್ಲಿ ಸೋಮವಾರ ಪತ್ರಿಕಾ ಗೋಷ್ಠಿಯಲ್ಲಿ, ಮೋಸ ಹೋದ 75 ಮಂದಿ ನನ್ನ ಬಳಿ ಅರ್ಜಿ ಸಲ್ಲಿಸಿದ್ದರು. ಅವರಿಗೆ ಕಾನೂನು ಪ್ರಕಾರ ನ್ಯಾಯ ಕೊಡಿಸಲೆಂದು ಹೋರಾಟ ನಡೆಸಿದ್ದೆ. ನನಗೆ ಸಿಕ್ಕಿರುವ ಮಾಹಿತಿ ಪ್ರಕಾರ, ಈಗಾಗಲೇ ಚಿನ್ನತಂಬಿಯ ಆಸ್ತಿಯನ್ನು ಗುರುತಿಸಿ, ಮೈಸೂರು ಉಪ ವಿಭಾಗಾಧಿಕಾರಿಯನ್ನು ಸಕ್ಷಮ ಪ್ರಾಧಿಕಾರ ಎಂದು ನೇಮಿಸಲಾಗಿದೆ ಎಂದು ಹೇಳಿದರು.

ಚಿನ್ನತಂಬಿ ನಂಬಿ ಚಿನ್ನ ಕಳೆದುಕೊಂಡು ನಷ್ಟ ಅನುಭವಿಸಿದವರು ಹತಾಶರಾಗಿದ್ದಾರೆ. ಪೊಲೀಸರು, ರಾಜಕಾರಣಿಗಳು ನಮಗೆ ಸಹಾಯ ಮಾಡುತ್ತಿಲ್ಲ ಎಂಬ ಆತಂಕ ಹಾಗೂ ಅನುಮಾನ ಅವರಿಗಿದೆ. ಈ ಕಾರಣದಿಂದಲೇ ನಗರದಲ್ಲಿ ಚಿನ್ನತಂಬಿ ಒಡೆತನದ ಹೋಟೆಲ್ ಮೇಲೆ ಈಚೆಗೆ ದಾಳಿ ನಡೆಸಿದ್ದಾರೆ. ಹೀಗೆ, ಯಾರೂ ಕಾನೂನು ಕೈಗೆ ತೆಗೆದು ಕೊಳ್ಳಬಾರದು. ಇದರಿಂದ ನಷ್ಟವನ್ನು ಭರಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಮತ್ತೆ ಪ್ರಕರಣಗಳನ್ನು ಎದುರಿಸಬೇಕಾಗುತ್ತದೆ. ಪ್ರಕರಣವೀಗ ನ್ಯಾಯಾಲಯದಲ್ಲಿದೆ. ಹೀಗಾಗಿ, ನ್ಯಾಯಾಲಯದಿಂದ ನ್ಯಾಯ ಸಿಗುವವರೆಗೂ ದೂರುದಾರರು



ಕಾಯಬೇಕಾಗುತ್ತದೆ ಎಂದು ಕೋರಿದರು.

ಈ ವಂಚನೆ ಪ್ರಕರಣದ ಬಗ್ಗೆ ಮುಂಬರುವ ವಿಧಾನಮಂಡಲ ಅಧಿವೇಶನದಲ್ಲಿ ಪ್ರಸ್ತಾಪಿಸಿ ಸರ್ಕಾರದ ಗಮನಸೆಳೆಯುತ್ತೇನೆ' ಎಂದು ತಿಳಿಸಿದರು.'400ಕ್ಕೂ ಹೆಚ್ಚು ಮಂದಿ ಪೊಲೀಸರಿಗೆ ದೂರು ನೀಡಿದ್ದಾರೆ. ಅವರಿಗೆ, ನ್ಯಾಯ ದೊರೆಯುತ್ತದೆ ಎಂಬ ನಂಬಿಕೆ ಬರುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಪ್ರಕರಣದಲ್ಲಿ ಏನೆಲ್ಲಾ ಪ್ರಕ್ರಿಯೆಗಳು ನಡೆಯುತ್ತಿವೆ ಎಂಬುದನ್ನು ಬಹಿರಂಗಪಡಿಸಬೇಕು' ಎಂದು ಒತ್ತಾಯಿಸಿದರು.

ದೂರುದಾರರು ಆತಂಕಕ್ಕೆ ಒಳಗಾಗದೇ ಕಾಯಬೇಕು' ಎಂದು ಕೋರಿದರು.'600 ಕೆ.ಜಿ.ಯಷ್ಟು ಚಿನ್ನದ ವ್ಯವಹಾರ ನಡೆದಿದೆ ಎಂಬ ಮಾಹಿತಿ ಇದೆ. ಈ ಬಗ್ಗೆ ದೂರು ಸಲ್ಲಿಸಲಾಗಿದೆ. ಆ ಚಿನ್ನ ಎಲ್ಲಿ ಹೋಯಿತು, ಮಧ್ಯವರ್ತಿಗಳು ಯಾರು, ಎಲ್ಲೆಲ್ಲಿ ವಹಿವಾಟು ನಡೆದಿದೆ ಎಂಬುದನ್ನು ಪತ್ತೆ ಹಚ್ಚುವಂತೆ ದೂರಿನಲ್ಲಿ ಕೇಳಲಾಗಿದೆ.

ಕುವೆಂಪುನಗರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಇಷ್ಟೆಲ್ಲ ಮೋಸ ನಡೆದಿದ್ದರೂ, ಈವರೆಗೂ ಒಬ್ಬ ಪೊಲೀಸರ ವಿರುದ್ಧವೂ ಯಾವುದೇ ಕ್ರಮ ಕೈಗೊಂಡಿಲ್ಲ. ಇದರ ಹಿಂದೆ ದೊಡ್ಡ ಷಡ್ಯಂತ್ರವೇ ನಡೆದಿದೆ. ಹೀಗಾಗಿ, ತನಿಖೆಗೆ ಎಸ್‌ಐಟಿ ರಚನೆ ಮಾಡಬೇಕು' ಎಂದು ಒತ್ತಾಯಿಸಿದರು. ಈ ಬಗ್ಗೆ, ಅಧಿವೇಶನದಲ್ಲೇ ಸರ್ಕಾರದ ಗಮನಸೆಳೆಯಲಾಗುವುದು' ಎಂದು ತಿಳಿಸಿದರು.

# ಸ್ಥಳೀಯರಿಗೆ ರಸ್ತೆ ಕಾಮಗಾರಿ ಸಂಕಷ್ಟ

**ಕಲಬುರಗಿ, ಆ. 10:** ರಸ್ತೆ ನಿರ್ಮಿಸಲು ಅಗೆದ ರಸ್ತೆಯಲ್ಲಿ ನಿಂತಿರುವ ಚರಂಡಿ ನೀರು, ಮೂಗು ಮುಚ್ಚಿಕೊಂಡು ದಿನ ಕಳೆಯುತ್ತಿರುವ ಜನರು, ಸಾಂಕ್ರಾಮಿಕ ರೋಗಗಳ ಭೀತಿ, ಜೀವಭಯದಲ್ಲಿ ಬೈಕ್ ಓಡಿಸುವ ಸವಾರರು... ಹೀಗೆ ಹಲವು ಸಮಸ್ಯೆಗಳಿಂದ ನಗರದ ಹಳೆ ಜೇವರ್ಗಿ ರಸ್ತೆಯ ಪಿ ಆಂಡ್ ಟಿ ಕಾಲೊನಿ ಜನ ನರಳುವಂತೆ ಮಾಡಿದೆ.



ನಗರದ ವಾರ್ಡ್ ನಂ.54ರಲ್ಲಿನ ಗಾಣದೇವತೆ ದೇವಸ್ಥಾನದಿಂದ ಪಿ ಅಂಡ್ ಟಿ ಕಾಲೋನಿವರೆಗೆ ಸುಮಾರು ಮೂರು ಕೋಟಿ ವೆಚ್ಚದಲ್ಲಿ ಮಹಾನಗರ ಪಾಲಿಕೆಯು ರಸ್ತೆ ಅಭಿವೃದ್ಧಿ ಕಾಮಗಾರಿಗಾಗಿ ಅಗೆದು ಹಾಕಲಾದ ರಸ್ತೆ ಈಗ ಸ್ಥಳೀಯ ನಿವಾಸಿಗಳ ಪಾಲಿಗೆ ನಿತ್ಯ ನರಕವನ್ನು ಸೃಷ್ಟಿಸಿದೆ.ನಿಂತ ನೀರಿನಿಂದ ಸೊಳ್ಳೆಗಳ ಕಾಟ ಹೆಚ್ಚಾಗಿದೆ. ಕುಡಿಯುವ ನೀರಿನಲ್ಲಿಯೂ ಕಲುಷಿತ ನೀರು ಬರುತ್ತಿದೆ. ಇಡೀ ಕಾಲೋನಿಯಲ್ಲಿ ದುರ್ನಾತ ಬೀರುತ್ತಿದೆ. ಮನೆಗಳ ಬಾಗಿಲು–ಕಿಟಕಿಗಳನ್ನು ತೆರೆಯಲೂ ಸಾಧ್ಯವಾಗದ ಸ್ಥಿತಿಯಲ್ಲಿ ನಿವಾಸಿಗಳು ದಿನ ದೂಡುತ್ತಿದ್ದಾರೆ. ಬೈಕ್ ಸವಾರರು ಮೂಗು ಮುಚ್ಚಿಕೊಂಡು ಸಂಚರಿಸುವ ಸ್ಥಿತಿ ನಿರ್ಮಾಣವಾಗಿದೆ.

ರಸ್ತೆಯಲ್ಲಿ ನಿಂತಿರುವ ಕಲುಷಿತ ನೀರಿನಿಂದಾಗಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿದ್ದು, ಡೆಂಗ್ಯು, ಮಲೇರಿಯಾ ಹಾಗೂ ಇತರ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ. ವೃದ್ಧರು ಮತ್ತು ಮಕ್ಕಳ ಆರೋಗ್ಯದ ಮೇಲು ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದು ಬಡಾವಣೆಯ ಕೆಲ ನಿವಾಸಿಗಳು ಕಳವಳ ವ್ಯಕ್ತಪಡಿಸಿದರು.

ರಸ್ತೆಯುದ್ದಕ್ಕೂ ತಗ್ಗು ದಿನ್ನೆಗಳು ನಿರ್ಮಾಣವಾಗಿದ್ದು, ಕೆಸರು ತುಂಬಿಕೊಂಡಿದೆ. ಒಂದೆಡೆ ರಸ್ತೆ ಅಗೆದಿರುವ ಕಾರಣ, ರಸ್ತೆ ಕಿರಿದಾಗಿದ್ದು ದ್ವಿಚಕ್ರ ವಾಹನ ಸವಾರರು ಬಿದ್ದು ಗಾಯಗೊಂಡ ಉದಾಹರಣೆಗಳಿವೆ. ಶಾಲಾ ಮಕ್ಕಳು, ಹಿರಿಯ ನಾಗರಿಕರು ಹಾಗೂ ಪಾದಚಾರಿಗಳು ನಿತ್ಯ ಪರದಾಡುವಂತಾಗಿದೆ' ಎನ್ನುತ್ತಾರೆ ಸ್ಥಳೀಯರು.

**ನಿರ್ಲಕ್ಷ್ಯ: ಸಾರ್ವಜನಿಕರ ಅಸಮಾಧಾನ:** 'ರಸ್ತೆ ಅಭಿವೃದ್ಧಿ ಮಾಡುತ್ತಿರುವುದು ಸಂತೋಷದ ವಿಷಯ. ಆದರೆ, ರಸ್ತೆ ಅಗೆದು ಹೀಗೆ ಬಿಟ್ಟಿರುವುದು ಎಷ್ಟು ಸರಿ. ದಿನಪೂರ್ತಿ ಮುಗು ಮುಚ್ಚಿಕೊಂಡೇ ಬದುಕಬೇಕಾದ ಸ್ಥಿತಿ ಬಂದಿದೆ. ರಸ್ತೆ ಇಲ್ಲದಿದ್ದಾಗಲೇ ಚನ್ನಾಗಿದ್ದೆವು, ಯಾಕಾದ್ರು ರಸ್ತೆ ಕಾಮಗಾರಿಗಾಗಿ ಅಗೆದರೋ ಎನ್ನುವಂತಾಗಿದೆ' ಎಂದು ನಿವಾಸಿ ಪ್ರತಿಭಾ ದೇಶಮುಖ ಅವರು ತಮ್ಮ ಅಳಲು ತೋಡಿಕೊಂಡರು.

ಅಧಿಕಾರಿಗಳು, ಜನಪ್ರತಿನಿಧಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ನಿಂತಿರುವ ಕಲುಷಿತ ನೀರನ್ನು ತೆರವುಗೊಳಿಸಬೇಕು, ಹಾನಿಗೊಳಗಾದ ಯುಜಿಡಿ ಲೈನ್ ದುರಸ್ತಿಪಡಿಸಿ ರಸ್ತೆ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು. ನಿರ್ಲಕ್ಷ್ಯ ವಹಿಸಿದರೆ ಹೋರಾಟದ ಹಾದಿ ಹಿಡಿಯಬೇಕಾಗುತ್ತದೆ ಎಂದು ಎಚ್ಚರಿಗೆ ನೀಡಿದರು.

## ಸಚಿವ ಸ್ಥಾನಕ್ಕಾಗಿ ತಮ್ಮ ಪರ ಸಿದ್ದರಾಮಯ್ಯ ಶಿಫಾರಸು: ಶಾಸಕ ಬಸವರಾಜ್ ಶಿವಣ್ಣನವರ್

**ಹಾವೇರಿ, ಆ.10:** ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸುವಂತೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಪರ ಶಿಫಾರಸು ಮಾಡಿರುವುದು ಸತ್ಯ ಎಂದು ಬ್ಯಾಡಗಿ ಶಾಸಕ ಬಸವರಾಜ್ ಶಿವಣ್ಣನವರ್ ಹೇಳಿದ್ದಾರೆ.



ಹಾವೇರಿಯಲ್ಲಿ ಮಾತನಾಡಿದ ಅವರು, ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಯಲು ನಿರ್ಧರಿಸಿದ್ದೆ. ಆದರೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೈಕಮಾಂಡ್ ಮಟ್ಟದಲ್ಲಿ ತಮ್ಮ ಕುರಿತು ಚರ್ಚೆ ನಡೆಯುತ್ತಿದ್ದು, ಸ್ವಲ್ಪ ಸಮಯ ಕಾಯುವಂತೆ ಸೂಚಿಸಿದ್ದಾರೆ. ಉತ್ತರ ಕರ್ನಾಟಕಕ್ಕೆ ಸಚಿವ ಸ್ಥಾನ ನೀಡಬೇಕು ಎಂಬ ವಿಚಾರದಲ್ಲಿ ಸಿದ್ದರಾಮಯ್ಯ ಅವರು ಒತ್ತಡ ಹೇರಿದ್ದು, ಹೈಕಮಾಂಡ್ ಗಮನಕ್ಕೂ ತಂದಿದ್ದಾರೆ. ಹೀಗಾಗಿ ಸಚಿವ ಸ್ಥಾನ ದೊರೆಯುವ ನಿರೀಕ್ಷೆ ಹೊಂದಿರುವುದಾಗಿ ಶಿವಣ್ಣನವರ್ ಹೇಳಿದರು. ಬೇರೆ ಯಾವುದೇ ನಿಗಮದ ಅಧ್ಯಕ್ಷ ಸ್ಥಾನ ಸ್ವೀಕರಿಸುವುದಿಲ್ಲ. ಸಚಿವ ಸ್ಥಾನ ಸಿಗದಿದ್ದರೆ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿ, ಕ್ಷೇತ್ರದ ಅಭಿವೃದ್ಧಿಗೆ ಶಾಸಕನಾಗಿ ಮುಂದುವರಿಯುವುದಾಗಿ ಸ್ಪಷ್ಟಪಡಿಸಿದ್ದಾರೆ.ನಾನು ಪಕ್ಷಕ್ಕಾಗಿ ಸಾಕಷ್ಟು ಕೆಲಸ ಮಾಡಿದ್ದು ವರಿಷ್ಠರ ಗಮನಕ್ಕಿದೆ. ಹೀಗಾಗಿ ನಿರೀಕ್ಷೆಯಿದೆ. ಆದ್ರೆ ಏನಾಗಬಹುದು ಎಂಬುದು ತಿಳಿದಿಲ್ಲ. ಹೈಕಮಾಂಡ್ ನಿರ್ಧಾರಕ್ಕೆ ತಾವು ಬದ್ಧರಾಗಿದ್ದು, ಪಕ್ಷದ ಶಿಸ್ತಿನ ಕಾರ್ಯಕರ್ತನಾಗಿ ಯಾವುದೇ ಒತ್ತಡ ಹೇರುವುದಿಲ್ಲ ಎಂದು ಹೇಳಿದ್ದಾರೆ.

# ದೇವರಾಜ ಅರಸು ಜಯಂತಿ ಅಚ್ಚುಕಟ್ಟಾಗಿ ಆಚರಿಸಲು ಸೂಚನೆ

**ವಿಜಯಪುರ, ಆ.10:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಗಸ್ಟ್ 20ರಂದು ಡಿ. ದೇವರಾಜ ಅರಸು ಅವರ ಜಯಂತಿಯನ್ನು ಅಚ್ಚುಕಟ್ಟಾಗಿ ಹಾಗೂ ಶಿಷ್ಟಾಚಾರದಂತೆ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಆಗಸ್ಟ್ 20ರಂದು ಬೆಳಿಗ್ಗೆ 9.30ಕ್ಕೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಿಂದ ಡಿ. ದೇವರಾಜ ಅರಸು ಅವರ ಭಾವಚಿತ್ರದ ಮೆರವಣಿಗೆಯು ನಗರದ ಪ್ರಮುಖ ವೃತ್ತಗಳ ಮೂಲಕ ಸಾಗಿ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಡಿ. ದೇವರಾಜ ಅರಸು ಅವರ ಜೀವನ, ಸಾಧನೆ ಹಾಗೂ ಸಾಮಾಜಿಕ ನ್ಯಾಯಕ್ಕೆ ನೀಡಿದ ಕೊಡುಗೆ ಕುರಿತು ಉಪನ್ಯಾಸ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾ ಗುವುದು ಎಂದು ಅವರು ತಿಳಿಸಿದರು.



ಜಯಂತಿ ಕಾರ್ಯಕ್ರಮದ ಯಶಸ್ವಿ ಆಯೋಜನೆಗೆ ಅಗತ್ಯವಿರುವ ಎಲ್ಲ ಪೂರ್ವಸಿದ್ಧತೆಗಳನ್ನು ಸಂಬಂಧಿಸಿದ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕೈಗೊಳ್ಳಬೇಕು. ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮಕ್ಕೆ ಅಗತ್ಯವಿರುವ ಆಸನ ವ್ಯವಸ್ಥೆ, ಕುಡಿಯುವ ನೀರು, ಸ್ವಚ್ಛತೆ, ವಿದ್ಯುತ್ ವ್ಯವಸ್ಥೆ, ಪೊಲೀಸ್ ಬಂದೋಬಸ್ತ್ ಸೇರಿದಂತೆ ಎಲ್ಲ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ, ಯಾವುದೇ ಲೋಪವಾಗದಂತೆ ಮುಂಚಿತವಾಗಿ ಸಿದ್ಧತೆ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಡಿ. ದೇವರಾಜ ಅರಸು ಅವರು ಹಿಂದುಳಿದ ವರ್ಗಗಳ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯದ ಕ್ಷೇತ್ರದಲ್ಲಿ ಮಹತ್ವದ ಕೊಡುಗೆ ನೀಡಿದ ಮಹತ್ವದ ನಾಯಕರು. ಅವರ ಸಾಮಾಜಿಕ ಸುಧಾರಣೆಗಳು ಹಾಗೂ ಜನಪರ ಕಾರ್ಯಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ಶಿಸ್ತುಬದ್ಧವಾಗಿ ಆಚರಿಸಬೇಕು ಎಂದು ಅವರು ಹೇಳಿದರು.

# ಬಳ್ಳಾರಿ ಜಿಲ್ಲೆಯಾದ್ಯಂತ ಆಧಾರ್ ಸೇವೆ ಮತ್ತಷ್ಟು ಬಲಪಡಿಸಿದ ಅಂಚೆ ಇಲಾಖೆ: 12 ಕೌಂಟರ್‌ಗಳು ಲಭ್ಯ

**ಬಳ್ಳಾರಿ,ಆ.10.**ಜಿಲ್ಲೆಯ ನಾಗರಿಕರಿಗೆ ಸುಲಭ, ಸುರಕ್ಷಿತ ಹಾಗೂ ಪಾರದರ್ಶಕ ಆಧಾರ್ ನೋಂದಣಿ ಮತ್ತು ನವೀಕರಣ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಭಾರತ ಸರ್ಕಾರದ ಅಂಚೆ ಇಲಾಖೆ (ಬಳ್ಳಾರಿ ವಿಭಾಗ) ಜಿಲ್ಲೆಯ ವಿವಿಧ ಅಂಚೆ ಕಚೇರಿಗಳಲ್ಲಿ ಆಧಾರ್ ಸೇವೆಗಳನ್ನು ಮತ್ತಷ್ಟು ಬಲಪಡಿಸಿದೆ.

ಸಾರ್ವಜನಿಕರಿಗೆ ತಮ್ಮ ಸಮೀಪದ ಅಂಚೆ ಕಚೇರಿಯಲ್ಲೇ ಗುಣಮಟ್ಟದ ಆಧಾರ್ ಸೇವೆಗಳು ಸಿಗುವಂತೆ ವ್ಯವಸ್ಥೆ ಮಾಡಲಾಗಿದ್ದು, ಜಿಲ್ಲೆಯಾದ್ಯಂತ ಒಟ್ಟು 12 ಆಧಾರ್ ಕೌಂಟರ್‌ಗಳು ತರಬೇತಿ ಪಡೆದ ಸಿಬ್ಬಂದಿ ಹಾಗೂ ಆಧುನಿಕ ಬಯೋಮೆಟ್ರಿಕ್ ಸಾಧನಗಳೊಂದಿಗೆ ಕಾರ್ಯನಿರ್ವಹಿಸುತ್ತಿವೆ.

**ಬಳ್ಳಾರಿ ಜಿಲ್ಲೆಯ ಆಧಾರ್ ಕೇಂದ್ರಗಳ ವಿವರ:** ಬಳ್ಳಾರಿ ಮುಖ್ಯ ಅಂಚೆ ಕಚೇರಿ: 3 ಕೌಂಟರ್‌ಗಳು, ಕೌಲ್ ಬಜಾರ್ ಅಂಚೆ ಕಚೇರಿ: 1 ಕೌಂಟರ್, ಕಂಟೋನ್‌ಮೆಂಟ್ ಅಂಚೆ ಕಚೇರಿ: 1 ಕೌಂಟರ್, ಗಾಂಧಿನಗರ ಅಂಚೆ ಕಚೇರಿ: 1 ಕೌಂಟರ್, ಕುರುಗೋಡು ಅಂಚೆ ಕಚೇರಿ: 1 ಕೌಂಟರ್,




ಸಿರಿಗೇರಿ ಅಂಚೆ ಕಚೇರಿ: 1 ಕೌಂಟರ್, ಸಿರುಗುಪ್ಪ ಅಂಚೆ ಕಚೇರಿ: 1 ಕೌಂಟರ್, ಸಂಡೂರು ಅಂಚೆ ಕಚೇರಿ: 1 ಕೌಂಟರ್, ಡಿ.ಟಿ. ಶಿಪ್ ಅಂಚೆ ಕಚೇರಿ: 1 ಕೌಂಟರ್, ಕಂಪ್ಲಿ ಅಂಚೆ ಕಚೇರಿ: 1 ಕೌಂಟರ್,

***ಲಭ್ಯವಿರುವ ಆಧಾರ್ ಸೇವೆಗಳು:*** ಹೊಸ ನೋಂದಣಿ: ಅರ್ಹರಿಗೆ ಸಂಪೂರ್ಣ ಉಚಿತವಾಗಿ ಹೊಸ ನೋಂದಣಿ, ಬಯೋಮೆಟ್ರಿಕ್ ನವೀಕರಣ: ಫೋಟೋ, ಬೆರಳಚ್ಚು ಹಾಗೂ ಐರಿಸ್ ನವೀಕರಣ, ಡೆಮೋಗ್ರಫಿಕ್ ನವೀಕರಣ: ಮೊಬೈಲ್ ಸಂಖ್ಯೆ, ವಿಳಾಸ, ಹೆಸರು, ಜನ್ಮ ದಿನಾಂಕ ಹಾಗೂ ಲಿಂಗ ತಿದ್ದುಪಡಿ, ದಾಖಲೆ ನವೀಕರಣ ಹಾಗೂ ಯುಐಡಿಎಐ ಅನುಮೋದಿತ ಇತರೆ ಸೇವೆಗಳು.

**ಸಾರ್ವಜನಿಕರಲ್ಲಿ ಮನವಿ:** ಹೊಸ ನೋಂದಣಿ ಸಂಪೂರ್ಣ ಉಚಿತವಾಗಿದ್ದು, ನವೀಕರಣ ಸೇವೆಗಳಿಗೆ ಯುಐಡಿಎಐ ನಿಗದಿಪಡಿಸಿರುವ ಅಧಿಕೃತ ಶುಲ್ಕವನ್ನು ಮಾತ್ರ ವಿಧಿಸಲಾಗುತ್ತದೆ. ನಾಗರಿಕರು ದೂರದ ಪ್ರಯಾಣ ಹಾಗೂ ಅನಗತ್ಯ ಅಲೆದಾಟವನ್ನು ತಪ್ಪಿಸಲು ತಮ್ಮ ಸಮೀಪದ ಅಂಚೆ ಕಚೇರಿಗೆ ಅಗತ್ಯ ಮೂಲ ದಾಖಲೆಗಳೊಂದಿಗೆ ಕಚೇರಿ ವೇಳೆಯಲ್ಲಿ ಭೇಟಿ ನೀಡಿ ಸೇವೆ ಪಡೆಯಬಹುದು ಎಂದು ಅಂಚೆ ಕಚೇರಿಗಳ ಅಧೀಕ್ಷಕರು (ಬಳ್ಳಾರಿ ವಿಭಾಗ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಬೆಂಗಳೂರಿನಲ್ಲಿ ಸೋಮವಾರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

# ಶೈಕ್ಷಣಿಕ ಸಾಹಿತ್ಯ ಸಮ್ಮೇಳನ ಎಲ್ಲೆಡೆ ನಡೆಯಲಿ: ಸಂದೀಪ್ ಬೂದಿಹಾಳ



**ಬೀದರ್, ಆ. 10:** ಶಿಕ್ಷಣ ಕ್ಷೇತ್ರದ ಕುರಿತು ಚಿಂತನ– ಮಂಥನಕ್ಕೆ ವೇದಿಕೆ ಕಲ್ಪಿಸುವ ಶೈಕ್ಷಣಿಕ ಕನ್ನಡ ಸಾಹಿತ್ಯ ಸಮ್ಮೇಳನಗಳು ರಾಜ್ಯದ ಎಲ್ಲೆಡೆ ನಡೆಯುವಂತಾಗಬೇಕು ಎಂದು ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಸಂಘದ ರಾಜ್ಯ ಅಧ್ಯಕ್ಷ ಸಂದೀಪ್ ಬೂದಿಹಾಳ ಅಭಿಪ್ರಾಯ ಪಟ್ಟರು.

ಕನ್ನಡ ಸಾಹಿತ್ಯ ಪರಿಷತ್ ಬೀದರ್ ಉತ್ತರ ಘಟಕದ ವತಿಯಿಂದ ನಗರದ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಿದ್ದ ಬೀದರ್ ತಾಲ್ಲೂಕು ಪ್ರಥಮ ಶೈಕ್ಷಣಿಕ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ, ಕನ್ನಡ ಶಿಕ್ಷಕ ವಿಜಯ ಕುಮಾರ ಪಾಟೀಲ ಯರನಳ್ಳಿ ಸರ್ವಾಧ್ಯಕ್ಷತೆಯಲ್ಲಿ ಪ್ರಥಮ ಶೈಕ್ಷಣಿಕ ಸಾಹಿತ್ಯ ಸಮ್ಮೇಳನ ಹಮ್ಮಿಕೊಂಡಿರುವುದು ಮಾದರಿಯಾಗಿದೆ. ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಕಾರ್ಯ ಹಿಂದಿ ಗಿಂತಲೂ ಈಗ ಹೆಚ್ಚು ಆಗಬೇಕಾಗಿದೆ ಎಂದರು.

ಕನ್ನಡ ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಒಳಗೊಂಡಿದೆ. ಮಾತೃಭಾಷೆ ಮಕ್ಕಳಲ್ಲಿ ಅಗಾಧ ಜ್ಞಾನ ಬೆಳೆಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರ ಶಿಕ್ಷಕರಿಗೆ ಹಳೆಯ ಪಿಂಚಣಿ ಯೋಜನೆಯನ್ನೇ ಮರು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಮಾತನಾಡಿ, ನಮ್ಮ ಸಾಧನೆಗಳೇ ಮಾತಾಡಬೇಕು. ವಿಜಯಕುಮಾರ ಪಾಟೀಲ ಕನ್ನಡ ಹೋರಾಟಗಾರರು. ಅವರ ಬದುಕು ಎಲ್ಲರಿಗೂ ಪ್ರೇರಣೆ ಎಂದರು.

ಬೆಂಗಳೂರಿನಲ್ಲಿ ಹೋರಾಟ ನಡೆಸಿ, ಸಾವಿರಾರು ಕನ್ನಡ ಶಿಕ್ಷಕರಿಗೆ ನ್ಯಾಯ ದೊರಕಿಸಿಕೊಟ್ಟ ಶ್ರೇಯ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

ಬಿಡಿಎ ಮಾಜಿ ಅಧ್ಯಕ್ಷ ಬಾಬುವಾಲಿ ಮಾತನಾಡಿ, ಕನ್ನಡ ಶಾಲೆಗಳ ಸ್ಥಿತಿ ಶೋಚನೀಯವಾಗಿದೆ. ಹೀಗಾಗಿ ಸರ್ಕಾರ ಕನ್ನಡ ಶಾಲೆಗಳ ಉಳಿವಿಗೆ ವಿಶೇಷ ಕಾಳಜಿ ತೋರಬೇಕು. ಕನ್ನಡ ಶಾಲೆಗಳಿಗೆ ಅಗತ್ಯ ಸೌಕರ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದರು.

# ರಾಷ್ಟ್ರಧ್ವಜಕ್ಕೆ ಅವಮಾನ ತಡೆಗೆ ಹಿಂದೂ ಜನಜಾಗೃತಿ ಸಮಿತಿ ಆಗ್ರಹ

**ಬೀದರ್, ಆ. 10:** ಸ್ವಾತಂತ್ರ್ಯ ದಿನಾಚರಣೆ ಹಾಗೂ ಗಣ ರಾಜ್ಯೋತ್ಸವದ ಸಂದರ್ಭದಲ್ಲಿ ರಾಷ್ಟ್ರ ಧ್ವಜಕ್ಕೆ ಅವಮಾನವಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಹಿಂದೂ ಜನಜಾಗೃತಿ ಸಮಿತಿ ಆಗ್ರಹಿಸಿ, ಈ ಸಂಬಂಧ ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ರಾಷ್ಟ್ರಧ್ವಜಗಳ ಮಾರಾಟ ಮತ್ತು ಬಳಕೆಯನ್ನು ಕಟ್ಟುನಿಟ್ಟಾಗಿ ತಡೆಯಬೇಕು ಎಂದು ಆಗ್ರಹಿಸಿದರು.

ರಾಷ್ಟ್ರಧ್ವಜಕ್ಕೆ ಅಪಮಾನವಾಗದಂತೆ ಜನರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾಮಟ್ಟದಲ್ಲಿ ರಾಷ್ಟ್ರಧ್ವಜ ಗೌರವ ಕೃತಿ ಸಮಿತಿ ರಚಿಸಿ, ವಿವಿಧ ಸಾಮಾಜಿಕ ಸಂಘಟನೆಗಳನ್ನು ಒಳಗೊಂಡಂತೆ ಜಾಗೃತಿ ಕಾರ್ಯಕ್ರಮ



ಗಳನ್ನು ಹಮ್ಮಿಕೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಿದರು.

ಪ್ಲಾಸ್ಟಿಕ್ ರಾಷ್ಟ್ರ ಧ್ವಜಗಳನ್ನು ಬಳಸಿದ ಬಳಿಕ ಅವುಗಳನ್ನು ರಸ್ತೆ, ಚರಂಡಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಎಲ್ಲಂದರಲ್ಲಿ ಒಗೆಯುವುದರಿಂದ ಗಾಳಿಯಲ್ಲಿ ತೇಲಾಡಿಕೊಂಡು ಬಿದ್ದು ರಾಷ್ಟ್ರಧ್ವಜಕ್ಕೆ ಅಗೌರವ ಉಂಟಾಗುತ್ತಿರುವುದು ವಿಷಾದನೀಯವಾಗಿದೆ.

ಮುಂಬೈ ಹೈಕೋರ್ಟ್ ನೀಡಿರುವ ನಿರ್ದೇಶನಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರ ಗಳು ಹೊರಡಿಸಿರುವ ಸುತ್ತೋಲೆ ಅನುಸಾರ ಪ್ಲಾಸ್ಟಿಕ್

ಜಿಲ್ಲೆಯಲ್ಲಿ ಪ್ಲಾಸ್ಟಿಕ್ ರಾಷ್ಟ್ರ ಧ್ವಜಗಳ ತಯಾರಿಕೆ ಹಾಗೂ ಮಾರಾಟ ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಶಾಲಾ–ಕಾಲೇಜುಗಳಲ್ಲಿ ರಾಷ್ಟ್ರಧ್ವಜವನ್ನು ಗೌರವಿಸಿ ಎಂಬ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವಂತೆ ಶಿಕ್ಷಣ ಇಲಾಖೆಗೆ ಸೂಚನೆ ನೀಡಬೇಕು ಎಂದು ಆಗ್ರಹಿಸಿದರು.

# ಪೂಜ್ಯ ಶ್ರೀ ಗವಿಸಿದ್ದೇಶ್ವರ ಶ್ರೀಗಳ ನಡೆ ಅಭಿನಂದನಾರ್ಹ: ಭಗವಂತ ಖೂಬಾ

**ಬೀದರ್, ಆ.10**–ಗವಿಮಠದ ಪರಮಪೂಜ್ಯರಾದ ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಜೀ ಯವರು, ಬಳ್ಳಾರಿಯಲ್ಲಿ ನಡೆದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಷಣ ಮಾಡುವ ಸಂದರ್ಭದಲ್ಲಿ, ರಾಜಕಾರಣಿಗಳ ಡಂಬೂರಾಟ, ಆಡಂಬರದ ಘಟನೆಗಳಿಗೆ ಬೇಜಾರಾಗಿ ತನ್ನ ಭಾಷಣ ಅರ್ಧಕ್ಕೆ ನಿಲ್ಲಿಸಿರುವ ಸಮಯೋಚಿತ ನಿರ್ಧಾರಕ್ಕೆ ಎಲ್ಲರು ಗೌರವಿಸಬೇಕು ಹಾಗೂ ಸಂತರು ಮಾತನಾಡುವಾಗ ಇಂತಹ ಹುಚ್ಚಾಟಗಳಿಗೆ ಕಾರ್ಯಕ್ರಮದ ಆಯೋಜಕರು ನಿಯಂತ್ರಿಸುವ ನಿಟ್ಟಿನಲ್ಲೂ ಶ್ರೀಗಳ ಈ ನಡೆ ಎಲ್ಲರಿಗೂ ಒಂದು ಪಾಠವಾಗಲಿದೆ ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಅಭಿಪ್ರಾಯಪಟ್ಟಿದ್ದಾರೆ.

ಶ್ರೀ ಗವಿಸಿದ್ದೇಶ್ವರ ಸ್ವಾಮಿಜೀಯವರು ಒಬ್ಬ ದಾರ್ಶನೀಕ ವ್ಯಕ್ತಿ, ಅವರು ಸತ್ಯ, ನೀತಿ, ಧರ್ಮ, ಜೀವನದ ಉದ್ದೇಶ ಮುಂತಾದ ವಿಷಯಗಳ ಬಗ್ಗೆ ತಾತ್ವಿಕವಾಗಿ ಯೋಚಿಸುವವರು, ತಮ್ಮ ಜ್ಞಾನ ಮತ್ತು ಚಿಂತನೆಯ ಮೂಲಕ ಇತರರಿಗೆ ಮಾರ್ಗದರ್ಶನ ನೀಡುವವರು ಹಾಗೂ ಸಮಾಜ ಮತ್ತು ಮಾನವಿಯತೆಯ ಬಗ್ಗೆ ಆಳವಾಗಿ ಚಿಂತಿಸುವ ವ್ಯಕ್ತಿಗಳಾಗಿದ್ದಾರೆ, ಆದ್ದರಿಂದ ಶ್ರೀಗಳು ಇಂತಹ ಆಡಂಬರದ ವಿಚಾರಗಳಿಗೆ, ಕ್ರೀಯೆಗೆ ಎಂದಿಗೂ ಒಪ್ಪಿಕೊಳ್ಳುವುದಿಲ್ಲಾ, ಆದ್ದರಿಂದ ಈ ಘಟನೆ ನಡೆದಿದೆ ಎಂದಿದ್ದಾರೆ.

ರಾಜಕಾರಣಿಗಳಿಗೆ ಪ್ರಾಧಾನ್ಯತೆ ನೀಡುವ ಭರದಲ್ಲಿ ಪೂಜ್ಯರನ್ನು ಮತ್ತು ವೇದಿಕೆ ಮೇಲೆ ಇರುವ ಇತರರನ್ನು ಮರೆತು ಬಿಡುವ, ಸರಿಯಾಗಿ ನಡೆಸಿಕೊಳ್ಳದ ಘಟನೆಗಳು ಇಂದು ಹೆಚ್ಚಾಗಿವೆ, ಸಂತರಿಗಿಂತಲೂ ರಾಜಕಾರಣಿಗಳೇ ಪ್ರಧಾನರು ಎಂಬ ಮನೋಭಾವನೆಗೆ ಈ ಘಟನೆ ಸರಿಯಾದ ಶಾಸ್ತಿ ಮಾಡಿದೆ ಎನ್ನಬಹುದು. ಸಂತರಿರುವ ಸಾರ್ವಜನಿಕ ವೇದಿಕೆಯಲ್ಲಿ, ರಾಜಕಾರಣಿಗಳಿಗೆ ಆದ್ಯತೆ ನೀಡುವ ಕಾರ್ಯಕ್ರಮಗಳಿಂದ ಸಮಾಜಕ್ಕೆ ಯಾವ ಪ್ರಯೋಜನವೂ ಇರುವುದಿಲ್ಲ. ಒಬ್ಬ ಭ್ರಷ್ಟ ರಾಜಕಾರಣಿ, ಸಂತರ ಪಕ್ಕದಲ್ಲಿ ಕೂತು ಪೂಜ್ಯರಿಗಿಂತ ಶುದ್ಧ ವ್ಯಕ್ತಿತ್ವ, ವ್ಯವಹಾರ ಹೊಂದಿದ್ದೇನೆ ಎಂದು ತೋರಿಸಿಕೊಳ್ಳುವ ನಿಟ್ಟಿನಲ್ಲೂ ಪ್ರಯತ್ನಿಸುತ್ತಾರೆ, ಅದಕ್ಕಾಗಿ ಇಂತಹ ಘಟನೆಗಳು ನಡೆದುಹೊಗುತ್ತವೆ ಎಂದಿದ್ದಾರೆ.

ಸಂತರು ಭಾಷಣ ಮಾಡುವಾಗ ಧಿಡೀರನೆ ರಾಜಕಾರಣಿಗಳಿಗೆ ವೇದಿಕೆಗೆ ಕರೆಯುವುದು, ಅವರ ಹೆಸರು ಪದೆ ಪದೆ ಹೇಳುವುದು, ಹಿಂಬಾಲಕರಿಂದ ಜೈಘೋಷ ಹಾಕಿಸುವುದು ತಪ್ಪು ಆದರೂ ಈ ಹವ್ಯಾಸ ಅನೇಕ



ರಾಜಕಾರಣಿಗಳಿಗೆ ಬಂದಿದೆ, ವೇದಿಕೆಯ ಅರಿವಿಲ್ಲದೆ ತನ್ನ ಪ್ರಚಾರದ ಭರಾಟೆಗೆ ಇತ್ತಿಚ್ಚಿನ ರಾಜಕಾರಣಿಗಳು ಪ್ರಾಮುಖ್ಯತೆ ನೀಡಿ, ಕಾರ್ಯಕ್ರಮದ ಉದ್ದೇಶವೇ ಹಾಳಾಗುವಂತೆ ಮಾಡುತ್ತಿದ್ದಾರೆ, ಅಂತವರಿಗೆಲ್ಲಾ ಶ್ರೀಗಳ ಈ ನಡೆ ಎಚ್ಚರಿಕೆಯ ಸಂದೇಶವಾಗಬೇಕಾಗಿದೆ.

ಎಷ್ಟೋ ಕಡೆ ರಾಜಕಾರಣಿಗಳ ಅನುಕೂಲಕ್ಕೆ ಮುಖ್ಯ ಸ್ವಾಮಿಜೀಗಳ ಭಾಷಣದ ಸಮಯಕ್ಕೂ ಕಡಿತಗೊಳಿಸುವ ಪ್ರಸಂಗವು ನಡೆಯುತ್ತವೆ, ಈ ವಿಧಾನಗಳೆಲ್ಲಾ ಸಾಧು ಸಂತರಿಗೆ, ಸ್ವಾಮಿಜೀಗಳಿಗೆ ಮಾಡುವ ಅವಮಾನವಾಗಿವೆ ಎಂದಿದ್ದಾರೆ. ಮುಂದಾದರೂ ಕಾರ್ಯಕ್ರಮ ಆಯೋಜಕರು ಮತ್ತು ಎಲ್ಲಾ ರಾಜಕಾರಣಿಗಳು ಈ ಘಟನೆ ನೆನಪಿಟ್ಟುಕೊಂಡು ಎಲ್ಲರಿಗೂ ಗೌರವ ಸಿಗುವಂತೆ ನಡೆದುಕೊಳ್ಳಬೇಕು, ವರ್ತಿಸಬೇಕು ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಸಲಹೆ ನೀಡಿದ್ದಾರೆ.

# 371(ಜೆ) ಅನುಷ್ಠಾನದ ಸಮಗ್ರ ಅವಲೋಕನ ಅಗತ್ಯ: ರಾಘವೇಂದ್ರ ಕುಷ್ಟಗಿ

**ರಾಯಚೂರು, ಆ. 10:** ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಮಾತ್ರ 371(ಜೆ) ಜಾರಿಯಾಗಿದ್ದು, ಆದರೆ ಅದು ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ. ಶಿಕ್ಷಣ, ಉದ್ಯೋಗ ಹಾಗೂ ಮೂಲಭೂತ ಸೌಲಭ್ಯಗಳು ಕಲ್ಯಾಣದ ಜನರಿಗೆ ದೊರೆಯುತ್ತಿವೆಯೇ ಎಂಬುದನ್ನು ಕುರಿತು ಸಮಗ್ರ ಅವಲೋಕನವಾಗಬೇಕಿದೆ ಎಂದು ಹೈದರಾಬಾದ್ ಕರ್ನಾಟಕ ಜನಾಂದೋಲನ ಕೇಂದ್ರ ಸ್ಥಾಪಕ ರಾಘವೇಂದ್ರ ಕುಷ್ಟಗಿ ಹೇಳಿದರು.

ಜಿಲ್ಲೆಯ ತಾವರಗೇರಾ ಬುದ್ಧ ವಿಹಾರ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಹೋರಾಟ ಸಮಿತಿ ನೇತೃತ್ವದಲ್ಲಿ ಏರ್ಪಡಿಸಿದ್ದ ಎರಡು ದಿನಗಳ ಅಧ್ಯಯನ ಶಿಬಿರದಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗಕ್ಕೆ 371(ಜೆ) ಜಾರಿಗೆ ತರುವ ದಿಸೆಯಲ್ಲಿ ದಿ.ವೈಜನಾಥ ಪಾಟಿಲ್ ನೇತೃತ್ವದಲ್ಲಿ ಹಲವು ಹೋರಾಟಗಾರರು ಪ್ರಾಮಾಣಿಕವಾಗಿ ಶ್ರಮವಹಿದ್ದಾರೆ. ಮುಖ್ಯವಾಗಿ ವೈಜನಾಥ ಪಾಟೀಲ ಅವರು ವಿಧಾನಸಭೆಯಲ್ಲಿ ಒಬ್ಬರೇ ಧರಣಿ ಕುಳಿತಿದ್ದಾಗ ಉಳಿದ ಶಾಸಕರು ಅವರನ್ನು ಅಪಹಾಸ್ಯ ಮಾಡಿದ್ದರು. ಅನಂತರದಲ್ಲಿ ಹೋರಾಟಗಾರರು, ಚಿಂತಕರು ಸೇರಿ ದೆಹಲಿ ಜಂತರ್–ಮಂತರ್ ಪ್ರದೇಶದಲ್ಲಿ ಹೋರಾಟ ಮಾಡಿ, ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವ ಮೂಲಕ ಗಮನ ಸೆಳೆದರು. ಆಗ ಮಲ್ಲಿಕಾರ್ಜುನ ಖರ್ಗೆ ಅವರು ಕೇಂದ್ರ ಮಂತ್ರಿಯಾಗಿದ್ದ ಪಿ.ಚಿದಂಬರಂ ಅವರೊಂದಿಗೆ



ಚರ್ಚಿಸಿ, 371(ಜೆ) ಸಂವಿಧಾನಿಕ ಹಕ್ಕು ಪಡೆಯಬೇಕಿದೆ ಮತ್ತು ಮೂಲಭೂತ ಸೌಕರ್ಯಗಳ ಅನ್ಯಾಯದ ಮನವರಿಕೆ ಮಾಡಿದರು. ನಂತರದ್ದು ಇತಿಹಾಸ. ಬಳಿಕವಷ್ಟೇ ಮಾಡಲಾಯಿತು. ಹೀಗೆ ನಮ್ಮ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಇನ್ನೂ ಸಮರ್ಪಕ ಸೇವೆಗಳು ಸಿಗುತ್ತಿಲ್ಲ ಎಂದು ಹೇಳಿದರು.

ದಕ್ಷಿಣ ಕರ್ನಾಟಕದವರು, ಉತ್ತರ ಕರ್ನಾಟಕ ವಿಶೇಷ ಅಭಿವೃದ್ಧಿ ಯೋಜನೆಯನ್ನು ವಿರೋಧಿಸಿದ್ದರು. ಮೈಸೂರು ರಾಜ್ಯ ಆಡಳಿತ, ವಿಶಾಲ ಮೈಸೂರು, ನಂತರ ಕರ್ನಾಟಕ ಎಂಬುದು ಜಾರಿಗೆ ಬಂದಿತು. ಹೀಗೆ ಚಳವಳಿ ಆರಂಭವಾದಾಗ ನಮ್ಮ ಭಾಗದಲ್ಲಿ ಸರ್ಕಾರಗಳು ಇಚ್ಛಾಶಕ್ತಿ ತೋರಲಿಲ್ಲ. ಶಿಕ್ಷಣ, ಆರೋಗ್ಯ, ಮಾನವ ಅಭಿವೃದ್ಧಿ ಕುಂಠಿತಗೊಂಡಿತ್ತು. ಆದರೆ ಹಲವು ಪರಿಣಾಮಕಾರಿ ಹೋರಾಟಗಳ ಫಲವಾಗಿ 371(ಜೆ) ಜಾರಿಯಾಯಿತು. ಈ ನಾವೆಲ್ಲರೂ ಸೌಲಭ್ಯಗಳನ್ನು ಅನುಭವಿಸುತ್ತಿದ್ದೇವೆ. ಆದರೂ ಶಿಕ್ಷಣ, ಸರ್ಕಾರಿ ಹುದ್ದೆಗಳು ಭರ್ತಿ ಸಮರ್ಪಕವಾಗಿ ನಡೆಯದೆ, 7 ಜಿಲ್ಲೆಗಳು ಹಿಂದೆ ಉಳಿದಿವೆ. ಭವಿಷ್ಯದಲ್ಲಿ ಸಮರ್ಪಕ ಅನುಷ್ಠಾನಕ್ಕಾಗಿ ಮತ್ತಷ್ಟು ಹೋರಾಟಗಳನ್ನು ರೂಪಿಸುವ ಅಗತ್ಯವಿದೆ.

ಸಾಮಾಜಿಕ ಹೋರಾಟಗಾರ್ತಿ ಡಾ.ಮೀನಾಕ್ಷಿ ಬಾಳಿ ಮಾತನಾಡಿ, ಮೊದಲು ಪ್ರಾದೇಶಿಕ ಅಸಮತೋಲನ ಹೋಗಲಾಡಿಸಬೇಕು. ಆಡಳಿತ ನಡೆಸುವ ಸರ್ಕಾರಗಳು ರೈತರ ಕಷ್ಟಕ್ಕೆ ಬರುತ್ತಿಲ್ಲ. ಮಳೆ ಬೆಳೆಯಿಲ್ಲದೇ ಕೃಷಿ ಬದುಕು ಕುಂಠಿತಗೊಳ್ಳುತ್ತಿದೆ. ಆದರೆ ನಮ್ಮ ಹಕ್ಕು ನಮಗೆ ಸಿಗದೇ ದಿನ ಕಳೆಯುತ್ತಿದ್ದೇವೆ. ಇದಕ್ಕಾಗಿ ನಮ್ಮ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗೆ ಚಿಂತಕರು ಜೊತೆಯಾಗಿ ಹೋರಾಟ ರೂಪರೇಷೆ ಸಿದ್ಧಪಡಿಸಿ, ಸಂವಿಧಾನದ ಹಕ್ಕು ನಮ್ಮ ಭಾಗಕ್ಕೆ ಸಿಗುವವರೆಗೆ, ದಿಟ್ಟ ಹೋರಾಟ ಮೂಲಕ ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ಎಚ್ಚರಿಸುವ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಹೋರಾಟ ಸಮಿತಿ ಅಧ್ಯಕ್ಷ ಚಾಮರಸ ಮಾಲಿಪಾಟೀಲ ಮಾತನಾಡಿ, 371(ಜೆ) ಹಕ್ಕು ಪಡೆಯುವುದಕ್ಕಾಗಿ ಸೆ.17ರಂದು ಕಲಬುರಗಿಯಲ್ಲಿ ಬೃಹತ್ ಹೋರಾಟ ಹಮ್ಮಿಕೊಂಡು ಸರ್ಕಾರದ ಕಣ್ಣು ತೆರೆಸುವ ಕೆಲಸ ಮಾಡಬೇಕಿದೆ. ಈ ಕಾರ್ಯಕ್ಕೆ ಹಲವು ಹೋರಾಟಗಾರರು, ಚಿಂತಕರು ಕೈಜೋಡಿಸುವ ಭರವಸೆ ನಿಡಿದ್ದಾರೆ. ಶಿಬಿರದಲ್ಲಿ ಗೋಷ್ಠಿ ನಡೆಸುವ ಮೂಲಕ ಸಂವಾದ, ಹೋರಾಟ ರೂಪರೇಷೆ ಸಿದ್ಧಪಡಿಸಲಾಗುವುದು ಎಂದರು.

ಮಾಜಿ ಸಂಸದ ಸಂಗಣ್ಣ ಕರಡಿ ಮಾತನಾಡಿ, ಹಲವಾರು ವರ್ಷಗಳಿಂದ ಉತ್ತರ ಕರ್ನಾಟಕ ಅಭಿವೃದ್ಧಿಗೆ ಹೋರಾಟ ಮೂಲಕ ಶ್ರಮಿಸುವ ಹೋರಾಟಗಾರರ ಕಾರ್ಯ ಶ್ಲಾಘನೀಯ. ನಾವು ರಾಜಕೀಯ ನಾಯಕರು ಸಹಕಾರ ನೀಡುತ್ತೇವೆ. ನೀರಾವರಿ ಶಿಕ್ಷಣ ಆರೋಗ್ಯ ಕ್ಷೇತ್ರ ಹೀಗೆ ಕಲ್ಯಾಣ ಕರ್ನಾಟಕ್ಕೆ ಸೌಲಭ್ಯಗಳು ದೊರಕಿಸುವ ಪಣ ತೊಡುತ್ತೇವೆ ಎಂದರು.

ನಂತರ ರೈತ ಮುಖಂಡ ವೀರಸಂಗಯ್ಯ ಚಂದ್ರಶೇಖರ ನಾಲತ್ವಾಡ, ಮಹೇಶ ಕಲಬುರಗಿ, ಜಯತೀರ್ಥ ದೇಸಾಯಿ ಮಾತನಾಡಿದರು. ನಂತರ ನಡೆದ 1ನೇ ಗೋಷ್ಠಿಯಲ್ಲಿ ಚಿಂತಕಿ ಕೆ.ನೀಲಾ ಅಧ್ಯಕ್ಷತೆಯಲ್ಲಿ ರಜಾಕ್ ಉಸ್ತಾದ್ ಅವರು ಸಮಗ್ರ ಅವಲೋಕನ ಕುರಿತು ವಿಷಯ ಮಂಡಿಸಿದರು. 2ನೇ ಗೋಷ್ಠಿಯಲ್ಲಿ ಡಿ.ಎಚ್. ಕಂಬಳಿ ಅಧ್ಯಕ್ಷತೆಯಲ್ಲಿ ಹಂಪಿ ವಿಶ್ವವಿದ್ಯಾಲಯ ಪ್ರಾಧ್ಯಾಪಕ ಎಚ್.ಡಿ.ಪ್ರಸಾದ ಅವರು, ಅಪೌಷ್ಟಿಕತೆ, ಬಡತನ ಹಸಿವು ನಿವಾರಣೆ ಸವಾಲುಗಳು ಕುರಿತು ವಿಷಯ ಮಂಡಿಸಿದರು.

# ಆಗಸ್ಟ್‌ನಲ್ಲೇ 2 ತಿಂಗಳ ಪಡಿತರ ಧಾನ್ಯ ವಿತರಣೆ, ಆ.15 ರೊಳಗೆ ಎಲ್‌ಪಿಜಿ ಇ–ಕೆವೈಸಿ ಪೂರ್ಣಗೊಳಿಸಲು ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಸೂಚನೆ

**ಬಳ್ಳಾರಿ,ಆ.10:**ಜಿಲ್ಲೆಯಾದ್ಯಂತ ಇರುವ ಬಿ.ಪಿ.ಸಿ ಎಲ್.ಪಿ.ಜಿ ಗ್ರಾಹಕರು ಆಗಸ್ಟ್ 15 ರೊಳಗೆ ತಮಗೆ ಸಂಬಂಧಿಸಿದ ಎಲ್.ಪಿ.ಜಿ ಅನಿಲ ವಿತರಕರ ಬಳಿ ತೆರಳಿ ಕಡ್ಡಾಯವಾಗಿ ಇ–ಕೆವೈಸಿ ಮಾಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ಅವರು ತಿಳಿಸಿದ್ದಾರೆ.

ನಿಗದಿತ ದಿನಾಂಕದೊಳಗೆ ಇ–ಕೆವೈಸಿ ಮಾಡಿಸದಿದ್ದಲ್ಲಿ ಅನಿಲ ಸರಬರಾಜು ತಾತ್ಕಾಲಿಕವಾಗಿ ಸ್ಥಗಿತಗೊಂಡು ತೊಂದರೆಯಾಗುವ ಸಾಧ್ಯತೆಯಿದ. ಅದೇರೀತಿಯಾಗಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಆಗಸ್ಟ್ ಹಾಗೂ ಸೆಪ್ಟೆಂಬರ್–2026 ರ ಮಾಹೆಯ ಪಡಿತರ ಆಹಾರಧಾನ್ಯವನ್ನು ಆಗಸ್ಟ್ ಮಾಹೆಯಲ್ಲೇ ಒಟ್ಟಿಗೆ ವಿತರಿಸಲಾಗುತ್ತಿದೆ.



ಅಂತ್ಯೋದಯ ಕಾರ್ಡುದಾರರಿಗೆ 2 ತಿಂಗಳ ಪಡಿತರವಾಗಿ ಒಟ್ಟು 42 ಕೆ.ಜಿ. ಜೋಳ ಹಾಗೂ 28 ಕೆ.ಜಿ. ಅಕ್ಕಿ ನೀಡಲಾಗುತ್ತದೆ. ಬಿ.ಪಿ.ಎಲ್ ಕಾರ್ಡುದಾರರಿಗೆ ಕಾರ್ಡಿನ ಪ್ರತಿ ಸದಸ್ಯರಿಗೆ 2 ತಿಂಗಳಿಗೆ 6 ಕೆ.ಜಿ. ಜೋಳ ಹಾಗೂ 4 ಕೆ.ಜಿ. ಅಕ್ಕಿ ವಿತರಿಸಲಾಗುತ್ತದೆ. ರಾಜ್ಯ ಪಡಿತರ ಚೀಟಿದಾರರಿಗೆ 10 ಕೆ.ಜಿ. ಅಕ್ಕಿ ಮಾತ್ರ ನೀಡಲಾಗುತ್ತದೆ.

2 ತಿಂಗಳ ಪಡಿತರ ಪಡೆಯುವುದರಿಂದ ನ್ಯಾಯಬೆಲೆ ಅಂಗಡಿಯಲ್ಲಿ 2 ಬಾರಿ ಬಯೋಮೆಟ್ರಿಕ್ ದಾಖಲಿಸಿ ಪಡಿತರ ಪಡೆಯಬೇಕು ಮತ್ತು ಎಲ್ಲಾ ಪಡಿತರ ಚೀಟಿದಾರರ ಇ–ಕೆವೈಸಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಕಾರ್ಡಿನಲ್ಲಿ ಹೆಸರಿರುವ ಎಲ್ಲಾ ಸದಸ್ಯರು ಕಡ್ಡಾಯವಾಗಿ ತಮ್ಮ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಬಯೋಮೆಟ್ರಿಕ್ ನೀಡಿ ಇ–ಕೆವೈಸಿ ಪೂರ್ಣಗೊಳಿಸಬೇಕು.

ಪಡಿತರ ವಿತರಣೆಗೆ ಸಂಬಂಧಿಸಿದಂತೆ ಯಾವುದೇ ದೂರು ಅಥವಾ ಅಕ್ರಮಗಳಿದ್ದಲ್ಲಿ ಸಂಬಂಧಿಸಿದ ತಾಲೂಕು ತಹಶೀಲ್ದಾರ್ ಕಚೇರಿ ಅಥವಾ ಆಹಾರ ಇಲಾಖೆಯ ಉಪನಿರ್ದೇಶಕರ ಕಾರ್ಯಾಲಯ, ಬಳ್ಳಾರಿ ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಥಿಲಗೊಂಡ ಕಟ್ಟಡ–ಜೀವಭಯದಲ್ಲಿ ಮಕ್ಕಳು, ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳಿಂದ ಪ್ರತಿಭಟನೆ




**ರಾಯಚೂರು, ಆ. 10:** ನಗರದ ಸರ್ಕಾರಿ ಬಾಲಕರ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ತರಗತಿ ನಡೆಯುತ್ತಿದ್ದ ವೇಳೆ ಚಾವಣಿಯ ಸಿಮೆಂಟ್ ಪದರು ಕಳಚಿ ಬಿದ್ದ ಪರಿಣಾಮ ವಿದ್ಯಾರ್ಥಿಗಳು ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನೆಯಿಂದ ಆತಂಕಗೊಂಡ ವಿದ್ಯಾರ್ಥಿಗಳು ತರಗತಿಗಳನ್ನು ಬಹಿಷ್ಕರಿಸಿ ಎಐಡಿಎಸ್ ನೇತೃತ್ವದಲ್ಲಿ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಹಳೆಯ ಡಿಡಿಪಿಐ ಕಚೇರಿ ಹಿಂಭಾಗದಲ್ಲಿರುವ ಕಾಲೇಜಿನ ವಾಣಿಜ್ಯ ವಿಭಾಗದ ತರಗತಿಯಲ್ಲಿ ಬೆಳಿಗ್ಗೆ ಪಾಠ ಆಲಿಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಛಾವಣಿಯ ಸಿಮೆಂಟ್ ಪದರು ಕಳಚಿ ಬಿದ್ದಿದ್ದು, ವಿದ್ಯಾರ್ಥಿಗಳು ತಕ್ಷಣ ತರಗತಿಯಿಂದ ಹೊರಗೆ ಓಡಿ ಬಂದಿದ್ದಾರೆ.

ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸದಿದ್ದರೂ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಆತಂಕಕ್ಕೊಳಗಾಗಿದ್ದಾರೆ ಎಂದು ಪ್ರತಿಭಟನಕಾರರು ಹೇಳಿದರು.

ಸುಮಾರು 30 ವರ್ಷಗಳ ಹಿಂದೆ ಹೈದರಾಬಾದ್–ಕರ್ನಾಟಕ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಕಾಲೇಜಿನ ಕಟ್ಟಡ ಹಲವು ವರ್ಷಗಳಿಂದ ಶಿಥಿಲಾವಸ್ಥೆ ಯಲ್ಲಿದೆ. ಹೊಸ ಕಟ್ಟಡ ನಿರ್ಮಾಣಕ್ಕೆ ಕಾಲೇಜು ಆಡಳಿತವು ಶಿಕ್ಷಣ ಇಲಾಖೆ, ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಇದುವರೆಗೆ ಅನುಮೋದನೆ ದೊರೆತಿಲ್ಲ ಎಂದು ಆರೋಪಿಸಿದರು.

ಘಟನೆಯನ್ನು ಖಂಡಿಸಿ ವಿದ್ಯಾರ್ಥಿಗಳು ಕಾಲೇಜಿನಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಧರಣಿ ನಡೆಸಿದರು. ಹೊಸ ಕಟ್ಟಡ ನಿರ್ಮಾಣ ಹಾಗೂ ಶಿಥಿಲಗೊಂಡಿರುವ ಕೊಠಡಿಗಳ ತುರ್ತು ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

### ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮಕ್ಕೆ ಚಾಲನೆ

# ಮಗುವಿನ ಸರ್ವತೋಮುಖ ಬೆಳವಣಿಗೆಗೆ ಜಂತುಹುಳು ನಿವಾರಕ ಮಾತ್ರೆ ಸಹಕಾರಿ: ಡಾ. ಅಲಕಾನಂದ ಮಳಗಿ

**ಬಳ್ಳಾರಿ,ಆ.10.**ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆ ಸರಿಯಾಗಿ ಆಗಲು ಮತ್ತು ಅವರ ಸರ್ವತೋಮುಖ ವಿಕಾಸಕ್ಕೆ ಪೂರಕವಾಗಿ ಪ್ರತಿ ಆರು ತಿಂಗಳಿಗೊಮ್ಮೆ ತಪ್ಪದೇ ಜಂತುಹುಳು ನಿವಾರಕ (ಆಲ್ಬೆಂಡಜೋಲ್) ಮಾತ್ರೆಗಳನ್ನು ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅಲಕಾನಂದ ಡಿ. ಮಳಗಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರ್.ಸಿ.ಎಚ್. ವಿಭಾಗ, ಗಾಂಧಿನಗರದ ನಗರ ಆರೋಗ್ಯ ಕೇಂದ್ರ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಗರದ ಕಪ್ಪಗಲ್ಲು ರಸ್ತೆಯ ಸರ್ಕಾರಿ ಪ್ರೌಢಶಾಲೆ ಹಾಗೂ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ?ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮ?ದಡಿ ಸಮುದಾಯ ಆಧಾರಿತ ಜಂತುಹುಳು ನಿವಾರಣೆ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ,



ದೇಹದಲ್ಲಿ ರಕ್ತದ ಪ್ರಮಾಣ ಕಡಿಮೆಯಾದಂತೆ ರೋಗನಿರೋಧಕ ಶಕ್ತಿಯೂ ಕುಂದುತ್ತದೆ. ಇದರಿಂದ ಸಣ್ಣಪುಟ್ಟ ಕಾಯಿಲೆಗಳೂ ದೀರ್ಘಾವಧಿಯವರೆಗೆ ಕಾಡಬಹುದು.

ಮುಖ್ಯವಾಗಿ ಹೆಣ್ಣುಮಕ್ಕಳಲ್ಲಿ ರಕ್ತಹೀನತೆ ಮುಂದುವರಿದರೆ ಹದಿಹರೆಯದ ಸಮಸ್ಯೆಗಳು ಗಂಭೀರ ಸ್ವರೂಪ ಪಡೆಯುತ್ತವೆ. ರಕ್ತಹೀನತೆಯನ್ನು ಆರಂಭದಲ್ಲಿಯೇ ಗುರುತಿಸುವುದರಿಂದ ಮಕ್ಕಳ ದೈಹಿಕ ಬೆಳವಣಿಗೆಯ ಕುಂಠಿತವನ್ನು ತಡೆಗಟ್ಟಿ, ಅವರ ಬಾಲ್ಯವನ್ನು ಸದೃಢಗೊಳಿಸಲು ಸಾಧ್ಯ ಎಂದು ಹೇಳಿದರು.

1 ರಿಂದ 2 ವರ್ಷದೊಳಗಿನ ಮಕ್ಕಳಿಗೆ 200 ಮಿಲಿಗ್ರಾಂ ಹಾಗೂ 2 ರಿಂದ 19 ವರ್ಷದೊಳಗಿನ ಮಕ್ಕಳಿಗೆ 400 ಮಿಲಿಗ್ರಾಂ ಅಲ್ಬೆಂಡಾಜೋಲ್ ಮಾತ್ರೆಗಳನ್ನು ನೀಡಲಾಗುತ್ತಿದೆ. ಜಂತು ರಹಿತ ಮಕ್ಕಳು ದೇಶದ ಸಂಪತ್ತು. ಎಲ್ಲಾ ವಿದ್ಯಾರ್ಥಿಗಳು ಈ ಮಾತ್ರೆಯ ಸದುಪಯೋಗ ಪಡೆದು ಶಿಕ್ಷಣದ ಕಡೆಗೆ ಹೆಚ್ಚು ಗಮನಹರಿಸಿ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಡಾ. ಹನುಮಂತಪ್ಪ, ಜಿಲ್ಲೆಯ ಎಲ್ಲಾ ಗ್ರಾಮ, ನಗರ ಮತ್ತು ಪಟ್ಟಣಗಳ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಮಾತ್ರೆ ವಿತರಿಸಲು ಕ್ರಿಯಾ ಯೋಜನೆ ರೂಪಿಸಲಾಗಿದೆ. ಎಲ್ಲಾ ಸರ್ಕಾರಿ ಮತ್ತು ಖಾಸಗಿ ಶಾಲೆ, ಕಾಲೇಜುಗಳಲ್ಲಿ ಮಾತ್ರೆ ನೀಡಲಾಗುತ್ತಿದ್ದು, ಮಾತ್ರೆ ಪಡೆಯಲು ಬಿಟ್ಟುಹೋದ ಮಕ್ಕಳಿಗೆ ಆಗಸ್ಟ್ 17 ರಂದು ನೀಡಲಾಗುವುದು. ಮಕ್ಕಳಿಗೆ ಯಾವುದೇ ಕಾರಣಕ್ಕೂ ಮಾತ್ರೆಯನ್ನು ನುಂಗಿಸದೇ, ಚೀಪಿಸಲು ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಜಂತುಹುಳು ನಿವಾರಣೆಯಿಂದ ರಕ್ತಹೀನತೆ ನಿಯಂತ್ರಣ, ಪೌಷ್ಠಿಕತೆ ಹಾಗೂ ರೋಗನಿರೋಧಕ ಶಕ್ತಿ ಸುಧಾರಣೆ, ಓದಿನಲ್ಲಿ ಏಕಾಗ್ರತೆ, ಹಾಜರಾತಿಯಲ್ಲಿ ಪ್ರಗತಿ ಮತ್ತು ದೈಹಿಕ–ಮಾನಸಿಕ ಆರೋಗ್ಯ ರಕ್ಷಣೆ ಸಾಧ್ಯವಾಗುತ್ತದೆ. ಕಾಯಿಲೆಯ ಲಕ್ಷಣಗಳು ಕಾಣಿಸದಿದ್ದರೂ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಈ ಸುರಕ್ಷಿತ ಮಾತ್ರೆಯನ್ನು ಸೇವಿಸುವುದು ಅಗತ್ಯ ಎಂದು ಅವರು ವಿವರಿಸಿದರು.

# ಹಾರ್ಮುಜ್ ಜಲಸಂಧಿಯನ್ನು ಬಳಸುವ ಹಡಗುಗಳಿಗೆ ಸೇವಾಶುಲ್ಕ: ಇರಾನ್ ಒತ್ತಾಯ

**ವಾಷಿಂಗ್ಟನ್, ಆ.10:** ಹಾರ್ಮುಜ್ ಜಲಸಂಧಿಯಲ್ಲಿ ಒದಗಿಸಲಾದ ಸಮುದ್ರ ಸೇವೆಗಳಿಗೆ ಶುಲ್ಕವನ್ನು ವಿಧಿಸಬೇಕು ಎಂದು ಇರಾನ್ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಹೇಳಿದರು. ಇರಾನ್ ಮತ್ತು ಒಮಾನ್ ನಡುವಿನ ಮಾತುಕತೆಗಳ ಪ್ರಸ್ತುತ ಹಂತದಲ್ಲಿ ಶುಲ್ಕದ ವಿಷಯವನ್ನು ವಿವರವಾಗಿ ಚರ್ಚಿಸಲಾಗುತ್ತಿಲ್ಲ ಎಂದು ಬಘೈ ಹೇಳಿದರು.

ಇರಾನ್–ಒಮಾನ್ ಮಾತುಕತೆಗಳನ್ನು "ಸುಗಮ ಮತ್ತು ರಚನಾತ್ಮಕವಾಗಿ" ಎಂದು ಅವರು ವಿವರಿಸಿದರು ಮತ್ತು ತಾಂತ್ರಿಕ ಸಮಸ್ಯೆಗಳನ್ನು ಇನ್ನೂ ಪರಿಹರಿಸಲಾಗುತ್ತಿದೆ ಎಂದು ಹೇಳಿದರು. ಎರಡೂ ಕಡೆಯ ನಡುವೆ ಬರಬಹುದಾದ ಸಂಭಾವ್ಯ ಒಪ್ಪಂದದ ಅಡಿಯಲ್ಲಿ, ಜಲಸಂಧಿಯಲ್ಲಿ ಅಸ್ತಿತ್ವದಲ್ಲಿರುವ ಉತ್ತರ ಮತ್ತು ದಕ್ಷಿಣ ಮಾರ್ಗಗಳನ್ನು ಮಧ್ಯಂತರ ಮಾರ್ಗದಿಂದ ಬದಲಾಯಿಸಲಾಗುವುದು ಎಂದು ಅವರು ಹೇಳಿದರು, ಇರಾನ್ ಮತ್ತು ಒಮಾನ್ ಹೊಸ ಸಂಚಾರ ಪ್ರತ್ಯೇಕತಾ ಯೋಜನೆಗೆ ಒಪ್ಪುವವರೆಗೆ



ಹೊಸ ಮಾರ್ಗವನ್ನು ತಾತ್ಕಾಲಿಕವಾಗಿ ಬಳಸಲಾಗುವುದು ಎಂದು ಹೇಳಿದರು. ಹಾರ್ಮುಜ್ ಜಲಸಂಧಿಯನ್ನು ಮುಚ್ಚಲು ಬಾಘೈ ಕಾರಣ ಎಂದು ಅವರು ಕರೆದರು.

**ಹಾರ್ಮುಜ್ ಜಲಸಂಧಿಯನ್ನು ನಿರ್ವಹಿಸಲು ಒಮಾನ್ ಜೊತೆಗಿನ ಸನ್ನಿಹಿತ ಒಪ್ಪಂದವು ಅಮೆರಿಕವು ಕೆಲವು ಷರತ್ತುಗಳನ್ನು ಪೂರೈಸದ ಹೊರತು, ಪ್ರಮುಖ ಜಲಮಾರ್ಗವನ್ನು ಮತ್ತೆ ತೆರೆಯಲು ಸಾಕಾಗುವುದಿಲ್ಲ ಎಂದು ಇರಾನ್ ಹೇಳಿದ ನಂತರ ತೈಲಬೆಲೆ ಏರಿಕೆಯಾಗಿದೆ. ಸಮುದ್ರ ಗುಪ್ತಚರ ಸಂಸ್ಥೆಯ ಪ್ರಕಾರ, ಜಲಸಂಧಿಯ ಮೂಲಕ ಸಂಚಾರವು "ಅಧೀನ" ಮತ್ತು "ದುರ್ಬಲವಾಗಿದೆ". ತೈಲ ಬೆಲೆಗಳು 3% ರಷ್ಟು ಏರಿಕೆಯಾಗಿವೆ: ಬ್ರೆಂಟ್ ಕಚ್ಚಾ ತೈಲವು ಬ್ಯಾರೆಲ್ಗೆ 3% ರಷ್ಟು ಏರಿಕೆಯಾಗಿ 86.03 ಡಾಲರ್‌ಗೆ ತಲುಪಿದೆ, ಆದರೆ WTI ಸೋಮವಾರ 3.1% ರಷ್ಟು ಏರಿಕೆಯಾಗಿ $80.61 ಕ್ಕೆ ತಲುಪಿದೆ**

ಕಾರ್ಯತಂತ್ರದ ಜಲಮಾರ್ಗವನ್ನು ಮತ್ತೆ ತೆರೆಯುವುದು ಇರಾನ್ ಮೇಲೆ ವಿಧಿಸಲಾದ ಷರತ್ತುಗಳನ್ನು ತೆಗೆದುಹಾಕುವುದರ ಮೇಲೆ ಅವಲಂಬಿತವಾಗಿದೆ ಎಂದು ಅವರು ಹೇಳಿದರು. ಇರಾನ್ ಅಮೆರಿಕದೊಂದಿಗೆ ನೇರವಾಗಿ ಮಾತುಕತೆ ನಡೆಸುತ್ತಿಲ್ಲ ಎಂದು ಬಘೈ ಪುನರುಚ್ಚರಿಸಿದರು, ಆದರೂ ಎರಡೂ ದೇಶಗಳು ಮಧ್ಯವರ್ತಿಗಳ ಮೂಲಕ ಸಂದೇಶಗಳನ್ನು ವಿನಿಮಯ ಮಾಡಿಕೊಳ್ಳುತ್ತಲೇ ಇವೆ. ಫೆಬ್ರವರಿ 28 ರಂದು ಇರಾನ್ ಭೂಪ್ರದೇಶದ ಮೇಲೆ ಅಮೆರಿಕ–ಇಸ್ರೇಲಿ ದಾಳಿ ನಡೆಸಿದ ನಂತರ ಇರಾನ್ ಹಾರ್ಮುಜ್ ಜಲಸಂಧಿಯ ಮೇಲೆ ತನ್ನ ಹಿಡಿತವನ್ನು ಬಿಗಿಗೊಳಿಸಿತು. ಅದೇ ಸಮಯದಲ್ಲಿ, ಯುಎಸ್, ಇಸ್ರೇಲಿ ಮತ್ತು ಇತರ "ಪ್ರತಿಕೂಲ" ಹಡಗುಗಳ ಸಾಗಣೆಯನ್ನು ನಿರ್ಬಂಧಿಸುವ ಮತ್ತು ಉಲ್ಲಂಘಿಸುವವರ ಮೇಲೆ ಗಣನೀಯ ಆರ್ಥಿಕ ದಂಡವನ್ನು ವಿಧಿಸುವ ಕರಡು ಸಂಸದೀಯ ಮಸೂದೆಯಲ್ಲಿ ಪ್ರತಿಫಲಿಸಿದಂತೆ, ಟೆಹ್ರಾನ್ ಜಲಸಂಧಿಯ ಮೇಲಿನ ಹತೋಟಿಯನ್ನು ಬಿಟ್ಟುಕೊಡಲು ಇಷ್ಟವಿರುವುದಿಲ್ಲ.

## ಹಾರ್ಮುಜ್ ಜಲಸಂಧಿ ಮತ್ತೆ ತೆರೆಯಲು ಬೇಡಿಕೆ ಅಮೆರಿಕ–ಇರಾನ್ ಮಾತುಕತೆ: ಡೊನಾಲ್ಡ್ ಟ್ರಂಪ್

ವಾಷಿಂಗ್ಟನ್,ಆ.10: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾನುವಾರ ಇರಾನ್ ಜೊತೆ "ನಾವು ಅರೆ–ಮಾತುಕತೆ ನಡೆಸುತ್ತಿದ್ದೇವೆ" ಎಂದು ಹೇಳಿದರು, ಇರಾನ್ ಮೇಲೆ ಆರ್ಥಿಕ ಒತ್ತಡ ಹೆಚ್ಚಾಗಲು ಅವಕಾಶ ನೀಡಲು ಅವರು ಸಿದ್ಧರಿದ್ದಾರೆ ಎಂದು ಹೇಳಿದರು – ಹೊಸ ಮಿಲಿಟರಿ ದಾಳಿಗೆ ಆದೇಶಿಸುವುದಕ್ಕೆ ವಿರುದ್ಧವಾಗಿ, ಆಕ್ಸಿಯೋಸ್ ವರದಿ ಮಾಡಿದೆ. "ನಾವು ಅದನ್ನು ಕಡಿಮೆ ಮಾಡುತ್ತಿದ್ದೇವೆ" ಎಂದು ಟ್ರಂಪ್ ಆಕ್ಸಿಯೋಸ್‌ಗೆ ಸಂಕ್ಷಿಪ್ತ ಫೋನ್ ಕರೆಯ ಸಮಯದಲ್ಲಿ ಹೇಳಿದರು, ಇರಾನ್ ಆರ್ಥಿಕವಾಗಿ "ತುಂಬಾ ಕೆಟ್ಟ ಸ್ಥಿತಿಯಲ್ಲಿದೆ" ಎಂದು ವಾದಿಸಿದರು. ಯುದ್ಧದ ಹಾನಿಗೆ ಇರಾನ್ಗೆ ಪರಿಹಾರ ನೀಡುವುದನ್ನು ಒಳಗೊಂಡಂತೆ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಇರಾನ್ ಹೊಸ ಬೇಡಿಕೆಗಳನ್ನು ಮುಂದಿಟ್ಟಿತು. ಆದಾಗ್ಯೂ, ಸಂಪರ್ಕಗಳನ್ನು ಮಾತುಕತೆಗಳೆಂದು ವಾಷಿಂಗ್ಟನ್ ನಿರೂಪಿಸುವುದನ್ನು ಇರಾನ್ ತಿರಸ್ಕರಿಸಿದೆ. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಟೆಹ್ರಾನ್ ಮಧ್ಯವರ್ತಿಗಳ ಮೂಲಕ ಅಮೆರಿಕದೊಂದಿಗೆ ಸಂದೇಶಗಳನ್ನು ವಿನಿಮಯ ಮಾಡಿಕೊಳ್ಳುತ್ತಿದೆ, ಆದರೆ ಯಾವುದೇ ಔಪಚಾರಿಕ ಮಾತುಕತೆಗಳು ನಡೆಯುತ್ತಿಲ್ಲ ಎಂದು ಹೇಳಿದರು. "ಹೌದು, ಮಧ್ಯವರ್ತಿಗಳ ಮೂಲಕ ಸಂದೇಶಗಳ ವಿನಿಮಯವಿದೆ, ಆದರೆ ಇದನ್ನು ಮಾತುಕತೆ ಎಂದು ಕರೆಯಲಾಗುವುದಿಲ್ಲ"



ಎಂದು ಅರಘ್ಚಿ ಪತ್ರಕರ್ತರಿಗೆ ತಿಳಿಸಿದರು. ಜೂನ್‌ನಲ್ಲಿ ಮಾಡಿಕೊಂಡ ಒಪ್ಪಂದದ ಉಲ್ಲಂಘನೆ ಎಂದು ಅಮೆರಿಕ ಪರಿಗಣಿಸುವ ವಿಷಯಗಳನ್ನು ಟೆಹ್ರಾನ್ ಪರಿಗಣಿಸುವವರೆಗೆ ಮತ್ತು ಆ ಉಲ್ಲಂಘನೆಗಳಿಗೆ ಇರಾನ್ಗೆ ಪರಿಹಾರ ನೀಡುವವರೆಗೆ ಮಾತುಕತೆಗಳನ್ನು ಪುನರಾರಂಭಿಸುವ "ಸಾಧ್ಯತೆ" ಇಲ್ಲ ಎಂದು ಅವರು ಹೇಳಿದರು. ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವುದು ವಾಷಿಂಗ್ಟನ್ ತನ್ನ ದಿಗ್ಬಂಧನವನ್ನು ಕೊನೆಗೊಳಿಸುವುದರ ಮೇಲೆ ಷರತ್ತುಬದ್ಧವಾಗಿದೆ ಎಂದು ಇರಾನ್ ಸ್ಪಷ್ಟಪಡಿಸಿದೆ.ಯುದ್ಧದಲ್ಲಿ ಸಾವುಗಳು, ಗಾಯಗಳಿಗೆ ಇರಾನ್‌ನ್ನಿಂದ ಪರಿಹಾರವನ್ನು ಟ್ರಂಪ್ ಕೋರುತ್ತಾರೆ; ಭವಿಷ್ಯದ ಮಾತುಕತೆಗಳಲ್ಲಿ ಅದನ್ನು ಹೆಚ್ಚಿಸಲು:

"ಕಳೆದ ಐದು ತಿಂಗಳ ಮಿಲಿಟರಿ ಸಂಘರ್ಷದಲ್ಲಿ (ಅವರು ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಿರುವುದಿಲ್ಲ ಎಂಬ ಕಾರಣದಿಂದಾಗಿ ಪ್ರಾರಂಭಿಸಲಾಯಿತು) ಅವರಿಗೆ ಆಗಿರುವ ಹಾನಿಗೆ ಪರಿಹಾರವನ್ನು ಇರಾನ್ ಇಸ್ಲಾಮಿಕ್ ಗಣರಾಜ್ಯದ ಪ್ರತಿನಿಧಿಗಳು ಕೇಳುತ್ತಿದ್ದಾರೆ ಎಂದು ನಾನು ನೋಡುತ್ತೇನೆ, ಆದರೂ ಇದು ನಮ್ಮ ಯಾವುದೇ ಮಾತುಕತೆಗಳು ಅಥವಾ ಸಭೆಗಳಲ್ಲಿ ಎಂದಿಗೂ ಉಲ್ಲೇಖಿಸಲಾಗಿಲ್ಲ! ಆದರೆ ಇದು ಆಸಕ್ತಿದಾಯಕ ವಿಚಾರವಾಗಿದೆ ಏಕೆಂದರೆ ಈಗ ನಾನು ಅದೇ ರೀತಿ ಇರಾನ್ನಿಂದ ಪರಿಹಾರವನ್ನು ಕೇಳುತ್ತಿದ್ದೇನೆ, ಅವರು ತಮ್ಮ ರಸ್ತೆಬದಿಯ ಬಾಂಬ್‌ಗಳು ಮತ್ತು ಅನೇಕ ಸಂಘರ್ಷಗಳಿಂದ ಕೊಂದ ಮತ್ತು ಗಂಭೀರವಾಗಿ ಗಾಯಗೊಂಡ ಎಲ್ಲಾ ಜನರಿಗೆ, ಇದಕ್ಕಾಗಿ ಅವರು ಪ್ರಸಿದ್ಧರಾಗಿದ್ದಾರೆ, ಆರಂಭದಲ್ಲಿ ಜನರಲ್ ಸೊಲೈಮಾನಿ ನೇತೃತ್ವದಲ್ಲಿ, ಯುಎಸ್ಎಸ್ ಕೋಲ್‌ನಲ್ಲಿ ಕೊಲ್ಲಲ್ಪಟ್ಟವರ ಕುಟುಂಬಗಳು ಮತ್ತು ಸಾವಿರಾರು ಇತರರು ಯುದ್ಧದಲ್ಲಿ ಕೊಲ್ಲಲ್ಪಟ್ಟರು," ಎಂದು ಯುಎಸ್ ಅಧ್ಯಕ್ಷರು ಹೇಳಿದರು. "ಹೆಚ್ಚುವರಿಯಾಗಿ, ಕಳೆದ 50 ವರ್ಷಗಳಲ್ಲಿ ಇರಾನ್ ಕೊಂದ ಲಕ್ಷಾಂತರ ಮುಗ್ಧ ಪ್ರತಿಭಟನಾಕಾರರ ಕುಟುಂಬಗಳಿಗೆ ಪರಿಹಾರವನ್ನು ನೀಡಬೇಕು, ಕಳೆದ ಐದು ತಿಂಗಳಲ್ಲಿ ಕೊಲ್ಲಲ್ಪಟ್ಟ 52,000 ಜನರನ್ನು ಉಲ್ಲೇಖಿಸಬಾರದು. ಭವಿಷ್ಯದ ಯಾವುದೇ ಮಾತುಕತೆಗಳಲ್ಲಿ ಇದನ್ನು ದೃಢವಾಗಿ ತೊಡಗಿಸಿಕೊಳ್ಳಲು ನಾನು ನನ್ನ ಪ್ರತಿನಿಧಿಗಳಿಗೆ ಸೂಚಿಸಿದ್ದೇನೆ" ಎಂದು ಅವರು ಹೇಳಿದರು.

## ಕೊಲಂಬಿಯಾದಲ್ಲಿ ಭಾರಿ ಭೂಕಂಪ: 7.4ರಷ್ಟು ತೀವ್ರತೆ, 80ಕ್ಕೂ ಹೆಚ್ಚು ಸಾವು, ಭಾರಿ ಅನಾಹುತ

ಬೊಗೋಟಾ, ಆ.10: ದಕ್ಷಿಣ ಅಮೆರಿಕಾದ ಕೊಲಂಬಿಯಾದಲ್ಲಿ ಸೋಮವಾರ 7.4 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, ಕನಿಷ್ಠ 80 ಮಂದಿ ಮೃತಪಟ್ಟಿದ್ದಾರೆ ಮತ್ತು ಡಜನ್‌ಗಟ್ಟಲೆ ಕಟ್ಟಡಗಳು ಕುಸಿದಿವೆ. ಅವಶೇಷಗಳ ಅಡಿಯಲ್ಲಿ ಸಿಲುಕಿ, ಹಲವರು ಗಾಯಗೊಂಡಿದ್ದಾರೆ.

ಕೊಲಂಬಿಯಾದ ರಾಜಧಾನಿ ಬೊಗೋಟಾ ಸೇರಿದಂತೆ ದೇಶದ ಹಲವು ಭಾಗಗಳಲ್ಲಿ ಇಂದು ಬೆಳಗ್ಗೆ ಪ್ರಬಲ ಭೂಕಂಪ ಸಂಭವಿಸಿದ್ದು, ಜನರನ್ನು ಬೆಚ್ಚಿಬೀಳಿಸಿದೆ.

ಬೊಗೋಟಾದ ಪಶ್ಚಿಮಕ್ಕೆ ಸುಮಾರು 250 ಮೈಲು (400 ಕಿಲೋಮೀಟರ್) ದೂರದಲ್ಲಿರುವ ಚೋಕೊ ಪ್ರದೇಶದಲ್ಲಿ ಸುಮಾರು 4,800 ಜನರಿರುವ ಸ್ಯಾನ್ ಜೋಸ್ ಡೆಲ್ ಪಾಲ್ಮರ್‌ಲ್ಲಿ ಭೂಕಂಪದ ಕೇಂದ್ರಬಿಂದು ಪತ್ತೆಯಾಗಿದೆ ಎಂದು ಅಮೆರಿಕದ ಭೂವೈಜ್ಞಾನಿಕ ಸರ್ವೇಕ್ಷಣಾ ಸಂಸ್ಥೆ ಮತ್ತು ಕೊಲಂಬಿಯಾದ ಭೂವೈಜ್ಞಾನಿಕ ಸರ್ವೇಕ್ಷಣಾ ಸಂಸ್ಥೆ ವರದಿ ಮಾಡಿದೆ.

ಭೂಕಂಪದ ಕೇಂದ್ರಬಿಂದು 66 ಮೈಲುಗಳ (107 ಕಿಲೋಮೀಟರ್) ಆಳದಲ್ಲಿ ಪತ್ತೆಯಾಗಿದೆ ಎಂದು ಅಮೆರಿಕದ ಭೂವೈಜ್ಞಾನಿಕ ಸರ್ವೇಕ್ಷಣಾ ಸಂಸ್ಥೆ ತಿಳಿಸಿದೆ.

ನೆರೆಯ ಈಕ್ವೆಡಾರ್‌ನಲ್ಲಿಯೂ ಭೂಕಂಪದ ಅನುಭವವಾಗಿದ್ದು, ಪಶ್ಚಿಮ ನಗರವಾದ



ಪೆರೇರಾದಲ್ಲಿ ಈ ಭೂಕಂಪದಲ್ಲಿ ಕನಿಷ್ಠ 18 ಜನ ಸಾವನ್ನಪ್ಪಿದ್ದಾರೆ ಎಂದು ಮೇಯರ್ ಮೌರಿಸಿಯೊ ಸಲಾಜರ್ ಅವರು ಹೇಳಿದ್ದಾರೆ.

ಭೂಕಂಪದಿಂದಾಗಿ ಕನಿಷ್ಠ 20 ಕಟ್ಟಡಗಳು ಕುಸಿದಿವೆ. ನೆರೆಯ ಚೋಕೊ ಪ್ರಾಂತ್ಯದಲ್ಲಿ ಭೂಕಂಪದ ನಂತರ "ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ" ಎಂದು ಸಲಾಜರ್ ಅವರು, ಕ್ಯಾರಕೋಲ್ ರೇಡಿಯೊಗೆ ತಿಳಿಸಿದ್ದಾರೆ.

ಭೂಕಂಪ ಸಂಭವಿಸುತ್ತಿದ್ದಂತೆ ಜನರು ಮನೆ, ಕಟ್ಟಡಗಳಿಂದ ಬೀದಿಗೆ ಓಡಿಬಂದಿದ್ದಾರೆ. ಕೆಲವರು ಮಾಲ್ ಗಳಲ್ಲಿ ಸಿಲುಕಿದ್ದಾರೆ. ತಮ್ಮ ಕಣ್ಣೆದುರೇ ತಮ್ಮ ಮನೆ, ಅಪಾರ್ಟ್ ಮೆಂಟ್ ಗಳು ಉರುಳುತ್ತಿರುವುದನ್ನು ಕಂಡು ಬಹಳಷ್ಟು ಮಂದಿ ಕಣ್ಣೀರಾಗಿದ್ದಾರೆ. ಸ್ಯಾನ್ ಜೋಸ್ ಡೆಲ್ ಪಾಲ್ಮಾರ್ನಿಂದ 120 ಕಿ.ಮೀ ದೂರದಲ್ಲಿರುವ ಮನಿಜಾಲೆಸ್ ಸೇರಿದಂತೆ ವಿವಿಧ ನಗರಗಳಲ್ಲಿ ಕಟ್ಟಡಗಳು ಬಿರುಕು ಬಿಟ್ಟಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

## ಭಾರತ–ರಷ್ಯಾ ನಡುವೆ ರೈಲುಮಾರ್ಗ: ಪುಟಿನ್ ಸರ್ಕಾರದ ಮಹಾಯೋಜನೆ

ಮಾಸ್ಕೊ, ಆ.10: ಭಾರತ – ರಷ್ಯಾ ಆತ್ಮೀಯ ಸ್ನೇಹಿತರೆ ಆದರೂ ಇಬ್ಬರ ನಡುವೆ ಸುಮಾರು 4,980 ಕಿ.ಮೀ. ದೂರವಿದೆ! ಈ ದೂರವನ್ನು ವಿಮಾನದಲ್ಲಿ ಕ್ರಮಿಸಲು ಕನಿಷ್ಠ 6ರಿಂದ 7 ಗಂಟೆ ಪ್ರಯಾಣಿಸಬೇಕು. ಆದರೆ, ವಾಯುಮಾರ್ಗದಲ್ಲಿ ವಸ್ತುಗಳ ಆಮದು–ರಫ್ತು ಕಷ್ಟ. ಹಾಗಾಗಿ 5,600ರಿಂದ 5,647 ನಾಟಿಕಲ್ ಮೈಲುಗಳು (10,300 ರಿಂದ 10,500 ಕಿಮೀ) ದೂರವನ್ನು 24 ದಿನಗಳಲ್ಲಿ ಕ್ರಮಿಸಿ ಎರಡು ರಾಷ್ಟ್ರಗಳ ನಡುವೆ ವ್ಯವಹಾರಗಳು ನಡೆಯುತಿದೆ. ಆದರೆ, ಈ 24 ದಿನಗಳ ದೂರವನ್ನು ಕಡಿಮೆ ಮಾಡಲು ಪುಟಿನ್ ಸರ್ಕಾರದಿಂದ ಭಾರಿ ಯೋಜನೆ ಸಿದ್ಧವಾಗಿದೆ.

ರಷ್ಯಾ ಸರ್ಕಾರವು ಭಾರತದೊಂದಿಗೆ ನೇರ ರೈಲು ಸಂಪರ್ಕವನ್ನು ಕಲ್ಪಿಸುವ ಮಹತ್ವಾಕಾಂಕ್ಷೆಯ ಪ್ರಸ್ತಾಪವನ್ನು ಮುಂದಿಟ್ಟಿದೆ. ರಷ್ಯಾದ ಉಪ ಪ್ರಧಾನಿ ಮರಾತ್ ಖುಸ್ನುಲಿನ್ ಅವರು ಇತ್ತೀಚೆಗೆ ಮಾಧ್ಯಮಗಳಿಗೆ ನೀಡಿದ ಸಂದರ್ಶನದಲ್ಲಿ ಈ ಆಲೋಚನೆಯನ್ನು ಹಂಚಿಕೊಂಡಿದ್ದಾರೆ. ಅದರಂತೆ, ಸಮುದ್ರ ಮಾರ್ಗಗಳ ಮೇಲಿನ ಅವಲಂಬನೆಯನ್ನು ತಗ್ಗಿಸಿ, ಸುರಕ್ಷಿತವಾದ ಭೂಮಾರ್ಗದ ಮೂಲಕ ಭಾರತದೊಂದಿಗೆ ವಾಣಿಜ್ಯ ಮತ್ತು ವ್ಯಾಪಾರ ಸಂಬಂಧವನ್ನು ಹೆಚ್ಚಿಸುವುದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸರ್ಕಾರದ ಈ ಮಾಸ್ಟರ್ ಪ್ಲಾನ್ನ ಮುಖ್ಯ ಉದ್ದೇಶವಾಗಿದೆ.

**ರೈಲುಮಾರ್ಗ ಹಾದುಹೋಗುವ ದೇಶಗಳು:**

ರಷ್ಯಾ ಪ್ರಸ್ತಾಪಿಸಿರುವ ಈ ಬೃಹತ್ ರೈಲು ಜಾಲವು ವಿವಿಧ ಏಷ್ಯನ್ ದೇಶಗಳ ಮೂಲಕ ಸಾಗಲಿದೆ:

ರಷ್ಯಾದಿಂದ ಹೊರಡುವ ರೈಲು ಕಝಾಕಿಸ್ತಾನ್ ಅಥವಾ ಉಜ್ಬೇಕಿಸ್ತಾನ್, ತುರ್ಕಮೆನಿಸ್ತಾನ್, ಇರಾನ್, ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ದೇಶಗಳನ್ನು ದಾಟಲಿದೆ. ಅಂತಿಮವಾಗಿ ಭಾರತದ ಗಡಿಯನ್ನು ಪ್ರವೇಶಿಸಿ ಹಿಂದೂ ಮಹಾಸಾಗರದ ಬಂದರುಗಳಿಗೆ ಸಂಪರ್ಕ ಕಲ್ಪಿಸಲಿದೆ.

**ಯೋಜನೆಯ ಪ್ರಮುಖ ಉದ್ದೇಶ**

1. ಸದ್ಯ ರಷ್ಯಾ ಮತ್ತು ಭಾರತದ ನಡುವಿನ ವ್ಯಾಪಾರವು ಜಲಮಾರ್ಗದ ಮೂಲಕ ನಡೆಯುತ್ತದೆ. ಆದರೆ ಪಶ್ಚಿಮ ಏಷ್ಯಾದಲ್ಲಿನ ಯುದ್ಧದ ಉದ್ವಿಗ್ನತೆಯಿಂದಾಗಿ ಹಾರ್ಮುಜ್ ಜಲಸಂಧಿ ಮತ್ತು ಬಾಸ್ಫರಸ್ ಜಲಸಂಧಿಯಂತಹ



ಪ್ರಮುಖ ಜಾಗತಿಕ ಹಡಗು ಮಾರ್ಗಗಳಲ್ಲಿ ಭದ್ರತಾ ಅಪಾಯಗಳು ಹೆಚ್ಚಾಗಿವೆ. ಇದಕ್ಕೆ ಪರ್ಯಾಯವಾಗಿ ಸುರಕ್ಷಿತ ಭೂಮಾರ್ಗವನ್ನು ಸೃಷ್ಟಿಸುವುದು

2. ಭಾರತ ಮತ್ತು ರಷ್ಯಾ ದೇಶಗಳು 2030ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು $100 ಬಿಲಿಯನ್ ( 8.4 ಲಕ್ಷ ಕೋಟಿ ಡಾಲರ್‌ಗೂ ಅಧಿಕ) ಮುಟ್ಟಿಸುವ ಗುರಿ ಹೊಂದಿವೆ. ರಷ್ಯಾದ ಕಚ್ಚಾ ತೈಲ, ಕಲ್ಲಿದ್ದಲು ಮತ್ತು ರಸಗೊಬ್ಬರಗಳನ್ನು ಭಾರತಕ್ಕೆ ಯಾವುದೇ ಅಡೆತಡೆಯಿಲ್ಲದೆ ವೇಗವಾಗಿ ತಲುಪಿಸಲು ಈ ರೈಲು ಮಾರ್ಗ ನೆರವಾಗಲಿದೆ.

3. ಈಗಾಗಲೇ ಜಾರಿಯಲ್ಲಿರುವ ಅಂತಾರಾಷ್ಟ್ರೀಯ ನಾರ್ತ್–ಸೌತ್ ಟ್ರಾನ್ಸ್‌ಪೋರ್ಟ್ ಕಾರಿಡಾರ್ (ಖಓಖಿಅ) ಮಲ್ಟಿಮೋಡಲ್ ಜಾಲವನ್ನು ವಿಸ್ತರಿಸುವ ಮೂಲಕ, ಸಾಂಪ್ರದಾಯಿಕ ಸುಯೆಜ್ ಕಾಲುವೆ ಮಾರ್ಗಕ್ಕಿಂತ ಶೇ.30ರಷ್ಟು ಕಡಿಮೆ ವೆಚ್ಚದಲ್ಲಿ ಮತ್ತು ಶೇ. 40 ರಷ್ಟು ವೇಗವಾಗಿ ಸರಕು ಸಾಗಣೆ ಮಾಡಲು ಸಾಧ್ಯವಾಗುತ್ತದೆ.

ಇದು ಸದ್ಯಕ್ಕೆ ಕೇವಲ ಚರ್ಚೆ ಮತ್ತು ಪರಿಶೀಲನೆಯ ಹಂತದಲ್ಲಿದೆ. ಯಾವುದೇ ಅಧಿಕೃತ ನಿರ್ಮಾಣದ ದಿನಾಂಕವಾಗಲಿ ಅಥವಾ ಪ್ರಯಾಣಿಕರ ರೈಲು ಸೇವೆಯ ವಿವರಗಳಾಗಲಿ ಇನ್ನೂ ಅಂತಿಮಗೊಂಡಿಲ್ಲ. ಅದರಲ್ಲೂ, ಈ ರೈಲು ಮಾರ್ಗವು ಅಫ್ಘಾನಿಸ್ತಾನ್ ಮತ್ತು ಪಾಕಿಸ್ತಾನದ ಮೂಲಕ ಹಾದುಹೋಗಬೇಕಿರುವುದರಿಂದ, ಈ ವಲಯದಲ್ಲಿನ ರಾಜತಾಂತ್ರಿಕ ಬಿಕ್ಕಟ್ಟುಗಳು ಮತ್ತು ಭಾರತ–ಪಾಕ್ ನಡುವಿನ ಉದ್ವಿಗ್ನ ಸಂಬಂಧಗಳು ಈ ಯೋಜನೆಗೆ ದೊಡ್ಡ ಸವಾಲಾಗಿವೆ. ಜೊತೆಗೆ ಬೇರೆ ಬೇರೆ ದೇಶಗಳಲ್ಲಿ ಇರುವ ರೈಲ್ವೆ ಟ್ರ್ಯಾಕ್‌ಗಳ ಗಾತ್ರದ ವ್ಯತ್ಯಾಸವೂ ತಾಂತ್ರಿಕ ತೊಂದರೆಯನ್ನು ತಂದೊಡ್ಡಬಹುದು.

## ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಗಡಿಪಾರಿಗೆ ಮತ್ತೆ ಒತ್ತಾಯಿಸಿದ ಬಾಂಗ್ಲಾದೇಶ

**ಢಾಕಾ, ಆ.10:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರನ್ನು ಗಡಿಪಾರು ಮಾಡುವಂತೆ ಪ್ರಧಾನಿ ತಾರೀಕ್ ರೆಹಮಾನ್ ಆಗ್ರಹಿಸಿದ್ದಾರೆ. ಢಾಕಾದಲ್ಲಿರುವ ಭಾರತೀಯ ಹೈಕಮಿಷನರ್ ದಿನೇಶ್ ತ್ರಿವೇದಿ ಅವರು ತಾರೀಕ್ ರೆಹಮಾನ್ ಅವರನ್ನು ಭೇಟಿ ಮಾಡಿ ಪ್ರಧಾನಿ ನರೇಂದ್ರ ಮೋದಿ ಮತ್ತು ಬಾಂಗ್ಲಾದೇಶ ಸರ್ಕಾರ ಮತ್ತು ಜನರೊಂದಿಗೆ "ಸಕಾರಾತ್ಮಕ, ರಚನಾತ್ಮಕ ಮತ್ತು ಭವಿಷ್ಯದ ರೀತಿಯಲ್ಲಿ" ಕೆಲಸ ಮಾಡುವ ಭಾರತದ ಉದ್ದೇಶವನ್ನು ತಿಳಿಸಿದರು.



ಈ ಭೇಟಿ ವೇಳೆ, ಬಾಂಗ್ಲಾದೇಶದ ಪ್ರಧಾನಿ, ಭಾರತದಲ್ಲಿ ಆಶ್ರಯ ಪಡೆದಿರುವ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರನ್ನು ಹಸ್ತಾಂತರಿಸುವ ಕುರಿತು ಪ್ರಸ್ತಾಪಿಸಿದ್ದಾರೆ. ಉಭಯ ದೇಶಗಳ ನಡುವಿನ ಸಂಬಂಧಗಳಲ್ಲಿ ಹೊಸ ಬಿಕ್ಕಟ್ಟುಗಳ ನಡುವೆಯೂ ಈ ಸಭೆ ನಡೆದಿದೆ. ಈ ಸಭೆ "ಹಲವಾರು ಪ್ರಮುಖ ದ್ವಿಪಕ್ಷೀಯ ವಿಷಯಗಳನ್ನು ಒಳಗೊಂಡಿತ್ತು" ಎಂದು ಬಾಂಗ್ಲಾದೇಶ ಪ್ರಧಾನಿ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ.

ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ಭಾರತ ರೆಹಮಾನ್‌ಗೆ ಆಹ್ವಾನ ನೀಡಿದ್ದು, ಸೆಪ್ಟೆಂಬರ್ 12–13 ರಂದು ನಿಗದಿಯಾಗಿರುವ ಕಾರ್ಯಕ್ರಮಕ್ಕೆ ಗೈರುಹಾಜರಾಗಬಹುದು ಎಂಬ ಊಹಾಪೋಹಗಳ ನಡುವೆ ಈ ಸಭೆಗಳು ನಡೆದಿವೆ. ಆಗಸ್ಟ್ 5ರಂದು ನವದೆಹಲಿಯಲ್ಲಿ ಹಸೀನಾ ವರ್ಚುವಲ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಂತರ ಭಾರತ ಮತ್ತು ಬಾಂಗ್ಲಾದೇಶದ ನಡುವಿನ ಸಂಬಂಧಗಳು ಬಿಗಡಾಯಿಸಿವೆ. ಜೈಲುಶಿಕ್ಷೆ ಅಥವಾ ಮರಣದಂಡನೆಯ ಬೆದರಿಕೆಯನ್ನು ಎದುರಿಸಬೇಕಾದರೂ ಸಹ, ಡಿಸೆಂಬರ್‌ನಲ್ಲಿ ಸ್ವದೇಶಕ್ಕೆ ಮರಳುವ ಮೂಲಕ ದೇಶವನ್ನು "ಸರಿಯಾದ ಹಾದಿಯಲ್ಲಿ" ಇರಿಸಲು ತಾನು ದೃಢನಿಶ್ಚಯ ಮಾಡಿದ್ದೇನೆ ಎಂದು ಅವರು ಹೇಳಿದರು.

ಬಾಂಗ್ಲಾದೇಶ ಮಾಧ್ಯಮ ಸಂವಾದದ ಬಗ್ಗೆ ಆಕ್ರೋಶ ವ್ಯಕ್ತಪಡಿಸಿತು, ಈ ಘಟನೆಯು ತನ್ನ ಜನರ ಭಾವನೆಗಳಿಗೆ ನೋವುಂಟು ಮಾಡಿದೆ ಮತ್ತು ಭಾರತದೊಂದಿಗೆ ದ್ವಿಪಕ್ಷೀಯ ಸಂಬಂಧಗಳನ್ನು ಸುಧಾರಿಸುವ ಪ್ರಯತ್ನಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು ಎಂದು ಹೇಳಿದೆ. ಬಾಂಗ್ಲಾ ಆಡಳಿತ ಹಸೀನಾ ಅವರನ್ನು "ಪರಾರಿ, ಶಿಕ್ಷೆಗೊಳಗಾದ ನರಮೇಧಕೋರ" ಎಂದು ಬಣ್ಣಿಸಿದೆ.



ಕಾಮನ್‌ವೆಲ್ತ್ ಕ್ರೀಡಾಕೂಟಆಲ್ಲಿ ಪದಕ ಗೆದ್ದ ಕ್ರೀಡಾಪಟುಗಳೊಂದಿಗೆ ನವದೆಹಲಿಯಲ್ಲಿ ಸಾಮೂಹಿಕ ಛಾಯಾಚಿತ್ರದಲ್ಲಿ ಪ್ರಧಾನ ಮಂತ್ರಿಯವರು ಪಾಲ್ಗೊಂಡರು.

## ಟೆನಿಸ್: ಡೇವಿಸ್ ಕಪ್‌ನಲ್ಲಿ ದಕ್ಷಿಣ ಕೊರಿಯಾ ವಿರುದ್ಧ ಭಾರತ ಮುನ್ನಡೆಸಲಿರುವ ಸುಮಿತ್ ನಾಗಲ್, ಯೂಕಿ ಭಾಂಬ್ರಿ

**ನವದೆಹಲಿ, ಆ.10:** ಸಿಂಗಲ್ಸ್ ಮತ್ತು ಡಬಲ್ಸ್‌ನಲ್ಲಿ ದೇಶದ ಅಗ್ರ ಶ್ರೇಯಾಂಕಿತ ಆಟಗಾರರಾದ ಸುಮಿತ್ ನಾಗಲ್ ಮತ್ತು ಯೂಕಿ ಭಾಂಬ್ರಿ ಅವರನ್ನು ಮುಂದಿನ ತಿಂಗಳು ಕೊರಿಯಾ ಗಣರಾಜ್ಯ ವಿರುದ್ಧ ನಡೆಯಲಿರುವ ಡೇವಿಸ್ ಕಪ್ ಅರ್ಹತಾ ಸುತ್ತಿನ ಎರಡನೇ ಸುತ್ತಿನ ಪಂದ್ಯಕ್ಕಾಗಿ ಭಾರತೀಯ ಟೆನಿಸ್ ತಂಡದಲ್ಲಿ ಸೋಮವಾರ ಹೆಸರಿಸಲಾಗಿದೆ. ಸೆಪ್ಟೆಂಬರ್ 18 ಮತ್ತು 19 ರಂದು ಸಿಯೋಲ್ನಲ್ಲಿರುವ ಒಲಿಂಪಿಕ್ ಟೆನಿಸ್ ಸೆಂಟರ್‌ನ ಹಾರ್ಡ್ ಕೋರ್ಟ್‌ಗಳಲ್ಲಿ ಈ ಪಂದ್ಯ ನಡೆಯಲಿದ್ದು, ವಿಜೇತರು ನವೆಂಬರ್‌ನಲ್ಲಿ ಇಟಲಿಯ ಬೊಲೊಗ್ನಾದಲ್ಲಿ ನಡೆಯಲಿರುವ ಪಂದ್ಯಾವಳಿಯ ಅಂತಿಮ 8 ಹಂತಕ್ಕೆ ಮುನ್ನಡೆಯಲಿದ್ದಾರೆ. 235 ನೇ ಶ್ರೇಯಾಂಕದಲ್ಲಿರುವ ಸುಮಿತ್ ನಾಗಲ್, ದಕ್ಷಿಣೇಶ್ವರ ಸುರೇಶ್ ಮತ್ತು ಮನಸ್ ಧಮ್ನೆ ಅವರೊಂದಿಗೆ ಭಾರತದ ಸಿಂಗಲ್ಸ್ ಸವಾಲನ್ನು ಮುನ್ನಡೆಸಲಿದ್ದಾರೆ. ಸುರೇಶ್ 393 ನೇ ಶ್ರೇಯಾಂಕದಲ್ಲಿದ್ದಾರೆ, ಆದರೆ ಭಾರತದ 2ನೇ ಶ್ರೇಯಾಂಕಿತ ಧಮ್ನೆ 362 ನೇ ಸ್ಥಾನದಲ್ಲಿದ್ದಾರೆ





ಮತ್ತು ಡೇವಿಸ್ ಕಪ್ ಟೆನಿಸ್ ತಂಡಕ್ಕೆ ತಮ್ಮ ಮೊದಲ ಕರೆಯನ್ನು ಪಡೆದುಕೊಂಡಿದ್ದಾರೆ. ಡಬಲ್ಸ್‌ನಲ್ಲಿ 28ನೇ ಸ್ಥಾನದಲ್ಲಿರುವ ಭಾಂಬ್ರಿ, 57ನೇ ಸ್ಥಾನದಲ್ಲಿರುವ ಎನ್. ಶ್ರೀರಾಮ್ ಬಾಲಾಜಿ ಅವರೊಂದಿಗೆ ಜೋಡಿ ಸಂಯೋಜನೆಯನ್ನು ರೂಪಿಸುವ ನಿರೀಕ್ಷೆಯಿದೆ. olympics.com ಪ್ರಕಾರ, 2026 ರ ಡೇವಿಸ್ ಕಪ್ ಅರ್ಹತಾ ಸುತ್ತಿನ ಆರಂಭಿಕ ಸುತ್ತಿನಲ್ಲಿ ಬೆಂಗಳೂರಿನಲ್ಲಿ ನೆದರ್ಲೆಂಡ್ಸ್ ತಂಡವನ್ನು 3–2 ಅಂತರದಿಂದ ಸೋಲಿಸಲು ಭಾರತಕ್ಕೆ ಸಹಾಯ ಮಾಡಿದ ಕೋರ್ ಅನ್ನು ತಂಡವು ಉಳಿಸಿಕೊಂಡಿದೆ. ಭಾರತ ಕೊನೆಯ ಬಾರಿಗೆ 2016 ರಲ್ಲಿ ದಕ್ಷಿಣ ಕೊರಿಯಾವನ್ನು ಎದುರಿಸಿತು, ಹುಲ್ಲಿನ ಮೇಲೆ ಆಡಿದ ಏಷ್ಯಾ/ಓಷಿಯಾನಿಯಾ ಗ್ರೂಪ್ I ಟೈನಲ್ಲಿ ಚಂಡೀಗಢದಲ್ಲಿ 4–1 ಅಂತರದಿಂದ ಜಯ ಸಾಧಿಸಿತು.

**ಭಾರತದ ಡೇವಿಸ್ ಕಪ್ ತಂಡ:** ಸುಮಿತ್ ನಾಗಲ್, ಮಾನಸ್ ಧಮ್ನೆ, ದಕ್ಷಿಣೇಶ್ವರ ಸುರೇಶ್, ಯೂಕಿ ಭಾಂಬ್ರಿ, ಎನ್. ಶ್ರೀರಾಮ್ ಬಾಲಾಜಿ.

**ಮೀಸಲು:** ಸಿದ್ಧಾರ್ಥ್ ರಾವತ್; ಹೆಚ್ಚುವರಿ ಮೀಸಲು: ಅರ್ನಾಬ್ ಪಾಪಾರ್ಕರ್.